ಸಂಪುಟ: 06 ಸಂಚಿಕೆ: 79 ಪುಟಗಳು: 08 ಮಂಗಳವಾರ 02 ಜೂನ್ 2026 www.udayavahini.in epaper.udayavahini.in Udaya vahini news Udaya vahini news Udayavahini news you tube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು
ಕುತೂಹಲವೇ ನಮ್ಮ ಬುದ್ಧಿಗೆ ಮೂಲ. ಯಾವುದೇ ಸಂಗತಿಯನ್ನು ಒಪ್ಪಿಕೊಳ್ಳುವ ಮುನ್ನ ಪರಾಮರ್ಶಿಸುವ ರೂಢಿ ಬೆಳೆಸಿಕೊಳ್ಳೋಣ!

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಅತ್ಯುನ್ನತ 'ಡೈಮಂಡ್ ಅವಾರ್ಡ್' ಗೌರವ

• ಉದಯವಾಹಿನಿ, ಬೆಂಗಳೂರು

ಎಸಿಐ ಏಷ್ಯಾ-ಪೆಸಿಫಿಕ್ ಮತ್ತು ಮಧ್ಯಪ್ರಾಚ್ಯ ಸುರಕ್ಷತಾ ಮಾನ್ಯತಾ ಪ್ರಶಸ್ತಿ 2026ರಲ್ಲಿ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಅತ್ಯುನ್ನತ ಗೌರವವಾದ 'ಡೈಮಂಡ್ ಅವಾರ್ಡ್' ನೀಡಿ, ಗೌರವಿಸಲಾಗಿದೆ. ಈ ಪ್ರಶಸ್ತಿ ಸುರಕ್ಷಿತ ಹಾಗೂ ಸ್ಥೈರ್ಯಯುತ ವಿಮಾನ ನಿಲ್ದಾಣ ಕಾರ್ಯಾಚರಣೆಗಳಲ್ಲಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಬೆಂಗಳೂರಿನ ನಾಯಕತ್ವವನ್ನು ಮತ್ತೊಮ್ಮೆ ದೃಢಪಡಿಸಿದೆ. ಎಸಿಐ ಸುರಕ್ಷತಾ ಮಾನ್ಯತಾ ಪ್ರಶಸ್ತಿ, ಸುರಕ್ಷತಾ ಸಂಸ್ಕೃತಿಯನ್ನು ಉತ್ತೇಜಿಸುವ ಹಾಗೂ ಪರಿಣಾಮಕಾರಿ, ಪ್ರಾಯೋಗಿಕ ಮತ್ತು ನವೀನ ಪರಿಹಾರಗಳ ಮೂಲಕ ಸುರಕ್ಷತಾ ನಿರ್ವಹಣೆಯನ್ನು ಬಲಪಡಿಸುವ ವಿಮಾನ ನಿಲ್ದಾಣ ನಿರ್ವಾಹಕರಿಗೆ ನೀಡಲಾಗುತ್ತದೆ. ಈ ಕಾರ್ಯಕ್ರಮದಡಿ 'ಡೈಮಂಡ್ ಅವಾರ್ಡ್' ಅತ್ಯುನ್ನತ ಗೌರವವಾಗಿದೆ.

## ಕಾಂಗ್ರೆಸ್‌ನಲ್ಲಿ ಡ್ರೈವರ್ ಬದಲಾಗಿದ್ದಾರೆ, ಬಸ್, ಎಂಜಿನ್ ಕೆಟ್ಟು ಹೋಗಿದೆ: ಅಶೋಕ್ ವ್ಯಂಗ್ಯ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್‌ನಲ್ಲಿ ಡ್ರೈವರ್ ಬದಲಾಗಿದ್ದಾರೆ ಅಷ್ಟೇ, ಬಸ್, ಎಂಜಿನ್ ಕೆಟ್ಟು ಹೋಗಿದೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ವ್ಯಂಗ್ಯವಾಡಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾಡಿದ ಅವರು, ಈ ಸರ್ಕಾರದಲ್ಲಿ ಡ್ರೈವರ್ ಮಾತ್ರ ಬದಲಾವಣೆ ಆಗಿದ್ದಾರೆ. ಬಸ್ ಮತ್ತು ಎಂಜಿನಿ ಕೆಟ್ಟು ಹೋಗಿದೆ. ಡ್ರೈವರ್ ಬದಲಾದರೇನು? ಕೆಟ್ಟು ಹೋಗಿರೋ ಬಸ್ ಓಡಲು ಸಾಧ್ಯವೇ? ಇದು ಕೆಟ್ಟು ಹೋಗಿರೋ ಗಾಡಿ. ಸಿದ್ದರಾಮಯ್ಯ ಅವರು ಕೆಟ್ಟು ಹೋಗಿರೋ ಗಾಡಿ ಡಿಕೆಶಿಗೆ ಕೊಟ್ಟಿದ್ದಾರೆ. ಸಾಲ ಮಾಡಿ ಡಿಸೇಲ್ ಹಾಕಿಸುವ ಬಸ್ ಅನ್ನ ಸಿದ್ದರಾಮಯ್ಯ ಡಿಕೆಶಿಗೆ ಕೊಟ್ಟಿದ್ದಾರೆ ಎಂದು ಲೇವಡಿ ಮಾಡಿದ್ದಾರೆ. ರಾಜ್ಯದಲ್ಲಿ ಸಿಎಂ ಆಗಿದ್ದ ಸಿದ್ದರಾಮಯ್ಯ ಅವರು ನಾನು ಅಹಿಂದ ನಾಯಕ ಅಂತಿದ್ದರು. ದೇಶದಲ್ಲಿ ನಾನೊಬ್ಬನೇ ಅಹಿಂದ ಸಿಎಂ ಇರೋದು ಅಂತ ಹೇಳ್ತಾ ಇದ್ದರು. ರಾಹುಲ್ ಗಾಂಧಿ ಕಿತಾಪತಿಯಿಂದ ಈಗ ಸ್ಥಾನ ಹೋಗಿದೆ ಎಂದು ಆರೋಪಿಸಿದ್ದಾರೆ. ರಾಹುಲ್ ಗಾಂಧಿಯವರ ಪೂಜ್ಯ ತಂದೆ ರಾಜೀವ್ ಗಾಂಧಿ ಅವರು ವೀರೇಂದ್ರ ಪಾಟೀಲ್‌ರನ್ನ ಕಿತ್ತು ಹಾಕಿದ್ರು. ಇಂದಿರಾ ಗಾಂಧಿ ದೇವರಾಜ್ ಅರಸ್, ಬಂಗಾರಪ್ಪ ಅವರನ್ನ ಕಿತ್ತಾಕಿದ್ರು. ಇದು ಕಾಂಗ್ರೆಸ್ ಕಿತ್ತಾಕಿರೋ ಸಂಸ್ಕೃತಿ. ದೇವರಾಜ್ ಅರಸ್, ಬಂಗಾರಪ್ಪ, ಸಿದ್ದರಾಮಯ್ಯ ಹಿಂದುಳಿದವರು. ಸಮುದಾಯವನ್ನ ಗೋ ಬ್ಯಾಕ್ ಮಾಡ್ತಿದೆ. ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿರೋಧಿ ಆಗಿದೆ ಎಂದು ಕಿಡಿಕಾರಿದ್ದಾರೆ

## ಪರಮೇಶ್ವರ್, ರಾಜಣ್ಣಗೆ ಗೌರವ ಡಾಕ್ಟರೇಟ್ ನೀಡದಿರಲು ತುಮಕೂರು ವಿವಿ ನಿರ್ಧಾರ

• ಉದಯವಾಹಿನಿ, ಬೆಂಗಳೂರು

ತುಮಕೂರು ವಿಶ್ವವಿದ್ಯಾಲಯದ 19ನೇ ಘಟಿಕೋತ್ಸವವು ಜೂನ್ 3ರಂದು ವಿಶ್ವವಿದ್ಯಾಲಯದ ಆವರಣದಲ್ಲಿ ನಡೆಯಲಿದ್ದು, ಈ ಬಾರಿ ಸಕ್ರಿಯ ರಾಜಕಾರಣಿಗಳಿಗೆ ಗೌರವ ಡಾಕ್ಟರೇಟ್ ನೀಡದಿರಲು ವಿವಿಯ ಪರಿಶೀಲನಾ ಸಮಿತಿ ಮಹತ್ವದ ನಿರ್ಧಾರ ಕೈಗೊಂಡಿದೆ. ಈ ಹಿನ್ನೆಲೆ ಮಾಜಿ ಸಚಿವರಾದ ಡಾ. ಜಿ. ಪರಮೇಶ್ವರ್ ಹಾಗೂ ಕೆ. ಎನ್. ರಾಜಣ್ಣಗೆ ಗೌರವ ಡಾಕ್ಟರೇಟ್ ನೀಡದಿರಲು ನಿರ್ಧರಿಸಲಾಗಿದೆ ಎಂದು ತುಮಕೂರು ವಿವಿ ಕುಲಪತಿ ಪ್ರೊ. ಎಂ. ವೆಂಕಟೇಶ್ವರಲು ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕುಲಪತಿ ಪ್ರೊ. ಎಂ. ವೆಂಕಟೇಶ್ವರಲು, ತುಮಕೂರು ವಿಶ್ವವಿದ್ಯಾಲಯಕ್ಕೆ ಡಾ. ಜಿ. ಪರಮೇಶ್ವರ್ ಹಾಗೂ ಕೆ. ಎನ್. ರಾಜಣ್ಣ ಅವರ ಕೊಡುಗೆ ತುಂಬಾನೇ ಇದೆ. ಇಬ್ಬರಿಗೂ ಗೌರವ ಡಾಕ್ಟರೇಟ್ ನೀಡಬೇಕೆಂಬ ಆಶಯ ನಮಗಿತ್ತು. ಈ ನಿಟ್ಟಿನಲ್ಲಿ ನಾವು ಇಬ್ಬರ ಹೆಸರುಗಳನ್ನು ಸೇರಿಸಿದ್ದೆವು.

## ಕಾಲೇಜು ಶಿಕ್ಷಣದಲ್ಲಿ ತಂತ್ರಜ್ಞಾನ ಕ್ರಾಂತಿ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಶಿಕ್ಷಣ ಕ್ಷೇತ್ರದಲ್ಲಿ ಮಹತ್ತರ ತಂತ್ರಜ್ಞಾನ ಕ್ರಾಂತಿಯೊಂದು ಆರಂಭವಾಗಿದ್ದು, ಪದವಿಪೂರ್ವ ಕಾಲೇಜುಗಳ ವಿದ್ಯಾರ್ಥಿಗಳ ಹಾಜರಾತಿ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಆಧುನೀಕರಿಸಲು ಪಿಯು ಬೋರ್ಡ್ ಭಾರಿ ಸಿದ್ಧತೆ ನಡೆಸಿದೆ. ಸಾಂಪ್ರದಾಯಿಕವಾಗಿ ಇಷ್ಟು ದಿನ ರಿಜಿಸ್ಟರ್‌ಗಳಲ್ಲಿ ಸಹಿ ಅಥವಾ ಹೆಸರು ಕೂಗುವ ಮೂಲಕ ಪಡೆಯುತ್ತಿದ್ದ ಹಾಜರಾತಿ ಇನ್ನು ನೆನಪಾಗಲಿದೆ. ಇದರ ಸ್ಥಾನದಲ್ಲಿ ಕೃತಕ ಬುದ್ಧಿಮತ್ತೆ ಆಧಾರಿತ ಮುಖ ಚಹರೆ ಗುರುತಿಸುವ ಅತ್ಯಾಧುನಿಕ ತಂತ್ರಜ್ಞಾನವನ್ನು ಅಳವಡಿಸಲು ಸರ್ಕಾರ ಮುಂದಾಗಿದೆ. ಈ ನೂತನ ಯೋಜನೆಯಡಿ ವಿದ್ಯಾರ್ಥಿಗಳು ತರಗತಿ ಕೊಠಡಿ ಪ್ರವೇಶಿಸುತ್ತಿದ್ದಂತೆ ಅಥವಾ ನಿಗದಿತ ಡಿಜಿಟಲ್ ಪರದೆಯ ಮುಂದೆ ನಿಂತಾಗ ಅವರ ಮುಖದ ಚಹರೆಯನ್ನು ತಂತ್ರಜ್ಞಾನವು ಸ್ವಯಂಚಾಲಿತವಾಗಿ ಗುರುತಿಸಲಿದೆ.

# ನಾಯಕತ್ವ ಆಯ್ತು ಈಗ ಸಂಪುಟ ಸರ್ಕಸ್



ಕೈ ಪಾಳಯದಲ್ಲಿ ಕೋಲಾಹಲ

ಸರ್ಕಾರ ರಚನೆಯ ಸರ್ಕಸ್ ಶುರು

## ಕೈ ಹೈಕಮಾಂಡ್ ಅಂಗಳಕ್ಕೆ

## ದೆಹಲಿಯಲ್ಲಿ ಸದ್ದು ಮಾಡಿದ ಡಿಕೆ ಶಿವಕುಮಾರ್ ಹೇಳಿಕೆ!

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಕಾರಣದಲ್ಲಿ ಅಧಿಕಾರ ಹಸ್ತಾಂತರ ಪ್ರಕ್ರಿಯೆ ಸಲೀಸಾಗಿ ಆಗಿದೆ. ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಯಾವುದೇ ಗೊಂದಲ, ಗಲಾಟೆ ಪವರ್ ಶೇರ್ ಮಾಡಿಕೊಂಡಿದ್ದಾರೆ. ಕುರ್ಚಿ ಬದಲಾಗುವ ಮೊದಲು ಹಾಗೂ ಬಳಿಕವೂ ತಾವು ಜೋಡೆತ್ತು ಅಂತ್ಲೇ ಬಿಂಬಿಸಿಕೊಳ್ತಿದ್ದಾರೆ. ಆದ್ರೆ ಅಧಿಕಾರ ಹಸ್ತಾಂತರದ ಕಗ್ಗಂಟು ಬಿಡಿಸುವಲ್ಲಿ ಯಶಸ್ವಿಯಾದ ಹೈಕಮಾಂಡ್‌ಗೆ ಈಗ ಸರ್ಕಾರ ರಚನೆಯ ಸರ್ಕಸ್ ಶುರುವಾಗಿದೆ. **ಹೈಕಮಾಂಡ್ ಕೈಯಲ್ಲಿ ಇನ್ ಅಂಡ್ ಔಟ್ ಪಟ್ಟಿ:** ಈಗಾಗಲೇ ಇಬ್ಬರೂ ನಾಯಕರು ತಮ್ಮದೇ ಆದ ಪ್ರತ್ಯೇಕ ಪಟ್ಟಿಗಳನ್ನು ಹೈಕಮಾಂಡ್ ಕೈಯಲ್ಲಿಟ್ಟು ಅದರಲ್ಲಿ ಕೆಲವರಿಗೆ ಕೊಕ್ ಕೊಟ್ಟು, ಮತ್ತೆ ಹಲವರಿಗೆ ಅವಕಾಶ ಕಲ್ಪಿಸಲಾಗಿದೆ. ಮೂಲಗಳ ಪ್ರಕಾರ 20ಕ್ಕೂ ಹೆಚ್ಚು ಸಚಿವ ಸ್ಥಾನಗಳು ತೆರವಾಗಲಿವೆ. ಆ ಜಾಗಕ್ಕೆ ಯಾರನ್ನು ಸೇರಿಸಬೇಕು ಎನ್ನುವುದು ಈಗಿರುವ ಸವಾಲು. ಈ ಚೌಕಾಸಿಗಾಗಿಯೇ ಸೋಮವಾರ ಇಬ್ಬರೂ ನಾಯಕರೊಂದಿಗೆ ಹೈಕಮಾಂಡ್ ಸರಣಿ ಸಭೆಗಳನ್ನು ನಡೆಸಲಿದೆ. ಅನುಭವಿಗಳು, ಹೊಸಬರು, ಸಮುದಾಯಗಳು, ಬಣಗಳ ಲೆಕ್ಕಾಚಾರದ ಜತೆಗೆ ಪ್ರಾದೇಶಿಕ ಸಮತೋಲನ ಕಾಯ್ದುಕೊಳ್ಳಬೇಕಿದೆ. ಇದೆಲ್ಲವನ್ನೂ ಗಮನದಲ್ಲಿಟ್ಟುಕೊಂಡು ಉಪಮುಖ್ಯಮಂತ್ರಿ ಹುದ್ದೆಗಳನ್ನು ಸೃಷ್ಟಿಸಬೇಕೇ ಅಥವಾ ಬೇಡವೇ ಎಂಬ ಚರ್ಚೆ ದೆಹಲಿಯಲ್ಲಿ ನಡೆಯಲಿದೆ. ಒಂದು ವೇಳೆ ಡಿಸಿಎಂ ಹುದ್ದೆ ಸೃಷ್ಟಿಸುವುದಾದರೆ ಎರಡು ಅಥವಾ ನಾಲ್ಕು ಸ್ಥಾನಗಳನ್ನು ನೀಡಬೇಕೇ ಎಂಬ ಬಗ್ಗೆಯೂ ಗೊಂದಲವಿದೆ. ಸದ್ಯ ಒಕ್ಕಲಿಗ ಸಮುದಾಯಕ್ಕೆ ಸಿಎಂ ಸ್ಥಾನ ಸಿಗುತ್ತಿರುವ ಹಿನ್ನೆಲೆ ಉಳಿದ ಪ್ರಮುಖ ಸಮುದಾಯಗಳಿಗೆ ಡಿಸಿಎಂ ಸ್ಥಾನ ನೀಡುವ ಸಾಧ್ಯತೆ ಇದೆ. ನಮ್ಮದೇನೂ ಇಲ್ಲ, ಹೈಕಮಾಂಡ್

ಈ ಮಧ್ಯೆ, ಭಾನುವಾರ ಇಡೀ ದಿನ ಭೇಟಿಯಾದ ಸಚಿವಾಕಾಂಕ್ಷಿಗಳು ಸಂಪುಟ ನೂತನ ಶಾಸಕಾಂಗ ಪಕ್ಷದ ನಾಯಕನಿಗೆ ಶುಭ ತಮ್ಮ ಸಣ್ಣ ಪ್ರೊಫೈಲ್ ಒಪ್ಪಿಸಿ ಬರುತ್ತಿರುವುದು ನಿರ್ಗಮಿತ ಸಿಎಂ ಮೂಲಕ ಒತ್ತಡ ತಂತ್ರ ಅವರೆಲ್ಲರಿಗೂ ಡಿಸಿಎಂ, ಹೈಕಮಾಂಡ್‌ನತ್ತ ಸದಾಶಿವನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ನಾಗರಿಕರಿಗೆ ತೊಂದರೆಯಾಗಬಾರದು ಎಂಬ ಕಾರಣಕ್ಕೆ ಲೋಕಭವನದಲ್ಲಿ ಪ್ರಮಾಣವಚನ ಕಾರ್ಯಕ್ರಮ ಮಾಡಲಾಗುವುದು. ಆದರೆ, ಸಚಿವರು ಯಾರ್ಯಾರು ಪ್ರಮಾಣವಚನ ಸ್ವೀಕರಿಸುತ್ತಾರೆ ಎಂಬ ಬಗ್ಗೆ ನನಗೆ ಗೊತ್ತಿಲ್ಲ. ಪಕ್ಷದ ಹೈಕಮಾಂಡ್ ತೀರ್ಮಾನ ಮಾಡಲಿದೆ. ಈ ಬಗ್ಗೆ ನಾನು ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು. ರಾಜ್ಯ ನಾಯಕರು ಹೈಕಮಾಂಡ್ ಕಡೆಗೆ ಕೈತೋರಿಸಿದ ಹಿನ್ನೆಲೆಯಲ್ಲಿ ಆಕಾಂಕ್ಷಿಗಳು ದೆಹಲಿಗೆ ತೆರಳುತ್ತಿದ್ದಾರೆ. ಈಗಾಗಲೇ ಮಾಜಿ ಸಚಿವ ಡಾ.ಎಂ.ಸಿ. ಸುಧಾಕರ್ ಅವರು ಭಾನುವಾರವೇ ದಿಲ್ಲಿಗೆ ತೆರಳಿದ್ದು, ಇನ್ನೂ ಸುಮಾರು 20ಕ್ಕೂ ಹೆಚ್ಚು ಶಾಸಕರು ಪ್ರಯಾಣ ಬೆಳೆಸಿದ್ದಾರೆ.

ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರನ್ನು ಸೇರ್ಪಡೆಗೆ ಪ್ರಭಾವ ಬೀರಲು ಯತ್ನಿಸಿದರು. ಕೋರುವ ನೆಪದಲ್ಲಿ ಹೂಗುಚ್ಛ ನೀಡಿ, ಕಂಡುಬಂತು. ಇನ್ನು ಹಲವರು ಅನುಸರಿಸುತ್ತಿದ್ದಾರೆ. ಕೈತೋರಿಸಿದ್ದಾರೆ. ಶಿವಕುಮಾರ್

### ಸಿಎಂ ಡಿಕೆಶಿ ಆಹ್ವಾನ

ಜೂನ್ 3ರಂದು ಹೊಸ ಸರ್ಕಾರ ಅಸ್ತಿತ್ವಕ್ಕೆ ಬರಲಿದ್ದು, ಅಂದು ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಆಗಮಿಸುವಂತೆ ನಿಯೋಜಿತ ಸಿಎಂ ಡಿ.ಕೆ.ಶಿವಕುಮಾರ್ ಅವರು ವರಿಷ್ಠರಿಗೆ ಆಹ್ವಾನ ನೀಡಲಿದ್ದಾರೆ. ಪಕ್ಷದ ಅಧಿನಾಯಕ ರಾಹುಲ್ ಗಾಂಧಿ, ಸಂಸದೆ ಪ್ರಿಯಾಂಕಾ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ ಹಾಗೂ ರಣದೀಪ್‌ಸಿಂಗ್ ಸುರ್ಜೇವಾಲ ಅವರಿಗೆ ಪ್ರಮಾಣವಚನದಲ್ಲಿ ಭಾಗವಹಿಸುವಂತೆ ಶಿವಕುಮಾರ್ ಆಹ್ವಾನ ನೀಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

### ಸಿದ್ದರಾಮಯ್ಯ ಪುತ್ರನಿಗೆ ಮಂತ್ರಿ ಸ್ಥಾನ ಫಿಕ್ಸ್



ಡಿ.ಕೆ. ಶಿವಕುಮಾರ್ ಅವರು ಇದೇ ಜೂನ್ 03ರಂದು ಸಂಜೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಆದ್ರೆ, ಡಿಕೆ ಶಿವಕುಮಾರ್ ಜೊತೆ ಕೆಲವರು ಸಚಿವರಾಗಿ ಅಧಿಕಾರ ಸ್ವೀಕಾರ ಮಾಡಲಿದ್ದಾರೆ. ಹೀಗಾಗಿ ಸಚಿವರು ಆಗುವ ಶಾಸಕರು ಯಾರ್ಯಾರು ಎನ್ನುವುದೇ ಕುತೂಹಲ ಮೂಡಿಸಿದೆ. ಇನ್ನೊಂದೆಡೆ ಮಂತ್ರಿ ಸ್ಥಾನಕ್ಕೆ ಶಾಸಕರು ಭರ್ಜರಿ ಲಾಬಿ ನಡೆಸಿದ್ದಾರೆ.

ಹೌದು.. ಬೀದರ್‌ನಿಂದ ಹಿಡಿದು ಚಾಮರಾಜನಗರದವರೆಗೆ ಮಂತ್ರಿಗಿರಿಗಾಗಿ ಪೈಪೋಟಿ ಶುರುವಾಗಿದೆ. ಸಿದ್ದರಾಮಯ್ಯರ ಸಂಪುಟದಲ್ಲಿ ಇದ್ದ, ಕೆಲವರಿಗೆ ಪಟ್ಟ ಕೈತಪ್ಪಿ ಹೋಗೋ ಆತಂಕವೂ ಕಾಡುತ್ತಿದೆ. ಹೀಗಾಗಿ ಅನೇಕರು ದೆಹಲಿಗೆ ದಂಡಯಾತ್ರೆ ನಡೆಸುತ್ತಿದ್ದಾರೆ. ಇದರ ನಡುವೆ ಸಿದ್ದರಾಮಯ್ಯ ಪುತ್ರ ಯತೀಂದ್ರ ಅವರಿಗೆ ಸಚಿವ ಸ್ಥಾನ ಬಹುತೇಕ ಫಿಕ್ಸ್ ಆಗಿದೆ ಎಂದು ತಿಳಿದುಬಂದಿದೆ. ಈ ಬಗ್ಗೆ ಅವರೇ ಪ್ರತಿಕ್ರಿಯಿಸಿ, ಹೈಕಮಾಂಡ್ ಕೊಟ್ಟ ಭರವಸೆಯನ್ನು ಬಹಿರಂಗಪಡಿಸಿದ್ದಾರೆ.



### ಕೋಲಾರ ಜಿಲ್ಲೆಯ ಶಾಸಕರಿಂದ ಲಾಬಿ

ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ಜೂನ್3ರಂದು ನೂತನ ಸಿಎಂ ಆಗಿ ಡಿಕೆ ಶಿವಕುಮಾರ್ ಅಧಿಕಾರ ಸ್ವೀಕರಿಸಿಲಿದ್ದಾರೆ. ಈ ನಡುವೆ ಡಿಕೆ ಶಿವಕುಮಾರ್ ಸಚಿವ ಸಂಪುಟದಲ್ಲಿ ಸಚಿವ ಸ್ಥಾನಕ್ಕಾಗಿ ಲಾಬಿ ನಡೆದಿದ್ದು, ಈಗಾಗಲೇ ಜಿಲ್ಲೆಯ ಶಾಸಕರು ದೆಹಲಿಗೆ ತೆರಳಿದ್ದಾರೆ. ಆದರೆ ಇತ್ತ ಅಭಿಮಾನಿಗಳು ಮತ್ತು ಬೆಂಬಲಿಗರು ಇನ್ನಿಲ್ಲದ ಸರ್ಕಸ್ ಮಾಡುತ್ತಿದ್ದಾರೆ.

ಹುಟ್ಟುಹಬ್ಬ ಹಿನ್ನೆಲೆ ವಿಶೇಷ ಪೂಜೆ ಸಲ್ಲಿಸಿ, ಬಳಿಕ ನಾರಾಯಣಸ್ವಾಮಿ ಅವರಿಗೆ ಸಚಿವ ಸ್ಥಾನ ಸಿಗಲೆಂದು ಬಂಗಾರಪೇಟೆಯ ಶ್ರೀಕೋದಂಡರಾಮ ಸ್ವಾಮಿ ದೇವಾಲಯದಲ್ಲಿ ವಿಶೇಷ ಅಭಿಷೇಕ, ಪೂಜೆ ಸಲ್ಲಿಸಲಾಗಿದೆ. ನಂತರ ದೇವಾಲಯ ಎದುರು ಅರೆ ಬೆತ್ತಲೆಯಾಗಿ ಮಂಡಿಯೂರಿ ಕುಳಿತು ದೇವಾಲಯದ ಮೆಟ್ಟಿಲುಗಳನ್ನು ಹತ್ತುವ ಸಚಿವ ಸ್ಥಾನ ಸಿಗಲೆಂದು ದೇವರಲ್ಲಿ ಪ್ರಾರ್ಥನೆ ಸಲ್ಲಿಸಿದರು. ಅಲ್ಲದೆ ದೇವಾಲಯದ ಆವರಣದಲ್ಲಿ ಉರುಳು ಸೇವೆ ಕೂಡ ಮಾಡಿದರು.

**1** ಸಿಎಂ ಆಗಿ ಡಿಕೆ ಶಿವಕುಮಾರ್ ಪ್ರಮಾಣ ವಚನ ಸ್ವೀಕಾರಕ್ಕೂ ಮೊದಲೇ ಸಂಪುಟ ಆಕಾಂಕ್ಷಿಗಳ ಕಸರತ್ತು

**2** ಶಾಸಕ ಬಿ ಆರ್ ಪಾಟೀಲರಿಂದ ಸುದೀರ್ಘ ಪತ್ರ

**3** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಹಮತ ನೀಡುತ್ತಾರೆ ಎಂಬ ನಿರೀಕ್ಷೆ

ಮಂತ್ರಿ ಸ್ಥಾನ ಕೊಡಿಸುವುದು ಸಿದ್ದರಾಮಯ್ಯ ಜವಾಬ್ದಾರಿ: ಬಿ ಆರ್ ಪಾಟೀಲ್ ಪತ್ರ

### ಕರ್ನಾಟಕದ ಜನ ಬದಲಾವಣೆಗೆ ಬಹಳ ಸಮಯದಿಂದ ಕಾಯುತ್ತಿದ್ದರು

### ಹೈಕಮಾಂಡ್ ಕೈ ಸೇರಿದ ಮೊದಲ ಹಂತದ ಪಟ್ಟಿ

ರಾಜ್ಯ ರಾಜಕಾರಣದಲ್ಲಿ ಅಧಿಕಾರ ಹಸ್ತಾಂತರ ಪ್ರಕ್ರಿಯೆ ಸಲೀಸಾಗಿ ಆಗಿದೆ. ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಯಾವುದೇ ಗೊಂದಲ, ಗಲಾಟೆ ಪವರ್ ಶೇರ್ ಮಾಡಿಕೊಂಡಿದ್ದಾರೆ. ಕುರ್ಚಿ ಬದಲಾಗುವ ಮೊದಲು ಹಾಗೂ ಬಳಿಕವೂ ತಾವು ಜೋಡೆತ್ತು ಅಂತ್ಲೇ ಬಿಂಬಿಸಿಕೊಳ್ತಿದ್ದಾರೆ. ಆದ್ರೆ ಅಧಿಕಾರ ಹಸ್ತಾಂತರದ ಕಗ್ಗಂಟು ಬಿಡಿಸುವಲ್ಲಿ ಯಶಸ್ವಿಯಾದ ಹೈಕಮಾಂಡ್‌ಗೆ ಈಗ ಸರ್ಕಾರ ರಚನೆಯ ಸರ್ಕಸ್ ಶುರುವಾಗಿದೆ. ಸಚಿವ ಸಂಪುಟದಲ್ಲಿ ಯಾರನ್ನ ಸೇರಿಸ್ಬೇಕು ಸಿದ್ದರಾಮಯ್ಯ ಸಂಪುಟದಲ್ಲಿದ್ದ ಇನ್ಯಾರನ್ನ ಕೈಬಿಡಬೇಕು ಅನ್ನೋ ಚರ್ಚೆ ದೆಹಲಿ ಮಟ್ಟದಲ್ಲಿ ನಡೀತಿದೆ. ಹೀಗಾಗಿ ನಮಗೂ ಒಂದು ಅವಕಾಶ ಸಿಗ್ಲಿ ಎಂದು ಹೊಸಬರು ಟವಲ್ ಹಾಕಿದ್ರೆ, ಸಿದ್ದರಾಮಯ್ಯರ ಸಂಪುಟದಲ್ಲಿದ್ದ ನಾಯಕರು ದೆಹಲಿ ಪರೇಡ್ ಶುರು ಮಾಡಿದ್ದಾರೆ. ಈ ಎಲ್ಲಾ ಬೆಳವಣಿಗೆ ನಡುವೆ ಮೊದಲ ಹಂತದ ಸಂಭಾವ್ಯ ಸಚಿವರ ಪಟ್ಟಿ ಹೈಕಮಾಂಡ್ ಕೈಸೇರಿದೆ.

ಡಿಕೆ ಶಿವಕುಮಾರ್ ಹಾಗೂ ಸಿದ್ದರಾಮಯ್ಯ 10 ರಿಂದ 12 ಸಚಿವರ ಮೊದಲ ಪಟ್ಟಿಯನ್ನು ಕೆ.ಸಿ.ವೇಣುಗೋಪಾಲ್ ಅವರಿಗೆ ನೀಡಿದ್ದು, ಈ ಪಟ್ಟಿಯನ್ನು ಕೆ.ಸಿ.ವೇಣುಗೋಪಾಲ್, ಸುರ್ಜೇವಾಲ ಪರಿಶೀಲಿಸಿ ನಂತರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ರವಾನಿಸಲಿದ್ದಾರೆ.

ಇನ್ನು ಸಂಭಾವ್ಯ ಸಚಿವ ಪಟ್ಟಿಯನ್ನು ನೋಡುವುದಾದರೆ, ಡಿ.ಕೆ.ಶಿವಕುಮಾರ್, ಯು.ಟಿ.ಖಾದರ್, ಸತೀಶ್ ಜಾರಕಿಹೊಳಿ, ಡಾ.ಜಿ.ಪರಮೇಶ್ವರ್, ಪ್ರಿಯಾಂಕ್ ಖರ್ಗೆ, ರಾಮಲಿಂಗಾರೆಡ್ಡಿ, ಡಾ.ಯತೀಂದ್ರ ಅಥವಾ ಭೈರತಿ ಸುರೇಶ್, ಕೆ.ಜೆ. ಜಾರ್ಜ್, ಕೃಷ್ಣ ಭೈರೇಗೌಡ, ಎಂ.ಬಿ.ಪಾಟೀಲ್ ಅಥವಾ ಈಶ್ವರ ಖಂಡ್ರೆ. ಹೀಗೆ 10 ರಿಂದ 12 ಸಚಿವರು ಜೂನ್ 3ರಂದೇ ಡಿಕೆ ಶಿವಕುಮಾರ್ ಜೊತೆ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆಗಳಿವೆ.

## ಬೆಂಗಳೂರಿನಲ್ಲಿ 5 ಸಾವಿರ ಲಂಚ ಪಡೆಯುತ್ತಿದ್ದಾಗಲೇ ಲೋಕಾಯುಕ್ತ ಅಧಿಕಾರಿಗಳಿಗೆ ಸಿಕ್ಕಿಬಿದ್ದ ಸರ್ಕಾರಿ ವಕೀಲೆ!

• ಉದಯವಾಹಿನಿ, ಬೆಂಗಳೂರು

ಜಾಮೀನು ಅರ್ಜಿಗೆ ತಕರಾರು ಅರ್ಜಿ ಸಲ್ಲಿಸಲು ದೂರುದಾರರಿಂದ 5 ಸಾವಿರ ಲಂಚ ಪಡೆಯುವ ವೇಳೆ ಮಹಿಳಾ ಪಬ್ಲಿಕ್ ಪ್ರಾಸಿಕ್ಯೂಟರ್, ಲೋಕಾಯುಕ್ತ ಅಧಿಕಾರಿಗಳಿಗೆ ಸಿಕ್ಕಿಬಿದ್ದರುವ ಘಟನೆ ನಗರದಲ್ಲಿ ನಡೆದಿದೆ. ನಗರದ ಸಿಸಿಹೆಚ್-54ರ ನ್ಯಾಯಾಲಯದ ಎಸ್‌ಪಿಪಿ ಸವಿತಾ ನವೀನ್ ಪಾಟೀಲ್ ಎಂಬುವವರನ್ನು ಲೋಕಾಯುಕ್ತ ಅಧಿಕಾರಿಗಳು ಬಂಧಿಸಿ, ವಿಚಾರಣೆ ನಡೆಸುತ್ತಿದ್ದಾರೆ.

ದೂರುದಾರರಿಂದ 5 ಸಾವಿರ ರೂಪಾಯಿ ಲಂಚ ಪಡೆಯುವಾಗ ವಕೀಲೆ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ. ಅತ್ಯಾಚಾರ ಪ್ರಕರಣ ಸಂಬಂಧ ಆರೋಪಿ ವಿರುದ್ಧ ಚೆನ್ನಮ್ಮನಕೆರೆ ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಇತ್ತೀಚೆಗೆ ಜಾಮೀನು ಕೋರಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದ. ಈ ಬಗ್ಗೆ ಆಕ್ಷೇಪಣೆ ಸಲ್ಲಿಸಲು ಎಸ್‌ಪಿಪಿಗೆ ಕೋರ್ಟ್ ತಿಳಿಸಿತ್ತು. ಪ್ರಕರಣದ ವಿಚಾರಣೆ ಮುಂದುವರಿಸಲು ಸಂತ್ರಸ್ತೆ ಬಳಿ ಸವಿತಾ ಅವರು ಲಂಚ ಕೇಳಿದ್ದರು. ಟೈಪಿಂಗ್ ಸೇರಿ ಇನ್ನಿತರ ಖರ್ಚಿಗಾಗಿ 5 ಸಾವಿರ ನೀಡುವಂತೆ ಬೇಡಿಕೆಯಿಟ್ಟಿದ್ದರು. ಈ ಸಂಬಂಧ ಸಂತ್ರಸ್ತೆ ಪರವಾಗಿ ಮಂಜುನಾಥ್ ಎಂಬುವರು ನೀಡಿದ ದೂರಿನ ಮೇರೆಗೆ ಲೋಕಾಯುಕ್ತ ಡಿವೈಎಸ್ಪಿ ಬ್ರಿಜೇಶ್ ಮ್ಯಾಥ್ಯೂ ನೇತೃತ್ವದಲ್ಲಿ ಇನ್‌ಸ್ಪೆಕ್ಟರ್ ಶ್ರೀಕಾಂತ್ ತಂಡವು ಕಾರ್ಯಾಚರಣೆ ನಡೆಸಿ ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಕರಣ ಸಂಬಂಧ ಸಾಮಾಜಿಕ ಕಾರ್ಯಕರ್ತ ಸುಭಾಷ್ ಎಂಬುವರು ಮಾತನಾಡಿ, ಜ್ಯೋತಿಷಿಯೊಬ್ಬರು ಮಹಿಳೆ ಮೇಲೆ ಅತ್ಯಾಚಾರವೆಸಗಿದ ಆರೋಪದಡಿ ಕೆಲ ದಿನಗಳ ಹಿಂದೆ ಚೆನ್ನಮ್ಮನಕೆರೆ ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಇತ್ತೀಚೆಗೆ ಜ್ಯೋತಿಷಿಯೊಬ್ಬರು ಜಾಮೀನಿಗಾಗಿ ಅರ್ಜಿ ಸಲ್ಲಿಸಿದ್ದರು. ಇದಕ್ಕೆ ಆಕ್ಷೇಪಣೆ ಸಲ್ಲಿಸಲು ಹಾಗೂ ನ್ಯಾಯಾಲಯದ ಮುಂದಿನ ವಿಚಾರಣೆ ಮುನ್ನಡೆಸಲು ಎಸ್‌ಪಿಪಿ ಕೈ ಸನ್ನೆಯಿಂದ 5 ಸಾವಿರ ನೀಡುವಂತೆ ಡಿಮ್ಯಾಂಡ್ ಮಾಡಿದ್ದರು.

## ದಕ್ಷಿಣ ಪಾಲಿಕೆ ಕಂದಾಯ ಪರೀವಿಕ್ಷಕರು, ಕಂದಾಯ ಮೌಲ್ಯ ಮಾಪಕರು ಕಾನೂನು ಬಾಹೀರ ವರ್ಗಾವಣೆ ಪಂಚ ಪಾಲಿಕೆ ಬಂದ್ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು:




ಮಾನ್ಯ ಆಯುಕ್ತರು ದಕ್ಷಿಣ ನಗರ ಪಾಲಿಕೆ ಬೆಂಗಳೂರು ಕಂದಾಯ ಇಲಾಖೆಯ ಕಂದಾಯ ಪರಿವೀಕ್ಷಕರು ಮತ್ತು ಕಂದಾಯ ಮೌಲ್ಯಮಾಪಕರು ರವರನ್ನು ಕಾನೂನು ಬಾಹೀರವಾಗಿ ವರ್ಗಾವಣೆ ಮಾಡಿರುವ ಆದೇಶವನ್ನು ಕೂಡಲೇ ಹಿಂಪಡೆಯಬೇಕು ಎಂದು ಜಿಬಿಎ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಆಯುಕ್ತರಿಗೆ ಮನವಿ ಪತ್ರ ಸಲ್ಲಿಸಿ, ಒತ್ತಾಯಿಸಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ದಕ್ಷಿಣ ನಗರ ಪಾಲಿಕೆ ವಲಯ -2 ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಂದಾಯ ಮೌಲ್ಯ ಮಾಪಕರು ಮತ್ತು ಕಂದಾಯ ಪರಿವೀಕ್ಷಕರು ರವರನ್ನು ಉಲ್ಲೇಖ (1) ರ ರೀತಿ ವರ್ಗಾವಣೆ ಮಾಡಿರುವುದು ಕಾನೂನು ಬಾಹೀರವಾಗಿರುತ್ತದೆ. ಆದ್ದರಿಂದ ಕೂಡಲೇ ಸದರಿ ಆದೇಶವನ್ನು ಹಿಂಪಡೆಯಲು ಕೋರಿದೆ.

ತಪ್ಪಿದ್ದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪಂಚ ಪಾಲಿಕೆಯ ಎಲ್ಲಾ ಕೆಲಸ ಕಾರ್ಯಗಳನ್ನು ಸ್ಥಗಿತಗೊಳಿಸಿ ನ್ಯಾಯಕ್ಕಾಗಿ ಹೋರಾಟವನ್ನು ಹಮ್ಮಿಕೊಳ್ಳಲಾಗುವುದೆಂದು ಈ ಮೂಲಕ ತಿಳಿಯಪಡಿಸಲಾಗಿದೆ. ಇದಕ್ಕೆ ಕಾನೂನು ಬಾಹೀರವಾಗಿ ವರ್ಗಾವಣೆ ಆದೇಶ ಹೊರಡಿಸಿರುವ ಜಂಟಿ ಆಯುಕ್ತರೇ ಕಾರಣ ಕರ್ತರಾಗಿರುತ್ತಾರೆ ಎಂದು ಈ ಮೂಲಕ ತಿಳಿಯಪಡಿಸಲಾಗುತ್ತಿದೆ ಸೂಕ್ತ ಕ್ರಮ ಕೈಗೊಂಡು ವರ್ಗಾವಣೆಯನ್ನು ರದ್ದು ಮಾಡಬೇಕು ಎಂದು ತಿಳಿಸಿದರು.


# ಆಶಿವಮೊಗ್ಗ ಜಿಲ್ಲೆ ಪಡಿತರ ವಿತರಕರ ಸಂಘದಿಂದ ರಾಜ್ಯಾಧ್ಯಕ್ಷ ಕೃಷ್ಣಪ್ಪ ಅವರ ಅದ್ದೂರಿ ಹುಟ್ಟುಹಬ್ಬ ಸಂಭ್ರಮ

ವರದಿ ಉಮೇಶ್ ಬಾಣಾವರ

• ಉದಯವಾಹಿನಿ ಶಿವಮೊಗ್ಗ

ರಾಜ್ಯದ ಎಲ್ಲಾ ಜಿಲ್ಲೆಯ ಪಡಿತರ ವಿತರಕರ ಸಂಘಟನೆಯ ಜಿಲ್ಲೆಯ ತಾಲ್ಲೂಕು ಪದಾಧಿಕಾರಿಗಳು ಇಂದು ಶಿವಮೊಗ್ಗಕ್ಕೆ ಆಗಮಿಸಿ ನಗರದ ಪ್ರವಾಸಿ ಮಂದಿರದಲ್ಲಿ ರಾಜ್ಯಮಟ್ಟದ ಪಡಿತರ ವಿತರಣೆಯ ಅವ್ಯವಸ್ಥೆ ಮತ್ತು ಕುಂದು ಕೊರತೆಯ ಬಗ್ಗೆ ಸುದೀರ್ಘವಾಗಿ ಚರ್ಚಿಸಿ ರಾಜ್ಯಾಧ್ಯಕ್ಷ ಕೃಷ್ಣಪ್ಪನವರ ಗಮನ ಸೆಳೆದರು .

ರಾಜ್ಯ ಪ್ರಧಾನ ಕಾರ್ಯದರ್ಶಿ ಚನ್ನಕೇಶವ ಗೌಡ ಮತ್ತು ರಾಜ್ಯ ಕಾರ್ಯಾಧ್ಯಕ್ಷ ತಾಯಣ್ಣ ಮಾತನಾಡಿ ಈ ತಿಂಗಳು ಪಡಿತರ ವಿತರಕರಿಗೆ ಸರ್ವರ್ ಸಮಸ್ಯೆಯಿಂದ ತೊಂದರೆ ಉಂಟಾಗಿದ್ದು ನಿಜ 25 ನೇ ತಾರೀಕು ನಂತರ ರಾಜ್ಯಾಧ್ಯಕ್ಷರು ನಿರಂತರ ಅಧಿಕಾರಿಗಳು ಸಚಿವರು ಮತ್ತು ಆಹಾರ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳೊಂದಿಗೆ ಸಂಪರ್ಕದಲ್ಲಿದ್ದುಕೊಂಡು ಸರ್ವರ ಸರಿಪಡಿಸುವಲ್ಲಿ ಶ್ರಮವಹಿಸಿದ್ದಾರೆ ಇದಕ್ಕಾಗಿ ನಾವು ರಾಜ್ಯದ ಎಲ್ಲಾ ಪಡಿತರ ವಿತರಕರ ಪರವಾಗಿ ರಾಜ್ಯಾಧ್ಯಕ್ಷ ಕೃಷ್ಣಪ್ಪನವರಿಗೆ ನಾವು ಬೆಂಬಲವನ್ನು ವ್ಯಕ್ತಪಡಿಸಬೇಕಾಗಿದೆ ಎಂದರು. ಶಿವಮೊಗ್ಗ ಗ್ರಾಮಾಂತರ ಹಾಗೂ ಶಿವಮೊಗ್ಗ ಜಿಲ್ಲೆಯ ಹಲವಾರು ಪಡಿತರ ವಿತರಕರು



ಹಾಗೂ ರಾಜ್ಯದ ಹಲವಾರು ಜಿಲ್ಲೆಗಳಿಂದ ಬಂದಿದ್ದ ಪಡಿತರ ವಿತರಕರು ನಿರಂತರವಾಗಿ ಕೃಷ್ಣಪ್ಪನವರ ಹೋರಾಟದ ಬಗ್ಗೆ ಪ್ರತಿಕ್ರಿಯಿಸಿದರು .

**ಕೃಷ್ಣಪ್ಪನವರ ಹುಟ್ಟುಹಬ್ಬ ಆಚರಿಸಿದ ಪಡಿತರ ವಿತರಕರು :** ಕೃಷ್ಣಪ್ಪನವರ 71ನೇ ವರ್ಷದ ಅದ್ದೂರಿ ಹುಟ್ಟುಹಬ್ಬಕ್ಕೆ ಶುಭಾಶಯ ಕೋರಲು ರಾಜ್ಯದ ಹಲವಾರು ಜಿಲ್ಲೆಗಳಿಂದ ಪಡಿತರ ವಿತರಕರು ಆಗಮಿಸಿ ಕೃಷ್ಣಪ್ಪನವರ ಹೋರಾಟ ಹಾಗೂ ಸಾಮಾಜಿಕ ಸೇವೆ ಪಡಿತರ ವಿತರಕರ ಕಾಳಜಿ ಇನ್ನೂ ರಾಜ್ಯಕ್ಕೆ ಅವಶ್ಯಕತೆ ಎಂದು ಆತ್ಮೀಯವಾಗಿ ಅಭಿನಂದಿಸಿದರು.

### ಕೃಷ್ಣಪ್ಪನವರ ಹುಟ್ಟುಹಬ್ಬ ಆಚರಣೆ

ಶಿವಮೊಗ್ಗದ ಮಲ್ಲಿಕಾರ್ಜುನ ಚಲನಚಿತ್ರ ಮಂದಿರದ ಆವರಣದಲ್ಲಿ ಪ್ರೀಮಿಯರ್ ಶೋ ಮತ್ತು ರಾಜ್ಯ ಪಡಿತರ ವಿತರಕರ ಸಂಘದ ಅಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯ ಅಧ್ಯಕ್ಷ ಕೃಷ್ಣಪ್ಪ ಇವರ ಹುಟ್ಟುಹಬ್ಬವನ್ನು ಚಲನಚಿತ್ರದ ಬಳಗದ ವತಿಯಿಂದ ಮತ್ತು ಪಡಿತರ ವಿತರಕರ ಸಂಘದ ವತಿಯಿಂದ ಅದ್ದೂರಿಯಾಗಿ ಆಚರಿಸಲಾಯಿತು ಚಿತ್ರದ ನಾಯಕ ನಟರಾದ ಕುಮಾರ್ ಬಂಗಾರಪ್ಪ ಚಲನಚಿತ್ರ ನಿರ್ಮಾಪಕರಾದ ಭಾಮ ಹರೀಶ್. ಪದ್ಮಾವತಿ ಚಂದ್ರಶೇಖರ್. ತೇಜು ಮೂರ್ತಿ. ಹಾಗೂ ನಿರ್ದೇಶಕರಾದ . ರಾಮಮೂರ್ತಿ ಹಾಗೂ ಪವನ್ ಕುಮಾರ್ ಹುಟ್ಟುಹಬ್ಬ ಆಚರಣೆಯಲ್ಲಿ ಪಾಲ್ಗೊಂಡು ನಂತರ ಸರ್ಕಾರಿ ನ್ಯಾಯಬೆಲೆ ಅಂಗಡಿ ಚಲನಚಿತ್ರವನ್ನು ವೀಕ್ಷಣೆ ಮಾಡಿದರು .



**ಸರ್ಕಾರಿ ನ್ಯಾಯಬೆಲೆ ಅಂಗಡಿ ಚಲನಚಿತ್ರ ಪ್ರೀಮಿಯರ್ ಶೋ :** ಶಿವಮೊಗ್ಗ ನಗರದಲ್ಲಿರುವ ಮಲ್ಲಿಕಾರ್ಜುನ ಚಲನಚಿತ್ರ ಮಂದಿರದಲ್ಲಿ ಕರ್ನಾಟಕ ಸರ್ಕಾರಿ ನ್ಯಾಯಬೆಲೆ ಅಂಗಡಿ ಎಂಬ ಚಲನಚಿತ್ರದ ಪ್ರೀಮಿಯರ್ ಶೋ ನಡೆಸಲಾಯಿತು.

ಈ ಚಲನಚಿತ್ರ ವೀಕ್ಷಣೆಗೆ ಪಡಿತರ ವಿತರಕರು ಸಾರ್ವಜನಿಕರು ಚಲನಚಿತ್ರ ವೀಕ್ಷಣೆಯಲ್ಲಿ ಭಾಗವಹಿಸಿ ಚಲನಚಿತ್ರ ಅದ್ಭುತವಾಗಿ ಮೂಡಿಬಂದಿದೆ ಎಂದು ತಮ್ಮ ಅನಿಸಿಕೆ ಅಭಿಪ್ರಾಯವನ್ನು ಹಂಚಿಕೊಂಡರು.

### ಸರ್ಕಾರ ಕ್ರಮ ಕೈಗೊಳ್ಳಬೇಕಿದೆ

ರಾಜ್ಯಾಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯ ಅಧ್ಯಕ್ಷ ಕೃಷ್ಣಪ್ಪ ಉದಯವಾಹಿನಿಗೆ ಪ್ರತಿಕ್ರಿಯಿಸಿ ಮೇ ತಿಂಗಳಲ್ಲಿ ಪಡಿತರ ವಿತರಕರು ಹಾಗೂ ಕಾರ್ಡುದಾರರಿಗೆ ಸಮಸ್ಯೆ ಉಂಟಾಗಲು ಮುಖ್ಯ ಕಾರಣ ಕಾರ್ಡುದಾರರು ಎರಡೆರಡು ಬಾರಿ ಹೆಬ್ಬಟ್ಟು ಬೆರಳಚ್ಚು ಪಡೆಯುವಂತೆ ಆದೇಶ ಮಾಡಿದ್ದು ಸರಿಯಲ್ಲ ಜೂನ್ ತಿಂಗಳಲ್ಲಿ ಸರ್ಕಾರ ಪಡಿತರ ವಿತರಣೆಯಲ್ಲಿ ಇದೇ ಕ್ರಮವನ್ನು ಮುಂದುವರಿಸಿದ್ದೆ ಆದಲ್ಲಿ ಜೂನ್ ತಿಂಗಳ ಪಡಿತರ ವಿತರಣೆಗೆ ಪಡಿತರ ಪದಾರ್ಥಗಳನ್ನು ಎತ್ತುವಳಿ ಮಾಡದೆ .

ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಾಗುವುದು ಇದರಲ್ಲಿ ರಾಜ್ಯದ 20,000ಕ್ಕೂ ಹೆಚ್ಚು ಪಡಿತರ ವಿತರಕರ ವಿತರಣೆಗೆ ತೊಂದರೆ ಆದರೆ ನಾವು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಸರ್ಕಾರಕ್ಕೆ ಪರೋಕ್ಷವಾಗಿ ಕೃಷ್ಣಪ್ಪ ಶಿವಮೊಗ್ಗದಲ್ಲಿ ಎಚ್ಚರಿಕೆ ನೀಡಿದ್ದಾರೆ

### ನ್ಯಾಯಬೆಲೆ ಅಂಗಡಿ ಚಲನಚಿತ್ರ ಅದ್ಭುತ

ಈ ದಿನದ ದರ ಪೆಟ್ರೋಲ್: 110.53 ₹/L ಡೀಸೆಲ್ : 98.80₹/L ಬಂಗಾರ: ₹ 15,230/Gram 24ct ₹14,320 /Gram 22ct ಬೆಳ್ಳಿ: ₹290.00/Gram

# ಕಾರಲ್ಲಿ ಗರ್ಭಿಣಿ ಇದ್ದಾಳೆ, ಸರ್ಕಾರಕ್ಕೆ ನಾವೇನೂ ಅಲ್ವ. ನಮ್ಮ ಪ್ರಾಣಕ್ಕಿಂತ ಝೀರೋ ಟ್ರಾಫಿಕ್ ಮುಖ್ಯಾನಾ? ರಸ್ತೆ ಮಧ್ಯೆ ಪ್ರತಿಭಟನೆ


• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ತೆರಳುತ್ತಿದ್ದ ವೇಳೆ ಝೀರೋ ಟ್ರಾಫಿಕ್ ಅಳವಡಿಕೆ ವಿರೋಧಿಸಿ ರಸ್ತೆ ಮಧ್ಯೆ ಗರ್ಭಿಣಿ ಮಹಿಳೆಯ ಪತಿ ಪ್ರತಿಭಟನೆ ನಡೆಸಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ನಗರದ ಹಳೆಯ ವಿಮಾನ ನಿಲ್ದಾಣ ರಸ್ತೆಯಲ್ಲಿ ನಿನ್ನೆ ರಾಜ್ಯಪಾಲರ ಸಂಚಾರದ ಹಿನ್ನೆಲೆಯಲ್ಲಿ ಸುಮಾರು 30 ನಿಮಿಷಗಳ ಕಾಲ ಸಂಚಾರವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿತ್ತು. ಇದರಿಂದಾಗಿ ವ್ಯಾಪಕ ಟ್ರಾಫಿಕ್ ಜಾಮ್ ಸೃಷ್ಟಿಯಾಗಿದ್ದು, ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಂಡರ್‌ಪಾಸ್ ಕಾಮಗಾರಿಯಿಂದಾಗಿ ಮೊದಲೇ ಕಿರಿದಾಗಿದ್ದ ರಸ್ತೆಯಲ್ಲಿ ಯಾವುದೇ ಪರ್ಯಾಯ ವ್ಯವಸ್ಥೆ ಮಾಡದೆ ಏಕಾಏಕಿ ರಸ್ತೆ ನಿರ್ಬಂಧಿಸಿದ್ದರಿಂದ ಸಂಚಾರ ವ್ಯವಸ್ಥೆ ಸಂಪೂರ್ಣ ಸ್ಥಗಿತವಾಗಿತ್ತು. ಈ ಸಂಚಾರ ದಟ್ಟಣೆಯ ನಡುವೆ ತನ್ನ ಗರ್ಭಿಣಿ ಪತ್ನಿಯನ್ನು ತುರ್ತಾಗಿ ಕರೆದೊಯ್ಯುತ್ತಿದ್ದ ವ್ಯಕ್ತಿಯೊಬ್ಬರು ಸಿಲುಕಿಕೊಂಡಿದ್ದು, ಗರ್ಭಿಣಿ ಪತ್ನಿಯನ್ನು ಆಸ್ಪತ್ರೆಗೆ ತಲುಪಿಸಲಾಗದೆ ಆ ವ್ಯಕ್ತಿ ನಡುರಸ್ತೆಯಲ್ಲೇ ಕುಳಿತು ಪ್ರತಿಭಟನೆ ನಡೆಸಿದ್ದಾರೆ.

ಈ ಪರಿಸ್ಥಿತಿಯಿಂದ ತೀವ್ರ ಆತಂಕಗೊಂಡ ಮಹಿಳೆಯ ಪತಿ, ಅಧಿಕಾರಿಗಳ ಕ್ರಮದ ವಿರುದ್ಧ ರಸ್ತೆಯಲ್ಲೇ ಕುಳಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ತಮ್ಮ ಪತ್ನಿಯ ಆರೋಗ್ಯದ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ವಿಐಪಿ ಸಂಚಾರಕ್ಕಾಗಿ ಸಾಮಾನ್ಯ ನಾಗರಿಕರ ತುರ್ತು ಅಗತ್ಯಗಳನ್ನು ಕಡೆಗಣಿಸುವುದು ಸರಿಯಲ್ಲ. ಕಾರಲ್ಲಿ ಗರ್ಭಿಣಿ ಇದ್ದಾಳೆ. ಪ್ರತಿಭಟನೆಯ ವೇಳೆ ಅವರು ರಸ್ತೆ ಮಧ್ಯದಲ್ಲೇ ನಿಂತು ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿದ್ದು, ಸ್ಥಳದಲ್ಲಿದ್ದ ಕೆಲವರು ಅವರ ಆಕ್ರೋಶಕ್ಕೆ ಬೆಂಬಲ ಸೂಚಿಸಿದರು. ಘಟನೆಯ ಇದೀಗ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ವಿಐಪಿ ಸಂಚಾರದ ಸಂದರ್ಭದಲ್ಲಿ ಸಾಮಾನ್ಯ ಜನರು ಎದುರಿಸುವ ತೊಂದರೆಗಳ ಬಗ್ಗೆ ಮತ್ತೆ ಚರ್ಚೆಗೆ ಕಾರಣವಾಗಿದೆ.






## ಆರ್‌ಸಿಬಿ ವಿಜಯೋತ್ಸವ ಒಂದೇ ರಾತ್ರಿ 260 ಡ್ರಂಕ್ ಡ್ರೈವ್ ಕೇಸ್ ದಾಖಲು




• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಆರ್‌ಸಿಬಿ ವಿಜಯೋತ್ಸವದ ಸಂಭ್ರಮಾಚರಣೆ ಜೋರಾಗಿದೆ. ಇದೇ ವೇಳೆ ಸಂಚಾರಿ ಪೊಲೀಸರು 260 ಡ್ರಂಕ್ ಡ್ರೈವ್ ದಾಖಲಿಸಿದ್ದಾರೆ.

ನಡೆದ ಐಪಿಎಲ್ 2026ರ ಫಿನಾಲೆಯಲ್ಲಿ ಗೆದ್ದು ಆರ್‌ಸಿಬಿ ತಂಡ ಸತತ ಎರಡನೇ ಬಾರಿಗೆ ಟ್ರೋಫಿ ತನ್ನದಾಗಿಸಿಕೊಂಡಿದೆ. ಈ ಹಿನ್ನೆಲೆ ಬೆಂಗಳೂರಿನಲ್ಲಿ ಆರ್‌ಸಿಬಿ ವಿಜಯೋತ್ಸವದ ಸಂಭ್ರಮಾಚರಣೆ ಜೋರಾಗಿದೆ.

ಇದೇ ಸಂದರ್ಭದಲ್ಲಿ ಬೇಟೆಗಿಳಿದ ಸಂಚಾರಿ ಪೊಲೀಸರು ನಿನ್ನೆ ಒಂದೇ ರಾತ್ರಿಯಲ್ಲಿ 260 ಡ್ರಂಕ್ ಡ್ರೈವ್ ಕೇಸ್ ದಾಖಲಿಸಿಕೊಂಡಿದ್ದಾರೆ. ಅಭಿಮಾನಿಗಳು ಬೈಕ್ ರ‍್ಯಾಲಿ, ಆರ್‌ಸಿಬಿ ಪರ ಜಯಘೋಷಗಳನ್ನು ಕೂಗಿ ಹಾಗೂ ಹಲವೆಡೆ ಪಟಾಕಿ ಸಿಡಿಸಿ ಸಂಭ್ರಮಾಚರಣೆ ಮಾಡಿದ್ದಾರೆ. ಇದಕ್ಕೂ ಮುನ್ನ ಸಂಚಾರಿ ಪೊಲೀಸರು ಫೈನಲ್ ಹಿನ್ನೆಲೆ ನಗರದ ಪ್ರಮುಖ ಫ್ಲೈ ಓವರ್‌ಗಳನ್ನು ರಾತ್ರಿ 11ಗಂಟೆಯಿಂದ ಮುಂಜಾನೆ 5 ಗಂಟೆ ತನಕ ಬಂದ್ ಮಾಡುವಂತೆ ಸೂಚನೆ ಹೊರಡಿಸಿದ್ದರು.

## ಕರ್ನಾಟಕದ 4 ರಾಜ್ಯಸಭೆ, 7 ಪರಿಷತ್ ಸ್ಥಾನಗಳ ಚುನಾವಣೆಗೆ ಇಂದಿನಿಂದ ನಾಮಪತ್ರ ಸಲ್ಲಿಕೆ ಆರಂಭ




• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ಬೆಳವಣಿಗೆಗಳು ಬಿರುಸು ಪಡೆದುಕೊಂಡಿರುವ ಮಧ್ಯೆಯೇ ಇಂದಿನಿಂದ 4 ರಾಜ್ಯಸಭೆ, 7 ಪರಿಷತ್ ಸ್ಥಾನಗಳ ಚುನಾವಣೆಗೆ ನಾಮಪತ್ರ ಸಲ್ಲಿಕೆ ಆರಂಭವಾಗಿದೆ. ಇಂದು ಎರಡೂ ಚುನಾವಣೆಗಳ ಅಧಿಸೂಚನೆ ಪ್ರಕಟವಾಗಿದೆ.ಸಿಎಂ ಆಯ್ಕೆ, ಸಂಪುಟ ರಚನೆ ಒತ್ತಡದಲ್ಲಿ ಅಭ್ಯರ್ಥಿಗಳ ಆಯ್ಕೆ ಕಾಂಗ್ರೆಸ್‌ನಲ್ಲಿ ಈಗಾಗಲೇ ವಿಳಂಬವಾಗಿದೆ. ಜೂ.8ರಂದು ನಾಮಪತ್ರಗಳ ಸಲ್ಲಿಕೆಗೆ ಕೊನೆಯ ದಿನವಾಗಿದ್ದು, ಜೂ.11ರಂದು ನಾಮಪತ್ರಗಳ ವಾಪಸಾತಿಗೆ ಕೊನೇ ದಿನವಾಗಿದೆ.

ಇನ್ನು ಜೂ.18ರಂದು ಮತದಾನ ನಡೆದು ಅಂದೇ ಫಲಿತಾಂಶ ಪ್ರಕಟವಾಗಲಿದೆ. ಇನ್ನೂ ಅಭ್ಯರ್ಥಿಗಳ ಆಯ್ಕೆಯನ್ನು ಕಾಂಗ್ರೆಸ್ ಮತ್ತು ಬಿಜೆಪಿ ಫೈನಲ್ ಮಾಡಿಲ್ಲ. ಇನ್ನು 2, 3 ದಿನಗಳಲ್ಲಿ ಎರಡೂ ಪಕ್ಷಗಳಿಂದ ಅಭ್ಯರ್ಥಿಗಳ ಹೆಸರು ಫೈನಲ್ ಆಗುವ ಸಾಧ್ಯತೆ ಇದೆ. ರಾಜ್ಯಸಭೆಯ 4 ಸ್ಥಾನಗಳ ಪೈಕಿ ಕಾಂಗ್ರೆಸ್ 3, ಬಿಜೆಪಿ 1 ಗೆಲ್ಲಲು ಅವಕಾಶ ಇದೆ.

ಪರಿಷತ್ ಸ್ಥಾನಗಳ ಪೈಕಿ ಕಾಂಗ್ರೆಸ್ 4, ಬಿಜೆಪಿ 2 ಸ್ಥಾನ ಸುಲಭ ಗೆಲುವು ಸಾಧಿಸಲು ಅವಕಾಶವಿದೆ. ಇದರ ಜೊತೆಗೆ ಮತ್ತೊಂದು ಸ್ಥಾನಕ್ಕೂ ಕಾಂಗ್ರೆಸ್‌ನಿಂದಲೇ ಅಭ್ಯರ್ಥಿ ಕಣಕ್ಕೆ ಇಳಿಸಿ ಗೆಲ್ಲಿಸಿಕೊಳ್ಳಲು ಮುಂದಾಗಿದೆ. ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಬೆಳಗಾವಿ ಬಿಜೆಪಿ ಮುಖಂಡ ಈರಣ್ಣ ಕಡಾಡಿ, ದಕ್ಷಿಣ ಕನ್ನಡ ಬಿಜೆಪಿ ಮುಖಂಡ ಕೆ.ನಾರಾಯಣ ಅವರ ಅವಧಿ ಜೂನ್ 25ರಂದು ಕೊನೆಗೊಳ್ಳಲಿದೆ.

## ಸಿದ್ದರಾಮಯ್ಯ ಗ್ಯಾಂಗ್‌ಗೆ ಕತ್ತರಿ ಹಾಕೋಕೆ ಕಾಂಗ್ರೆಸ್‌ನವರಿಂದಲೇ ಆಡಿಯೋ ರಿಲೀಸ್

• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯ ಗ್ಯಾಂಗ್‌ಗೆ ಕತ್ತರಿ ಹಾಕೋಕೆ ಆಡಿಯೋ ರಿಲೀಸ್ ಆಗಿದೆ ಅಂತ ವಿಪಕ್ಷ ನಾಯಕ ಆರ್. ಅಶೋಕ್ ಆರೋಪ ಮಾಡಿದ್ದಾರೆ.

ಮಾಜಿ ಸಚಿವ ಜಮೀರ್ ಅಹಮದ್ ಅವರದ್ದು ಎನ್ನಲಾದ ಆಡಿಯೋ ವೈರಲ್ ಆದ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಸಿದ್ದರಾಮಯ್ಯ ಗ್ಯಾಂಗ್‌ಗೆ ಕತ್ತರಿ ಹಾಕೋಕೆ ಈ ಆಡಿಯೋ ರಿಲೀಸ್ ಆಗಿದೆ. ಸಿದ್ದರಾಮಯ್ಯ ಗ್ಯಾಂಗ್ ಹುಷಾರಾಗಿ ಇರಬೇಕು. ಚುನಾವಣೆ ಆಗಿ ಎಷ್ಟು ದಿನ ಆಯ್ತು. ಈಗ ಯಾಕೆ ರಿಲೀಸ್ ಮಾಡಿದ್ರು. ಜಮೀರ್‌ಗೆ ಸ್ಥಾನ ತಪ್ಪಿಸೋಕೆ ಕಾಂಗ್ರೆಸ್ ಅವರೇ ಈ ಆಡಿಯೋ ರಿಲೀಸ್ ಮಾಡಿರೋದು. ಉರ್ದು ಭಾಷಣ ಕನ್ನಡ ಅನುವಾದ ಕೊಟ್ಟಿದ್ದಾರೆ.

ಪ್ಲ್ಯಾನ್ ಇದು ಕಾಂಗ್ರೆಸ್ ಅವರೇ ಮಾಡಿರೋದು ಎಂದಿದ್ದಾರೆ. ಸಚಿವ ಸ್ಥಾನಕ್ಕಾಗಿ ಈಗ ದೆಹಲಿಗೆ ಓಡ್ತಿದ್ದಾರೆ. ಇನ್ನು ಮುಂದೆ ಕಾಂಗ್ರೆಸ್ ಪಕ್ಷದಲ್ಲಿ ಸಚಿವ ಸ್ಥಾನ ಸಿಗದವರ ಕೈಬಿಟ್ಟ ಗುಂಪು ರಚನೆ ಆಗಲಿದೆ. ಸಚಿವ ಸ್ಥಾನ ಸಿಗದವರದ್ದು ಗುಂಪು ಆಗಲಿದೆ.

## ರಾಜ್ಯಾದ್ಯಂತ ಇಂದಿನಿಂದ ಶಾಲೆಗಳು ಆರಂಭ ಸಂಭ್ರಮದಿಂದ ಮಕ್ಕಳನ್ನು ಸ್ವಾಗತಿಸಿದ ಶಿಕ್ಷಕರು

• ಉದಯವಾಹಿನಿ, ಬೆಂಗಳೂರು

ಬೇಸಿಗೆ ರಜೆ ಬಳಿಕ ಇಂದಿನಿಂದ ರಾಜ್ಯಾದ್ಯಂತ ಶಾಲೆಗಳು ಆರಂಭವಾಗಿದ್ದು, ಮಕ್ಕಳಲ್ಲಿ ಶಾಲಾ ಪ್ರಾರಂಭದ ಸಂಭ್ರಮ ಜೋರಾಗಿದೆ.

ಶಾಲಾ ಶಿಕ್ಷಣ ಇಲಾಖೆ ಸಕಲ ಸಿದ್ಧತೆ ಮಾಡಿಕೊಂಡು ಇಂದಿನಿಂದ ಶಾಲೆಗಳನ್ನು ಆರಂಭಿಸಿದ್ದು, ಈ ಮೂಲಕ 2026-27ನೇ ಸಾಲಿನ ಶೈಕ್ಷಣಿಕ ತರಗತಿಗಳು ಪ್ರಾರಂಭಗೊಂಡಿವೆ. ಶಿಕ್ಷಣ ಇಲಾಖೆ ಹಬ್ಬದ ವಾತಾವರಣ, ಸಂಭ್ರಮ, ಸಡಗರದಿಂದ ಮಕ್ಕಳನ್ನ ಸ್ವಾಗತ ಮಾಡಲು ಆದೇಶಿಸಿದ್ದು, ಮಧ್ಯಾಹ್ನ ಬಿಸಿಯೂಟದಲ್ಲಿ ಸಿಹಿ ಮಾಡಲು ಸೂಚನೆ ನೀಡಿದೆ. ಅದರಂತೆ ಶಾಲೆಯನ್ನ ತಳಿರು-ತೋರಣ, ರಂಗೋಲಿಯಿಂದ ಸಿಂಗಾರ ಮಾಡಿ, ಶಿಕ್ಷಕರು ಮಕ್ಕಳನ್ನು ಸ್ವಾಗತಕೋರಿದ್ದಾರೆ. ಕೆಲ ಬೆಳವಣಿಗೆಗಳಾದ ಹಿನ್ನೆಲೆ ಶಿವಮೊಗ್ಗದಲ್ಲಿ ನಿಗದಿಯಾಗಿದ್ದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮವನ್ನು ರದ್ದುಗೊಳಿಸಲಾಗಿದೆ.

## ಶಾಸಕ ಮುನಿರತ್ನರನ್ನು ಆರೋಪ ಮುಕ್ತಗೊಳಿಸಿದ ವಿಶೇಷ ನ್ಯಾಯಾಲಯ

• ಉದಯವಾಹಿನಿ, ಬೆಂಗಳೂರು




ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ(ಎಸ್ಸಿ, ಎಸ್ಟಿ) ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಿಸಲಾಗಿದ್ದ ಪ್ರಕರಣದಲ್ಲಿ ಶಾಸಕ ಮುನಿರತ್ನ ಅವರನ್ನು ಆರೋಪಮುಕ್ತಗೊಳಿಸಿ ಬೆಂಗಳೂರಿನ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿದೆ.

ಪ್ರಕರಣ ಸಂಬಂಧ ದಾಖಲಾಗಿದ್ದ ಆರೋಪಪಟ್ಟಿಯನ್ನು ತಮ್ಮನ್ನು ಬಿಡುಗಡೆ ಮಾಡಬೇಕು ಎಂದು ಕೋರಿ ಮುನಿರತ್ನ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಧೀಶರಾದ ಸಂತೋಷ್ ಗಜಾನನ ಭಟ್ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ.

ಘಟನೆಯು 2024 ಮೇ 18ರಂದು ಅರ್ಜಿದಾರ ಆರೋಪಿತರ ಮನೆಯಲ್ಲಿ ತನ್ನ ಕ್ಷೇತ್ರದ ಗುತ್ತಿಗೆದಾರರ ಸಭೆ ನಡೆದಿದ್ದು, ಆ ಸಂದರ್ಭದಲ್ಲಿ ದೂರುದಾರರ ವಿರುದ್ಧ ಜಾತಿ ನಿಂದನೆ ಮಾಡಲಾಗಿದೆ ಎಂದು ತಿಳಿಸಲಾಗಿದ್ದು, ಇದು ಆಪಲ್ ವಾಚ್‌ನಲ್ಲಿ ರೆಕಾರ್ಡ್ ಆಗಿದೆ. ಈ ಅಂಶ 2024ರ ಸೆಪ್ಟೆಂಬರ್ 13ರಂದು ದೂರುದಾರರಿಗೆ ತಿಳಿದಿದ್ದು, ದೂರು ದಾಖಲಿಸಲಾಗಿದೆ. ಆದರೆ, ಎಸ್ಸಿ, ಎಸ್ಟಿ ಕಾಯ್ದೆಯಡಿ ಪ್ರಕರಣ ದಾಖಲಾಗಬೇಕಾದರೆ, ಅಂತಹ ಜಾತಿನಿಂದನೆ ಘಟನೆ ಸಾರ್ವಜನಿಕ ಸ್ಥಳದಲ್ಲಿ ನಡೆಯಬೇಕು ಎಂಬುದಾಗಿದೆ.

### ಅಂಶಗಳು ದಾಖಲೆಗಳಲ್ಲಿ ಕಾಣುತ್ತಿಲ್ಲ

ಭಾರತೀಯ ದಂಡ ಸಂಹಿತೆಯ 504 ಮತ್ತು 506ನೇ ಕಲಂಗಳಡಿ ದಾಖಲಿಸಲಾಗಿದ್ದ ಉದ್ದೇಶಪೂರ್ವಕ ಅವಮಾನ ಹಾಗೂ ಜೀವ ಬೆದರಿಕೆ ಆರೋಪಗಳಿಗೂ ಅಗತ್ಯ ಅಂಶಗಳು ದಾಖಲೆಗಳಲ್ಲಿ ಕಾಣುತ್ತಿಲ್ಲ ಎಂದು ನ್ಯಾಯಾಲಯ ತಿಳಿಸಿದೆ. ದೂರುದಾರರಿಗೆ ಘಟನೆಯ ಮಾಹಿತಿ ಸುಮಾರು ನಾಲ್ಕು ತಿಂಗಳ ಬಳಿಕ ತಿಳಿದಿರುವುದರಿಂದ ಭಯ ಅಥವಾ ಆತಂಕ ಉಂಟುಮಾಡುವ ಉದ್ದೇಶ ಸಾಬೀತಾಗುವುದಿಲ್ಲ ಎಂದು ಹೇಳಿದೆ ಎಂದು ಪೀಠ ತಿಳಿಸಿದೆ.

### ಪ್ರಾಸಿಕ್ಯೂಷನ್ ವಿಫಲ

ಸಾರ್ವಜನಿಕ ಸ್ಥಳದಲ್ಲಿ ನಡೆದಿಲ್ಲ. ಜತೆಗೆ, ಘಟನೆ ನಡೆದ ಹಲವು ದಿನಗಳ ಬಳಿಕ ಬೆಳಕಿಗೆ ಬಂದಿದ್ದು, ಆರೋಪವನ್ನು ಸಾಬೀತುಪಡಿಸುವಲ್ಲಿ ಪ್ರಾಸಿಕ್ಯೂಷನ್ ವಿಫಲವಾಗಿದ್ದು, ಆರೋಪಿ ಮುನಿರತ್ನ ಅವರನ್ನು ಆರೋಪ ಮುಕ್ತಗೊಳಿಸಲಾಗುತ್ತಿದೆ ಎಂದು ನ್ಯಾಯಾಧೀಶರು ತಿಳಿಸಿದರು.

ಅರ್ಜಿದಾರರ ವಿರುದ್ಧದ ಆರೋಪಗಳು ಅನುಮಾನಕ್ಕೆ ಕಾರಣವಾಗುತ್ತಿವೆ. ತನಿಖಾಧಿಕಾರಿಗಳು ಸಲ್ಲಿಸಿರುವ ಆರೋಪಪಟ್ಟಿ ಮತ್ತು ಸಾಕ್ಷ್ಯಾಧಾರಗಳಿಂದ ಆರೋಪವನ್ನು ಸಾಬೀತು ಪಡಿಸಲಾಗುವುದಿಲ್ಲ ಎಂದು ಪೀಠ ತಿಳಿಸಿದೆ. ಅಲ್ಲದೆ, ಆರೋಪಿತ ಜಾತಿ ನಿಂದನೆ ನಡೆದ ಸಂದರ್ಭದಲ್ಲಿ ದೂರುದಾರ ವೇಲು ನಾಯ್ಕರ್ ಸ್ಥಳದಲ್ಲೇ ಹಾಜರಿರಲಿಲ್ಲ.

ನ್ಯಾಯಾಲಯವು ಸುಪ್ರೀಂಕೋರ್ಟ್‌ನ ವಿವಿಧ ತೀರ್ಪುಗಳನ್ನು ಉಲ್ಲೇಖಿಸಿ, ಎಸ್ಸಿ, ಎಸ್ಟಿ ದೌರ್ಜನ್ಯ ತಡೆ ಕಾಯ್ದೆಯಡಿ ಅಪರಾಧ ಸಾಬೀತಾಗಬೇಕಾದರೆ ಜಾತಿ ನಿಂದನೆ ಸಾರ್ವಜನಿಕರು ನೋಡುವಂತಹ ಸ್ಥಳದಲ್ಲಿ ನಡೆಯಬೇಕು ಹಾಗೂ ಅವಮಾನಕ್ಕೊಳಗಾದ ವ್ಯಕ್ತಿಯೂ ಅಲ್ಲಿ ಹಾಜರಿರಬೇಕು ಎಂದು ಸ್ಪಷ್ಟಪಡಿಸಿದೆ.

ಈ ಪ್ರಕರಣದಲ್ಲಿ ಆ ಎರಡೂ ಅಂಶಗಳು ಕಂಡುಬಂದಿಲ್ಲ ಎಂದು ನ್ಯಾಯಾಧೀಶರು ಅಭಿಪ್ರಾಯಪಟ್ಟರು.

ತನಿಖಾಧಿಕಾರಿಗಳು ಸಲ್ಲಿಸಿರುವ ಆರೋಪಪಟ್ಟಿ

ಜಾತಿ ನಿಂದನೆ ಆರೋಪ




### ಪ್ರಕರಣದ ಹಿನ್ನೆಲೆ

ಆರೋಪಿಯಾಗಿದ್ದ ಮುನಿರತ್ನ ಅವರ ಕ್ಷೇತ್ರದಲ್ಲಿ ಘನತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ ಗುತ್ತಿಗೆ ನೀಡುವುದಕ್ಕಾಗಿ ಲಂಚಕ್ಕೆ ಬೇಡಿಕೆ ಇಡುತ್ತಿದ್ದರು. ಅಲ್ಲದೆ ಪ್ರತಿ ತಿಂಗಳ ಲಂಚ ನೀಡುವಂತೆ ಒತ್ತಾಯಿಸುತ್ತಿದ್ದರು. ಈ ನಡುವೆ ದೂರುದಾರ ವೇಲು ನಾಯ್ಕರ್ ಅವರು ಅಲ್ಲಿನ ಗುತ್ತಿಗೆದಾರ ಚಲವರಾಜು ಅವರಿಗೆ ಲಂಚ ನೀಡದಂತೆ ಒತ್ತಡ ಹಾಕಿದ್ದರು. ಇದರಿಂದ ವೇಲು ನಾಯ್ಕರ್ ವಿರುದ್ಧ ಮುನಿರತ್ನ ಕೋಪಗೊಂಡಿದ್ದರು. ಈ ನಡುವೆ ಗುತ್ತಿಗೆದಾರರೊಂದಿಗೆ ನಡೆದ ಸಭೆಯ ಬಳಿಕ ವೇಲು ನಾಯ್ಕರ್ ಅವರ ಜಾತಿಯನ್ನು ಬಳಸಿ ಅಸಭ್ಯ ಭಾಷೆಯಲ್ಲಿ ನಿಂದಿಸಿದ್ದರು. ಈ ಸಂಬಂಧ ಮನಿರತ್ನ ವಿರುದ್ಧ ವೈಯಾಲಿಕಾವಲ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ದೂರಿನ ಸಂಬಂಧ ತನಿಖೆ ನಡೆಸಿದ್ದ ಪೊಲೀಸರು, ಮುನಿರತ್ನ ವಿರುದ್ಧ ಆರೋಪ ಪಟ್ಟಿಯನ್ನು ಸಲ್ಲಿಸಿದ್ದರು.

## ಪೋಕ್ಸೋ ಕುರಿತ ಅಣಕು ನ್ಯಾಯಾಲಯ ಸ್ಪರ್ಧೆಯಲ್ಲಿ ಗೆದ್ದವರಿಗೆ ಬಹುಮಾನ ವಿತರಣೆ

• ಉದಯವಾಹಿನಿ, ಬೆಂಗಳೂರು




ಜೀವನದ ಎಲ್ಲಾ ಹಂತಗಳಲ್ಲೂ ನೈತಿಕತೆಯನ್ನು ಅಳವಡಿಸಿಕೊಂಡಲ್ಲಿ ಬದುಕು, ವೃತ್ತಿಯಲ್ಲಿ ಯಶಸ್ವಿಯಾಗಬಹುದು ಎಂದು ನಿವೃತ್ತ ಮುಖ್ಯನ್ಯಾಯಮೂರ್ತಿ ಪಿ.ಎಸ್. ದಿನೇಶ್ ಕುಮಾರ್ ಹೇಳಿದ್ದಾರೆ.

ದೇವಾಂಗ ಸಂಘ ಕಾಲೇಜ್ ಆಫ್ ಲಾ ಹಾಗೂ ಯುವ ವಕೀಲರ ಸ್ನೇಹ ಬಳಗದಿಂದ ದೇವಾಂಗ ಸಂಘದ ವಿದ್ಯಾ ಸಂಸ್ಥೆಯ ಸಭಾಂಗಣದಲ್ಲಿ ಆಯೋಜಿಸಿದ್ದ ಮೂರು ದಿನಗಳ ''ಪೋಕ್ಸ್ ಕಾಯ್ದೆ'' ಕುರಿತು ಶ್ರೀ ಪತಿಯಪ್ಪ ಸ್ಮರಣಾರ್ಥ ಅಖಿಲ ಕರ್ನಾಟಕ ಪ್ರಥಮ ಕನ್ನಡ ಅಣಕು ನ್ಯಾಯಾಲಯ ಸ್ಪರ್ಧೆಯಲ್ಲಿ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದ ಅವರು, ನೈತಿಕತೆ ಎಂದರೆ ಉತ್ತಮ ಗುಣಮಟ್ಟದ ನೈತಿಕತೆಯನ್ನು ಅಳವಡಿಸಿಕೊಳ್ಳಬೇಕು. ಉತ್ತಮ ಅಭ್ಯಾಸಗಳಿಂದ ನ್ಯಾಯಾಂಗ ವ್ಯವಸ್ಥೆ ಉತ್ತಮಗೊಳ್ಳಲಿದೆ. ದೇಶದಲ್ಲಿ 5.2 ಕೋಟಿ ಪ್ರಕರಣಗಳು ಬಾಕಿ ಉಳಿದಿವೆ. ತ್ವರಿತ ನ್ಯಾಯದಾನ ವಕೀಲರ ಮೂಲಭೂತ ಕರ್ತವ್ಯವಾಗಬೇಕು. ಆಸ್ತಿ ವಿಭಾಗ ಕುರಿತ ವ್ಯಾಜ್ಯ 60 ವರ್ಷಗಳಿಂದ ಇತ್ಯರ್ಥವಾಗಿಲ್ಲ ಎಂದರೆ ನ್ಯಾಯದಾನ ವ್ಯವಸ್ಥೆ ಹೇಗಿದೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಿ ಎಂದರು. ರಾಜ್ಯ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಎಂ.ಜಿ. ಉಮಾ ಮಾತನಾಡಿ, ನ್ಯಾಯಾಲಯದಲ್ಲಿನ ವಾದ, ಪ್ರತಿವಾದ ಮಾತೃಭಾಷೆಯಲ್ಲಿದ್ದರೆ ಕಕ್ಷಿದಾರನಿಗೆ ಅರ್ಥವಾಗುತ್ತದೆ. ಜಿಲ್ಲಾ ನ್ಯಾಯಾಲಯಗಳಲ್ಲಿ ಮಾತೃಭಾಷೆಯಲ್ಲಿ ತೀರ್ಪು ನೀಡುತ್ತಿರುವುದು ಉತ್ತಮ ಬೆಳವಣಿಗೆ. ವಕೀಲರು ಉನ್ನತ ನ್ಯಾಯಾಲಯಗಳಲ್ಲಿ ಇಂಗ್ಲಿಷ್‌ನಲ್ಲಿ ವ್ಯವಹರಿಸಬೇಕು. ಆದ್ದರಿಂದ ಇಂಗ್ಲಿಷ್ ಭಾಷಾ ಪ್ರೌಢಿಮೆ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯ ನಿರ್ದೇಶಕರಾದ ಪ್ರೊ.ಸಿ.ಎಸ್. ಪಾಟೀಲ್, ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಹೆಚ್ಚುವರಿ ಮುಖ್ಯ ನ್ಯಾಯಿಕ ದಂಡಾಧಿಕಾರಿ ಸಿ.ಕೆ. ವಿರೇಶ್ ಕುಮಾರ್. ಹುಬ್ಬಳ್ಳಿಯ ಕೆ.ಎಸ್.ಎಲ್.ಯು ವಿದ್ಯಾವಿಷಯಕ ಪರಿಷತ್ ಸದಸ್ಯ ಡಾ. ಶಾರದಾ ನಿರ್ವಾಣಿ, ದೇವಾಂಗ ಸಂಘದ ಅಧ್ಯಕ್ಷ ಡಾ. ಜಿ. ರಮೇಶ್, ದೇವಾಂಗ ಸಂಘದ ಉಪಾಧ್ಯಕ್ಷರಾದ ಎ.ವಿಜಯ್ ಕುಮಾರ್, ಪಾರ್ವತಿ, ದೇವಾಂಗ ಸಂಘ ಕಾಲೇಜ್ ಆಫ್ ಲಾ ಹಾಗೂ ಯುವ ವಕೀಲರ ಸ್ನೇಹ ಬಳಗದ ಅಧ್ಯಕ್ಷ ಅನಿಲ್ ರೆಡ್ಡಿ, ಮತ್ತು ಪ್ರಾಂಶುಪಾಲರಾದ ಡಾ. ಶಿಲ್ಪ ಬಿ .ಪಿ ., ಸಂಘದ ಕಾರ್ಯದರ್ಶಿ ಆರ್. ಭಾಸ್ಕರ್, ಖಜಾಂಚಿ ಎಂ. ಲಕ್ಷ್ಮೀ ನಾರಾಯಣ, ಜಂಟಿ ಕಾರ್ಯದರ್ಶಿ ಊರುಕರೆ ಜಿ. ದಯಾನಂದ್ ಮತ್ತಿತರರು ಉಪಸ್ಥಿತರಿದ್ದರು.

## ಅಹಮದಾಬಾದ್‌ನಲ್ಲಿ ಫೈನಲ್; ಬೆಂಗಳೂರು, ರಾಜ್ಯದ ಯುವ ಜನತೆಗೆ ಮಾಡಿದ ಅನ್ಯಾಯ: ಡಿಕೆ ಶಿವಕುಮಾರ್

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ನಿಯೋಜಿತ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೋಮವಾರ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕಷ್ಟೇ ಅಲ್ಲದೆ, ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಫೈನಲ್ ಅನ್ನು ರಾಜ್ಯದ ರಾಜಧಾನಿಯಿಂದ ಅಹಮದಾಬಾದ್‌ಗೆ ಸ್ಥಳಾಂತರಿಸಿದ್ದರಿಂದ ಬೆಂಗಳೂರು ಮತ್ತು ಕರ್ನಾಟಕದ ಯುವಕರಿಗೆ ಅನ್ಯಾಯವಾಗಿದೆ




ಎಂದಿದ್ದಾರೆ.ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಆಗಿದ್ದರಿಂದ, ಆರಂಭದಲ್ಲಿ ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಫೈನಲ್ ಪಂದ್ಯವನ್ನು ಆಯೋಜಿಸಲು ನಿರ್ಧರಿಸಲಾಗಿತ್ತು. ನಂತರ, ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಫೈನಲ್ ಪಂದ್ಯವನ್ನು ಅಹಮದಾಬಾದ್‌ಗೆ ಸ್ಥಳಾಂತರಿಸಿತು.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಈ ಕ್ರಮದಿಂದಾಗಿ ಆರ್‌ಸಿಬಿಗೆ ಮಾತ್ರವಲ್ಲ, ಬೆಂಗಳೂರು ಮತ್ತು ಕರ್ನಾಟಕದ ಯುವ ಆಟಗಾರರಿಗೆ ಅನ್ಯಾಯವಾಗಿದೆ. ಐಪಿಎಲ್ ಫೈನಲ್ ಪಂದ್ಯ ಇಲ್ಲಿ ನಡೆಯಬೇಕಿತ್ತು. ಆದರೆ, ಅದು ಅಹಮದಾಬಾದ್‌ನಲ್ಲಿ ನಡೆಯಿತು. ಕಳೆದ ಬಾರಿ ಏನೇ ಆದರೂ, ನಾವೆಲ್ಲರೂ ಅದನ್ನು ಮರೆತು ಹೊಸದಾಗಿ ಎಲ್ಲವನ್ನೂ ಪ್ರಾರಂಭಿಸಿದ್ದೇವೆ' ಎಂದು ತಿಳಿಸಿದರು.

## ಏಳಿ- ಎದ್ದೇಳಿ, ಜಡತ್ವ ಬಿಟ್ಟು ನಡೆಯಿರಿ; ಮಾಲಿನ್ಯ ರಹಿತ ಬೆಂಗಳೂರಿಗೆ ಕೊಡುಗೆ ನೀಡಿ!

• ಉದಯವಾಹಿನಿ, ಬೆಂಗಳೂರು


ವಾಹನ ದಟ್ಟಣೆ, ವಾಯು ಮಾಲಿನ್ಯ ಮತ್ತು ಜಡ ಜೀವನಶೈಲಿಯಿಂದ ಜನರನ್ನು ಹೊರ ತರಲು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಹವಾಮಾನ ಕ್ರಿಯಾ ಕೋಶವು 1 ಅನ್ನು ಪ್ರಾರಂಭಿಸಿದೆ.

ಜನರು ಮೋಟಾರು ಸಾರಿಗೆಯನ್ನು ಆಯ್ಕೆ ಮಾಡುವ ಬದಲು ಒಂದು ಕಿಲೋಮೀಟರ್‌ಗಿಂತ ಕಡಿಮೆ ಪ್ರಯಾಣಕ್ಕಾಗಿ ನಡೆಯಬೇಕೆಂದು ಒತ್ತಾಯಿಸಿದೆ.

ಅಭಿಯಾನದ ಪ್ರಕಾರ, 10 ನಿಮಿಷಗಳ ನಡಿಗೆಯು ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡಲು, ದೈಹಿಕ ಆರೋಗ್ಯವನ್ನು ಸುಧಾರಿಸಲು, ನಗರದ ರಸ್ತೆಗಳಲ್ಲಿ ಸಂಚಾರವನ್ನು ಸುಲಭಗೊಳಿಸಲು ಮತ್ತು ಬೆಂಗಳೂರಿಗೆ ಕೊಡುಗೆ ನೀಡಲು ಸಹಾಯ ಮಾಡುತ್ತದೆ.

ಜೂನ್‌ನಲ್ಲಿ ಒಂದು ತಿಂಗಳ ಕಾಲ ನಡೆವ ಅಭಿಯಾನದಲ್ಲಿ ಬೆಂಗಳೂರಿಗರು ಭಾಗವಹಿಸಿ ಸ್ನೇಹಿತರು ಮತ್ತು ಕುಟುಂಬಸ್ಥರು ಸಣ್ಣ ಪ್ರಯಾಣಕ್ಕೆ ವಾಹನಗಳ ಬದಲು ನಡೆದು ಸ್ಥಳ ತಲುಪುವಂತೆ ಸವಾಲು ಹಾಕಲು ಪ್ರೋತ್ಸಾಹಿಸುತ್ತದೆ.

ಈ ಅಭಿಯಾನವು ನಾಗರಿಕರಿಂದ ಉತ್ತಮ ಪ್ರತಿಕ್ರಿಯೆ ಪಡೆಯುತ್ತಿದೆ.ಅತಿಕ್ರಮಣಗೊಂಡ ರಸ್ತೆಗಳು, ಅಸ್ತಿತ್ವದಲ್ಲಿಲ್ಲದ ಪಾದಚಾರಿ ಮಾರ್ಗಗಳು, ಕಸ




ಸುರಿಯುವುದು, ತೆರೆದ ಚರಂಡಿಗಳು ಮತ್ತು ಅಸುರಕ್ಷಿತ ರಸ್ತೆ ಗಳನ್ನು ಸರಿಪಡಿಸಿ ಪಾದಚಾರಿಗಳನ್ನು ಕ್ಯಾರೇಜ್ ವೇಗೆ ಬದಲಾಯಿಸುತ್ತವೆ ಎಂದು ಉಲ್ಲೇಖಿಸಿರುವ ಜಿಬಿಎ ಅಧಿಕಾರಿಗಳು ಅನೇಕ ಪ್ರದೇಶಗಳಲ್ಲಿ ನಡೆದಿರುವ ಪ್ರಾಯೋಗಿಕ ಅಭಿಯಾನವನ್ನು ಉಲ್ಲೇಖಿಸಿದ್ದಾರೆ. ನಾಗರಿಕರಿಗೆ ನಡಿಗೆಯನ್ನು ಉತ್ತೇಜಿಸುವ ಮೊದಲು ಅಗಲವಾದ, ಸೂಕ್ತ ಮತ್ತು ಸುರಕ್ಷಿತ ಪಾದಚಾರಿ ಮಾರ್ಗಗಳ ನಿರ್ಮಾಣ ಮತ್ತು ನಿರ್ವಹಣೆಗೆ ಆದ್ಯತೆ ನೀಡಬೇಕೆಂದು ನೆಟ್ಟಿಗರು ಒತ್ತಾಯಿಸಿದ್ದಾರೆ.

## ವೈರಲ್ ಆಗಿರೋದು ಆಡಿಯೋ, ಯಾವ ತನಿಖೆ ಬೇಕಾದ್ರೂ ಆಗಲಿ ಜಮೀರ್ ಸವಾಲು

• ಉದಯವಾಹಿನಿ,

ರಾಜ್ಯದ ಕೆಲವು ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವ ನನ್ನ ಕುರಿತ ಆಡಿಯೋ ನಕಲಿ, ಎಐ ತಂತ್ರಜ್ಞಾನ ಬಳಸಿ ಮಾಡಲಾಗಿದೆ ಎಂದು ಕಾಂಗ್ರೆಸ್ ನಾಯಕ ಜಮೀರ್ ಅಹಮದ್ ಖಾನ್ ತಿಳಿಸಿದ್ದಾರೆ.

ವೈರಲ್ ಆಗುತ್ತಿರುವ ಆಡಿಯೋ ಬಗ್ಗೆ ಅವರು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಹೇಳಿಯಲ್ಲಿ, ಇದೊಂದು ರಾಜಕೀಯ ಷಡ್ಯಂತ್ರ. ನಕಲಿ ಆಡಿಯೋ ಮಾಡಿ ವೈರಲ್ ಮಾಡಿರುವವರ ವಿರುದ್ಧ ಸೈಬರ್ ಠಾಣೆಗೆ ದೂರು ದಾಖಲಿಸಿ, ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ನಾನು ಆ ರೀತಿ ಮಾತನಾಡಿಲ್ಲ, ಗೊಂದಲ ಉಂಟು ಮಾಡಲು ಇದೆಲ್ಲವೂ ಸೃಷ್ಟಿ ಮಾಡಲಾಗಿದೆ. ಇದು ಕಿಡಿಗೇಡಿಗಳ ಕೃತ್ಯ, ಇದನ್ನು ಯಾರೂ ನಂಬಬಾರದು. ಆಡಿಯೋ ಬಗ್ಗೆ ಯಾವ ತನಿಖೆಗೆ ಬೇಕಾದರೂ ಒಳಪಡಿಸಲಿ




ಎಂದು ಸವಾಲು ಹಾಕಿದ್ದಾರೆ. ಕಾಂಗ್ರೆಸ್ ಮುಖಂಡ ಜಮೀರ್ ಅಹಮದ್ ವಿರುದ್ಧ ದಾವಣಗೆರೆ ದಕ್ಷಿಣ ಉಪ ಚುನಾವಣೆಯಲ್ಲಿ ಪಕ್ಷ ವಿರೋಧಿ ಚಟುವಟಿಕೆ ನಡೆಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಅದಕ್ಕೆ ಪೂರಕವಾದ ಆಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಕಾಕ್ರೋಚ್ ಪಾರ್ಟಿ ಹೆಸರಿನ ಎಕ್ಸ್‌ನಲ್ಲಿ ಆಡಿಯೋ ರಿಲೀಸ್ ಆಗಿದೆ. ದಾವಣಗೆರೆಯ ಕಾಂಗ್ರೆಸ್ ಮುಖಂಡ ಸಿರಾಜ್ ಜೊತೆ ಜಮೀರ್ ಅಹಮ್ಮದ್ ಮಾತನಾಡಿದ್ದಾರೆ ಎನ್ನಲಾದ ಆಡಿಯೋ ಇದಾಗಿದೆ. ಆಡಿಯೋದಲ್ಲಿ ಪಕ್ಷದ ಅಧಿಕೃತ ಅಭ್ಯರ್ಥಿ ವಿರುದ್ಧ ಪಕ್ಷೇತರ ಅಭ್ಯರ್ಥಿಗೆ ಬೆಂಬಲಿಸಿ ಮಾತನಾಡಲಾಗಿದೆ.

ಮುಸ್ಲಿಂ ವೋಟಿಂಗ್ ಕಡಿಮೆ ಇದೆ ಹೊರಗಡೆ ಬಂದ್ರೆ ಅವರನ್ನ ನಂಬೋಕಾಗಲ್ಲ ಕಾಂಗ್ರೆಸ್‌ಗೆ ವೋಟ್ ಹಾಕುತ್ತಾರೆ. ಒತ್ತಾಯ ಮಾಡಿ ಮನೆಯಿಂದ ಕರ್ಕೊಂಡು ಬರಬೇಡಿ. ಪಕ್ಷೇತರರಿಗೆ ಎಸ್‌ಡಿಪಿಐಗೆ ವೋಟ್ ಹಾಕಲಿ ಎಂದು ಜಮೀರ್ ಅಹಮ್ಮದ್ ಹೇಳಿದ್ದಾರೆ ಎಂದು ಆಡಿಯೋದಲ್ಲಿ ಬಿಂಬಿಸಲಾಗಿದೆ.

## ಬೆಂಗಳೂರಿನಲ್ಲಿ ಭಾರೀ ಮಳೆ ಸಾಧ್ಯತೆ: ಜೂನ್ 5ರವರೆಗೆ 'ಯೆಲ್ಲೊ' ಅಲರ್ಟ್ ಘೋಷಣೆ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಮತ್ತು ರಾಜ್ಯದ ದಕ್ಷಿಣ ಒಳನಾಡಿನ ಇತರ ಭಾಗಗಳಲ್ಲಿ ಮಳೆ ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದೆ. ಜೂನ್ 5 ರವರೆಗೆ ನಗರದಲ್ಲಿ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಕೆಲವು ದಿನಗಳವರೆಗೆ ಹಗುರದಿಂದ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಕೆಲವು ಪ್ರದೇಶಗಳಲ್ಲಿ ಗಂಟೆಗೆ 40-50 ಕಿ.ಮೀ ವೇಗದಲ್ಲಿ ಮಳೆಯಾಗುವ ಸಾಧ್ಯತೆ ಇದೆ. 33ಲಿಅ ಗರಿಷ್ಠ ಮತ್ತು 21ಲಿಅ ಕನಿಷ್ಠ ತಾಪಮಾನ ದಾಖಲಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.ವಿದರ್ಭ, ಬಂಗಾಳಕೊಲ್ಲಿ ಮತ್ತು ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತದಿಂದಾಗಿ ಈ ಪರಿಸ್ಥಿತಿ ಉಂಟಾಗಿದೆ. ಕೇರಳ, ತಮಿಳುನಾಡು ಮತ್ತು ಬಂಗಾಳ ಕೊಲ್ಲಿಯ ಕೆಲವು ಭಾಗಗಳಲ್ಲಿ ನೈಋತ್ಯ ಮುಂಗಾರು ಮತ್ತಷ್ಟು ಮುನ್ನಡೆಯಲು ಅನುಕೂಲಕರ ಪರಿಸ್ಥಿತಿಗಳನ್ನು ಸೃಷ್ಟಿಸುತ್ತಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

# ಸಂಗೀತ ನಿರ್ದೇಶಕ ಗುರುಕಿರಣ್ ಇಂದಿನ ಸಮಾಜಕ್ಕೆ ನಗು ಅಗತ್ಯ

## ಜಾಣಜಾಣೆಯರ ನಗೆ ಉತ್ಸವಕ್ಕೆ ಜನಸಾಗರ: ಕಲಾವಿದರ ಆರೋಗ್ಯ ಭದ್ರತೆಗೆ ಜೀವವಿಮೆ ಸುರಕ್ಷೆ

• ಉದಯವಾಹಿನಿ, ಬೆಂಗಳೂರು

ನಗು ಕೇವಲ ಮನರಂಜನೆಯಲ್ಲ, ಅದು ಉತ್ತಮ ಆರೋಗ್ಯ ಮತ್ತು ಸಂತೋಷದ ಬದುಕಿನ ಮೂಲಮಂತ್ರ ಎಂಬ ಸಂದೇಶವನ್ನು ಸಾರಿದ ''ಜಾಣಜಾಣೆಯರ ನಗೆ ಉತ್ಸವ'' ನಗರದ ಚೌಡಯ್ಯ ಮೆಮೋರಿಯಲ್ ಹಾಲ್‌ನಲ್ಲಿ ಅದ್ಧೂರಿಯಾಗಿ ನಡೆಯಿತು.

ಜಾಣಜಾಣೆಯರ ಸಾಹಿತಿ ಕಲಾವಿದರ ಟ್ರಸ್ಟ್ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಸಾವಿರಕ್ಕೂ ಹೆಚ್ಚು ಮಂದಿ ಭಾಗವಹಿಸಿ ನಗೆರಸದ ಸವಿಯನ್ನು ಆಸ್ವಾದಿಸಿದರು.

ಸಮಾಜದಲ್ಲಿ ಸಾಹಿತ್ಯ, ಕಲೆ ಮತ್ತು ಕಲಾವಿದರ ಕಲ್ಯಾಣಕ್ಕಾಗಿ ''ಜಾಣಜಾಣೆಯರ ಸಾಹಿತಿ ಕಲಾವಿದರ ಟ್ರಸ್ಟ್'' ಸ್ಥಾಪನೆಯಾಗಿದ್ದು, ಖ್ಯಾತ ಸಂಗೀತ ನಿರ್ದೇಶಕ ಗುರುಕಿರಣ್ , ವೂಡೇ ಪಿ. ಕೃಷ್ಣ, ಚೌಡಯ್ಯ ಮೆಮೋರಿಯಲ್ ಹಾಲ್ ಕಾರ್ಯದರ್ಶಿ ಡಾ. ಸುಮ ಸುಧೀಂದ್ರ, ಖ್ಯಾತ ಹಾಸ್ಯ ಕಲಾವಿದರಾದ, ಮಿಮಿಕ್ರಿ ದಯಾನಂದ್, ಪ್ರೊ. ಎಂ. ಕೃಷ್ಣಗೌಡ, ಮಿಮಿಕ್ರಿ ಗೋಪಿ, ವೈ.ವಿ. ಗುಂಡೂರಾವ್ ಹಾಗೂ ಎಂ.ಎಸ್. ನರಸಿಂಹಮೂರ್ತಿ , ಟ್ರಸ್ಟಿ ಉದಯ್ ಎಂ. ಪಂಚವೀಣಾ ಖ್ಯಾತಿಯ ಅಂತಾರಾಷ್ಟ್ರೀಯ ವೀಣಾ ವಿದುಷಿ ಡಾ. ಸುಮ ಸುಧೀಂದ್ರ

ಟ್ರಸ್ಟ್‌ಗೆ ಬೆಂಬಲವಾಗಿ ನಿಂತಿದ್ದಾರೆ. ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ 60 ಕಲಾವಿದರಿಗೆ ತಲಾ 10 ಲಕ್ಷ ರೂಪಾಯಿ ಮೌಲ್ಯದ ಆರೋಗ್ಯ ವಿಮಾ




ಪಾಲಿಸಿಯನ್ನು ಉಚಿತವಾಗಿ ವಿತರಿಸಲಾಯಿತು. ಕಲಾವಿದರ ಆರೋಗ್ಯ ಭದ್ರತೆ ಮತ್ತು ಅವರ ಕುಟುಂಬಗಳ ನೆಮ್ಮದಿಗಾಗಿ ಕೈಗೊಂಡ ಈ ಮಹತ್ವದ ಸಾಮಾಜಿಕ ಕಾರ್ಯಕ್ಕೆ ಸಭಿಕರು ಮೆಚ್ಚುಗೆ ವ್ಯಕ್ತಪಡಿಸಿದರು. ಇಂದಿನ ಡಿಜಿಟಲ್ ಯುಗದಲ್ಲಿ ಜನರು ಮೊಬೈಲ್ ಫೋನ್‌ಗಳ ಪರದೆಗಳಲ್ಲೇ ಹೆಚ್ಚು ಸಮಯ ಕಳೆಯುತ್ತಿದ್ದು, ಮುಖಾಮುಖಿಯಾಗಿ ಮಾತನಾಡುವ, ಬೆರೆಯುವ ಮತ್ತು ಒಟ್ಟಾಗಿ ನಗುವ ಸಂಸ್ಕೃತಿ ನಿಧಾನವಾಗಿ ಮರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ನಗೆ ಉತ್ಸವವು ಜನರನ್ನು ಒಂದೇ ವೇದಿಕೆಯಲ್ಲಿ ಸೇರಿಸಿ, ಮಾನವೀಯ ಸಂಬಂಧಗಳ ಮಹತ್ವ ಮತ್ತು ನಗುವಿನ ಆರೋಗ್ಯಕರ ಪರಿಣಾಮವನ್ನು ನೆನಪಿಸಿತು. ವೈದ್ಯಕೀಯ ತಜ್ಞರ ಪ್ರಕಾರ ನಗು ಮಾನಸಿಕ ಒತ್ತಡವನ್ನು ಕಡಿಮೆ ಮಾಡಿ ಆರೋಗ್ಯವನ್ನು ಉತ್ತಮಗೊಳಿಸುವ ಶಕ್ತಿಯುತ ಸಾಧನವಾಗಿದೆ ಎಂಬ ಸಂದೇಶವೂ ಕಾರ್ಯಕ್ರಮದ ಮೂಲಕ ಮೂಡಿಬಂದಿತು. ಖ್ಯಾತ ಸಂಗೀತ ನಿರ್ದೇಶಕ ಗುರುಕಿರಣ್ ವಿಶೇಷ ಅತಿಥಿಯಾಗಿ ಪಾಲ್ಗೊಂಡು ಕಲಾವಿದರ ಸೇವೆಯನ್ನು ಶ್ಲಾಘಿಸಿದರು. ಐಪಿಎಲ್ ಮೂಲಕ ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಂಡಿರುವ ಡ್ರಮ್ಸ್ ದೇವ್ ಅವರ ವಿಶೇಷ ಪ್ರದರ್ಶನ ಪ್ರೇಕ್ಷಕರಿಂದ ಭರ್ಜರಿ ಚಪ್ಪಾಳೆ ಗಳಿಸಿತು. ಮಿಮಿಕ್ರಿ ದಯಾನಂದ್ ಮತ್ತು ಅವರ ತಂಡದ ಮನರಂಜನಾ ಕಾರ್ಯಕ್ರಮಗಳು ನಗೆಗಡಲನ್ನೇ ಸೃಷ್ಟಿಸಿದವು.


### ಜಾಣಜಾಣೆಯರ ನಗೆ ಉತ್ಸವ

ಜನರು ಮೊಬೈಲ್ ನಿಂದ ಹೊರಬಂದು ಪರಸ್ಪರ ಬೆರೆತು, ಮುಖಾಮುಖಿಯಾಗಿ ಮಾತನಾಡಿ, ಸಂತೋಷ ಹಂಚಿಕೊಳ್ಳುವ ಸಂಸ್ಕೃತಿ ಬೆಳೆಯಬೇಕು. ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಇಂತಹ ಕಾರ್ಯಕ್ರಮಗಳು ನೆರವಾಗುತ್ತವೆ ಎಂದು ಅಭಿಪ್ರಾಯಪಟ್ಟರು. ನಗುವಿನ ಮೂಲಕ ಆರೋಗ್ಯ, ಮಾನವೀಯತೆ, ಸ್ನೇಹ ಮತ್ತು ಸಾಮಾಜಿಕ ಬಾಂಧವ್ಯವನ್ನು ಬಲಪಡಿಸಿದ ''ಜಾಣಜಾಣೆಯರ ನಗೆ ಉತ್ಸವ'' ಬೆಂಗಳೂರಿನ ಸಾಂಸ್ಕೃತಿಕ ವಲಯದಲ್ಲಿ ಹೊಸ ಮಾದರಿಯ ಕಾರ್ಯಕ್ರಮವಾಗಿ ಗುರುತಿಸಿಕೊಂಡಿದ್ದು, ಸಾವಿರಾರು ಜನರ ಹರ್ಷೋದ್ಗಾರ ಮತ್ತು ನಗು ಕಾರ್ಯಕ್ರಮದ ಯಶಸ್ಸಿಗೆ ಸಾಕ್ಷಿಯಾಯಿತು.

ಉದಯವಾಹಿನಿ
ಪ್ರಾದೇಶಿಕ
ಮಂಗಳವಾರ
02 ಜೂನ್ 2026


# ಸೋಮಣ್ಣ ದೊರೆತಿರೋದು ತುಮಕೂರು ಜಿಲ್ಲೆಯ ಭಾಗ್ಯ ಗುಣಗಾನ ಮಾಡಿದ ಕಾಂಗ್ರೆಸ್ ಶಾಸಕ

• ಉದಯವಾಹಿನಿ, ತೂಮಕೂರು


ಉದಯವಾಹಿನಿ ಚಿತ್ರ

ಸೋಮಣ್ಣ ದೊರೆತಿರೋದು ತುಮಕೂರು ಜಿಲ್ಲೆಯ ಭಾಗ್ಯ ಎಂದು ಗುಬ್ಬಿ ಕಾಂಗ್ರೆಸ್ ಶಾಸಕ ಎಸ್‌ಆರ್ ಶ್ರೀನಿವಾಸ್ ಕೇಂದ್ರ ಸಚಿವ ವಿ.ಸೋಮಣ್ಣರನ್ನು ಹಾಡಿ ಹೊಗಳಿದ್ದಾರೆ.

ರೈಲ್ವೆ ಅಂಡರ್‌ಪಾಸ್ ಕಾಮಗಾರಿ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗುಬ್ಬಿ ವಿಧಾನಸಭಾ ಕ್ಷೇತ್ರದಲ್ಲಿ ರೈಲ್ವೆಯ ಇನ್ನಾವುದೇ ಕಾಮಗಾರಿಗಳು ಬಾಕಿ ಉಳಿದಿಲ್ಲ. ಇದೆಲ್ಲಾ ಕ್ರೆಡಿಟ್ ರೈಲ್ವೆ ಸಚಿವ ಸೋಮಣ್ಣ ಅವರಿಗೆ ಸೇರಬೇಕು. ಬಹುಶಃ ಒಬ್ಬ ಲೋಕಸಭಾ ಪ್ರತಿನಿಧಿ ಇಷ್ಟೆಲ್ಲ ಕೆಲಸ ಮಾಡಬಹುದಾ ಅನ್ನೋದನ್ನ ವಿ ಸೋಮಣ್ಣ ತೋರಿಸಿಕೊಟ್ಟಿದ್ದಾರೆ. ತಮ್ಮ ಅತ್ಯಂತ ಕ್ರಿಯಾಶೀಲ ಮುಖೇನ ಸಾರ್ವಜನಿಕರ ಕೆಲಸವನ್ನ ಮಾಡಿಕೊಟ್ಟಿದ್ದಾರೆ. ನಾವು ಸುಮಾರು ಜನ ರಾಜಕಾರಣಿಗಳನ್ನ ನೋಡಿದ್ದೇವೆ. ಲೋಕಸಭಾ ಸದಸ್ಯರನ್ನ ನೋಡಿದ್ದೇವೆ. ಒಬ್ಬ ಲೋಕಸಭಾ ಸದಸ್ಯ ಈ ಪರಿ ಕೆಲಸ ಮಾಡಬಹುದು ಅನ್ನೋದು ಸೋಮಣ್ಣ ಅವರನ್ನ ನೋಡಿ ಮನವರಿಕೆ ಆಗಿದ್ದು ಎಂದು ಗುಣಗಾನ ಮಾಡಿದರು. ಗುಬ್ಬಿ ಕ್ಷೇತ್ರದ ಎಲ್ಲಾ ರೈಲ್ವೆ ಅಂಡರ್ ಪಾಸ್‌ಗಳ ಕಾಮಗಾರಿ ಮಾಡಿ, ಹೈವೇ ಕ್ಲಿಯರ್ ಮಾಡಿದ ಕೀರ್ತಿ ಸೋಮಣ್ಣ ಅವರಿಗೆ ಸಲ್ಲುತ್ತದೆ. ಮುಂದಿನ ದಿನಗಳಲ್ಲಿ ಗುಬ್ಬಿ ಕ್ಷೇತ್ರದ ಜನ ಸೋಮಣ್ಣ ಅವರ ಋಣ ತಿರಿಸುವ ಕೆಲಸ ಮಾಡಬೇಕಾಗುತ್ತದೆ. ಚುನಾವಣಾ ಸಂದರ್ಭದಲ್ಲಿ ಮಾತ್ರ ರಾಜಕೀಯ ಮಾಡಬೇಕು. ಚುನಾವಣೆ ಆದ ನಂತರ ಅಭಿವೃದ್ಧಿ ಕೆಲಸದಲ್ಲಿ ತಾರತಮ್ಯ ಮಾಡಬಾರದು ಅನ್ನೋದು ಸೋಮಣ್ಣ ಅವರ ಧ್ಯೇಯ. ಅದರಂತೆ ಸೋಮಣ್ಣ ನಡೆದುಕೊಳ್ಳುತ್ತಿದ್ದಾರೆ.

**ನಮ್ಮ ತಾಲ್ಲೂಕಿಗೆ 80 ರಿಂದ 90 ಕೋಟಿ ಹಣವನ್ನ ಬರೀ ರಸ್ತೆ ಅಭಿವೃದ್ಧಿಗೆ ಕೊಟ್ಟಿದ್ದಾರೆ. ಅತ್ಯಂತ ಕ್ರಿಯಾಶೀಲ ಎಂಪಿಯನ್ನು ನಾವು ಪಡೆದುಕೊಂಡಿದ್ದು ತುಮಕೂರು ಜಿಲ್ಲೆಯ, ನಮ್ಮ ಭಾಗ್ಯ. ಸೋಮಣ್ಣ ಇಷ್ಟೊಂದು ಕೆಲಸ ಮಾಡುತ್ತಾರೆ ಎಂದು ನಾವು ಅಂದುಕೊಂಡಿರಲಿಲ್ಲ. ಇಷ್ಟೊಂದು ಅದ್ಭುತ ಕೆಲಸ ಮಾಡುವ ಶಕ್ತಿ ದೇವರು ಕೊಟ್ಟಿದ್ದಾರೆ. ಇನ್ನಷ್ಟು ಆರೋಗ್ಯ ಆಯುಷ್ಯ ಕೊಟ್ಟು ಕಾಪಾಡಲಿ. ಅವರಿಗೆ ಮುಂದೆ ಒಳ್ಳೆ ಹುದ್ದೆ ಸಿಗಲಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಶಾಸಕ ಎಸ್‌ಆರ್ ಶ್ರೀನಿವಾಸ್**

# ಬಂಡೆಯ ಸಿ.ಎಂ ಕನಸಿಗೆ ಬಲ ತುಂಬಿದ ಜಿಲ್ಲೆ

• ಉದಯವಾಹಿನಿ, ರಾಮನಗರ

ಕಾಂಗ್ರೆಸ್ ಶಾಸಕಾಂಗ ಪಕ್ಷದ (ಸಿಎಲ್‌ಪಿ) ನಾಯಕನಾಗಿ ಆಯ್ಕೆಯಾಗಿ ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಪದಗ್ರಹಣ ಮಾಡಲು ಸಿದ್ಧತೆ ನಡೆಸುತ್ತಿರುವ ಡಿ.ಕೆ. ಶಿವಕುಮಾರ್ ಅವರ 'ಸಿ.ಎಂ' ಕನಸಿಗೆ ಬೆಂಗಳೂರು ದಕ್ಷಿಣ ಜಿಲ್ಲೆ ಬಲ ತುಂಬಿದೆ. ಸ್ವಂತ ಜಿಲ್ಲೆಯ ನಾಲ್ಕೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆದ್ದಿರುವುದರ ಹಿಂದೆ ಅವರನ್ನು ಸಿ.ಎಂ ಆಗಿ ಕಾಣಬೇಕೆಂಬ ಮತದಾರರ ಹಂಬಲವೂ ಇದೆ.

2023ರಲ್ಲಿ ವಿಧಾನಸಭಾ ಚುನಾವಣೆಯ ಪ್ರಚಾರದ ಸಂದರ್ಭದಲ್ಲಿ ಶಿವಕುಮಾರ್ ಅವರು 'ಪೆನ್ನು–ಪೇಪರ್ ಕೊಟ್ಟು ನನಗೊಂದು ಅವಕಾಶ ಕೊಡಿ' ಎಂದು ಮತದಾರರಲ್ಲಿ 'ಮುಖ್ಯಮಂತ್ರಿ' ಹುದ್ದೆಯ ಮನದಾಳ ಹಂಚಿಕೊಂಡಿದ್ದರು. ಒಕ್ಕಲಿಗರ ಪ್ರಾಬಲ್ಯದ ಮೈಸೂರು ಭಾಗದ ಜಿಲ್ಲೆಗಳಲ್ಲಿ ಒಂದಾಗಿರುವ ಬೆಂಗಳೂರು ದಕ್ಷಿಣದಲ್ಲಿ (ರಾಮನಗರ) ಅದಕ್ಕೆ ಮತದಾರರು ಸ್ಪಂದಿಸಿದ್ದರು.

ಜೆಡಿಎಸ್ ಭದ್ರಕೋಟೆಯಾಗಿರುವ ರಾಮನಗರದಲ್ಲೇ ಕೈಗೆ ಶಕ್ತಿ ತುಂಬಿದ್ದ ಮತದಾರರು, ನಿಖಿಲ್ ಕುಮಾರಸ್ವಾಮಿ ವಿರುದ್ಧ ಎಚ್.ಎ. ಇಕ್ಬಾಲ್ ಹುಸೇನ್ ಅವರನ್ನು ಗೆಲ್ಲಿಸಿ ವಿಧಾನಸೌಧಕ್ಕೆ ಕಳಿಸಿದ್ದರು. ಕಾಂಗ್ರೆಸ್ ಭದ್ರಕೋಟೆಯಾಗಿದ್ದ ಕನಕಪುರದಲ್ಲಿ ಶಿವಕುಮಾರ್ ರಾಜ್ಯದಲ್ಲಿ ಅತ್ಯಂತ ಹೆಚ್ಚು ಲೀಡ್‌ನಲ್ಲಿ ಗೆದಿದ್ದರು. ಮಾಗಡಿಯಲ್ಲಿ ಎ. ಮಂಜುನಾಥ್ ವಿರುದ್ಧ ಸೋತಿದ್ದ ಎಚ್.ಸಿ. ಬಾಲಕೃಷ್ಣ ಅವರಿಗೆ ಮತದಾರರು ಮತ್ತೆ ಮಣೆ ಹಾಕಿ ಗೆಲುವಿನ ಮಾಲೆ ಹಾಕಿದ್ದರು. ಚನ್ನಪಟ್ಟಣದಲ್ಲಿ ಎಚ್.ಡಿ. ಕುಮಾರಸ್ವಾಮಿ ಗೆಲುವು ಸಾಧಿಸಿದ್ದರು. ಆದರೆ, ನಂತರದ ವರ್ಷದಲ್ಲಿ ನಡೆದ ಲೋಕಸಭಾ ಚುನಾವಣೆಗೆ ಮಂಡ್ಯದಲ್ಲಿ ಸ್ಪರ್ಧಿಸಲು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದರು. ರಾಜೀನಾಮೆಯಿಂದ ತೆರವಾದ ಚನ್ನಪಟ್ಟಣಕ್ಕೆ ಉಪ ಚುನಾವಣೆ ಘೋಷಣೆಯಾಯಿತು. ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ನಿಖಿಲ್ ಕುಮಾರಸ್ವಾಮಿ ಹೆಸರು ಘೋಷಣೆಯಾಯಿತು. ಇದರಿಂದಾಗಿ ಟಿಕೆಟ್‌ನ ಪ್ರಬಲ ಆಕಾಂಕ್ಷಿಯಾಗಿದ್ದ ಬಿಜೆಪಿಯ ಸಿ.ಪಿ. ಯೋಗೇಶ್ವರ್ ರಾತ್ರೋರಾತ್ರಿ ಕಮಲ ತೊರೆದು 'ಕೈ' ಪಾಳಯ ಸೇರಿ ಅಭ್ಯರ್ಥಿಯಾಗಿದ್ದರು. ಸಹೋದರರು ಮತ್ತು ಯೋಗೇಶ್ವರ್ ಅವರ ಜಂಟಿ ಕಾರ್ಯಾಚರಣೆಯಿಂದಾಗಿ ಉಪ ಚುನಾವಣೆಯಲ್ಲಿ ಕ್ಷೇತ್ರವು 'ಕೈ' ಪಾಲಾಯಿತು. ಯೋಗೇಶ್ವರ್ ಗೆಲ್ಲಿಸುವ ಮೂಲಕ ಸಹೋದರರು ಲೋಕಸಭಾ ಚುನಾವಣೆ ಸೋಲಿನ ಸೇಡು ತೀರಿಸಿಕೊಂಡಿದ್ದರು. ಉಪ ಚುನಾವಣೆ ಗೆಲುವಿನೊಂದಿಗೆ ಜೆಡಿಎಸ್ ಶೂನ್ಯಕ್ಕಿಳಿದು, ಜಿಲ್ಲೆಯ ನಾಲ್ಕೂ ಕ್ಷೇತ್ರಗಳು ಕಾಂಗ್ರೆಸ್ ಪಾಲಾದವು. ಇವೆಲ್ಲದರ ಹಿಂದೆ ಇದ್ದದ್ದು ಸಹ ಶಿವಕುಮಾರ್ ಅವರ ಮುಖ್ಯಮಂತ್ರಿ ಹುದ್ದೆ ಕನಸಿಗೆ ನೀರೆರೆಯಬೇಕೆಂಬ ಮತದಾರರ ಒಲವು. ಕಡೆಗೂ ಅದು ಈಡೇರಲು ಕ್ಷಣಗಣನೆ ಶುರುವಾಗಿದೆ. ಜೂನ್ 3ರಂದು ಶಿವಕುಮಾರ್ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಅವರು ಬಯಸಿದಂತೆ ಕೈಗೆ 'ಪೆನ್ನು–ಪೇಪರ್' ಸಿಗಲಿದೆ.



ಉದಯವಾಹಿನಿ ಚಿತ್ರ

## ಹೊಸ ಅಧ್ಯಾಯ ಆರಂಭ

**ಉಪ ಚುನಾವಣೆಗೆ ಮುಂಚೆ 'ಚನ್ನಪಟ್ಟಣದಿಂದ ನನ್ನ ರಾಜಕೀಯದ ಹೊಸ ಅಧ್ಯಾಯ ಪ್ರಾರಂಭ' ಎಂದು ಡಿ.ಕೆ. ಶಿವಕುಮಾರ್ ಅವರು ಕೆಂಗಲ್ ಆಂಜನೇಯ ದೇವಸ್ಥಾನದಲ್ಲಿ ಹೇಳುವ ಮೂಲಕ. ಆರು ತಿಂಗಳು ಮುಂಚೆಯೇ ಪ್ರಚಾರಕ್ಕೆ ಚಾಲನೆ ನೀಡಿದರು. ಅಷ್ಟೊತ್ತಿಗಾಗಲೇ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯಿಂದ ಕಣಕ್ಕಿಳಿದಿದ್ದ ಗೌಡರ ಕುಟುಂಬದ ಅಳಿಯ ಡಾ. ಸಿ.ಎನ್. ಮಂಜುನಾಥ್ ವಿರುದ್ಧ ಶಿವಕುಮಾರ್ ಸಹೋದರ ಡಿ.ಕೆ. ಸುರೇಶ್ ಸೋತ್ತಿದ್ದರು. ಕ್ಷೇತ್ರಕ್ಕೆ ಅವರ ಹೆಸರೇ ಬಲವಾಗಿ ಕೇಳಿ ಬಂದಿತ್ತು. ಆದರೆ, ಡಿ.ಕೆ ಸಹೋದರರು ಎಲ್ಲೂ ಅಭ್ಯರ್ಥಿ ಗುಟ್ಟು ಬಿಡದೆ ಗೆಲುವಿಗೆ ಕ್ಷೇತ್ರವನ್ನು ಹದಗೊಳಿಸಿದ್ದರು. ಅನಿರೀಕ್ಷಿತ ಬೆಳವಣಿಗೆಯಲ್ಲಿ ಬಿಜೆಪಿ ತೊರೆದು ಬಂದ ಎದುರಾಳಿ ಸಿ.ಪಿ. ಯೋಗೇಶ್ವರ್‌ಗೆ ಟಿಕೆಟ್ ಕೆಟು ಗೆಲಿಸಿಕೊಂಡರು.**

## ಮರಳೆ ಗವಿಮಠದ ಶ್ರೀಗಳಿಂದ ಶಿವಕುಮಾರ್‌ಗೆ ಆಶೀರ್ವಾದ

ತಾಲ್ಲೂಕಿನ ಮರಳೆ ಗವಿಮಠದ ಮುಮ್ಮಡಿ ಶಿವರುದ್ರ ಸ್ವಾಮೀಜಿ, ನಿಯೋಜಿತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಬೆಂಗಳೂರಿನ ಅವರ ನಿವಾಸದಲ್ಲಿ ಭೇಟಿ ಮಾಡಿ ಆಶೀರ್ವದಿಸಿದರು. ಡಿ.ಕೆ.ಶಿವಕುಮಾರ್ ಅವರು ಮರಳೆ ಗವಿಮಠದ ಸದ್ಭಕ್ತರಾಗಿದ್ದು ರಾಜಕೀಯ ಪ್ರವೇಶ ಮಾಡಿದ ದಿನದಿಂದಲೂ ಯಾವುದೇ ಒಳ್ಳೆ ಕಾರ್ಯ ಮಾಡುವ ಸಂದರ್ಭದಲ್ಲಿ ಮಠಕ್ಕೆ ಭೇಟಿ ನೀಡಿ ಪೂಜೆ ನೆರವೇರಿಸುವುದು ವಾಡಿಕೆ. 'ಶಿವಯೋಗಿ ಮುನೇಶ್ವರರು, ಕಾಲಾಗ್ನಿ ರುದ್ರಮುನಿಗಳು ಒಳ್ಳೆಯದನ್ನು ಮಾಡಲಿ. ತಾಲ್ಲೂಕಿನ ಮಗ ಈ ಮಟ್ಟಕ್ಕೆ ಬೆಳೆದು ಸಿ.ಎಂ ಆಗುವ ಮೂಲಕ ತಾಲ್ಲೂಕಿಗೆ ಕೀರ್ತಿ ತಂದಿದ್ದೀರಿ. ತಾಲ್ಲೂಕಿನ ಜನರಿಗೆ ಅತ್ಯಂತ ಸಂತಸವಾಗುತ್ತಿದೆ ಎಂದರು.


ಉದಯವಾಹಿನಿ ಚಿತ್ರ

# ಮಳೆ ಬಂದರೆ ಕೆರೆಯಾಗಿ ಮಾರ್ಪಡುತ್ತದೆ ಹುಳಿಯಾರು ಹೆದ್ದಾರಿ! ಮಳೆ ನೀರು ನಿಂತು ವಾಹನ ಸಂಚಾರಕ್ಕೆ ಅಡಚಣೆ

• ಉದಯವಾಹಿನಿ, ಹುಳಿಯಾರು


ಉದಯವಾಹಿನಿ ಚಿತ್ರ

ಮಳೆ ಬಂದರೆ ಸಾಕು ಹುಳಿಯಾರಿನಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ 69 ರಸ್ತೆಯು ಮಿನಿ ಕೆರೆಯಾಗಿ ಮಾರ್ಪಡುತ್ತಿದೆ. ಕಳಪೆ ಹಾಗೂ ಅವೈಜ್ಞಾನಿಕ ಚರಂಡಿ ಕಾಮಗಾರಿಯಿಂದಾಗಿ ಸಾರ್ವಜನಿಕರು ಮತ್ತು ಸ್ಥಳೀಯರು ನಿತ್ಯ ನರಕಯಾತನೆ ಅನುಭವಿಸುತ್ತಿದ್ದಾರೆ. ಕಳೆದ ಎರಡು ದಿನಗಳ ಹಿಂದೆ ಸುರಿದ ಮಳೆಯಿಂದಾಗಿ ಮೊಳಕಾಲುದ್ದದ್ದ ನೀರು ನಿಂತು ವಾಹನ ಸಂಚಾರಕ್ಕೆ ಭಾರಿ ತೊಂದರೆಯುಂಟಾಗಿತ್ತು.

ಮಂಗಳೂರುನಿಂದ ವಿಶಾಖಪಟ್ಟಣ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಹುಳಿಯಾರು ಪಟ್ಟಣದಲ್ಲಿ ಕಳೆದ ಆರೇಳು ವರ್ಷಗಳಿಂದ ನಡೆಯುತ್ತಿದ್ದರೂ ಸಹ ಇದೂವರೆವಿಗೂ ಪೂರ್ಣವಾಗಿಲ್ಲ. ಒಂದೊಂದು ಕಿಲೋ ಮೀಟರ್‌ಗೂ ಸಹ ಪ್ರತಿಭಟನೆ, ಧರಣಿ ಮಾಡಿ ಕಾಮಗಾರಿ ಮಾಡಿಸಿಕೊಳ್ಳಬೇಕಾದ ಅನಿವಾರ್ಯ ಕರ್ಮ ಸೃಷ್ಠಿಯಾಗಿತ್ತು. ಆಗಿರುವ ಕಾಮಗಾರಿಯೂ ಸಹ ಅವೈಜ್ಞಾನಿಕವಾಗಿದ್ದು ಸಮರ್ಪಕವಾಗಿ ಚರಂಡಿ ನೀರು ಹರಿಯುವುದಿಲ್ಲ.

ಮಳೆ ಸುರಿಯುತ್ತಿದ್ದಂತೆ ಚರಂಡಿಯಲ್ಲಿ ನೀರು ಸರಾಗವಾಗಿ ಹರಿಯುವ ಬದಲು, ರಸ್ತೆಯ ಮೇಲೆ ಉಕ್ಕಿ ಹರಿಯುತ್ತಿದೆ. ಮಳೆ ನೀರಿನ ಜತೆಗೆ ಚರಂಡಿಯಲ್ಲಿ ಸಂಗ್ರಹವಾದ ತ್ಯಾಜ್ಯ ಹೆದ್ದಾರಿಯಲ್ಲೇ ನಿಲ್ಲುತ್ತಿರುವುದರಿಂದ ವಾಹನ ಸವಾರರು ಜೀವ ಕೈಯಲ್ಲಿ ಹಿಡಿದು ಸಂಚರಿಸುವಂತಾಗಿದೆ. ರಸ್ತೆ ಸಂಪೂರ್ಣ ಜಲಾವೃತವಾಗುತ್ತಿರುವುದರಿಂದ ವಾಹನಗಳ ಸುಗಮ ಸಂಚಾರಕ್ಕೆ ಭಾರಿ ಅಡಚಣೆ ಉಂಟಾಗುತ್ತದೆ. ಕೇವಲ ರಸ್ತೆಯಷ್ಟೇ ಅಲ್ಲ, ರಸ್ತೆ ಬದಿಯಲ್ಲಿರುವ ಮನೆಗಳು ಮತ್ತು ಅಂಗಡಿ ಮಳಿಗೆಗಳಿಗೂ ಚರಂಡಿಯ ಕೊಳಚೆ ಮಿಶ್ರಿತ ಮಳೆ ನೀರು ನುಗ್ಗುತ್ತಿದೆ.

## ಕುರಿಗಾಹಿ ಮೇಲೆ ಹುಲಿ ದಾಳಿ : ಕುಣಗಳ್ಳಿಯಲ್ಲಿ ಘಟನೆ

• ಉದಯವಾಹಿನಿ, ಗುಂಡ್ಲುಪೇಟೆ


ಉದಯವಾಹಿನಿ ಚಿತ್ರ

ಕುರಿ ಮೇಯಿಸಲು ಹೋಗಿದ್ದ ವ್ಯಕ್ತಿ ಮೇಲೆ ಹುಲಿ ದಾಳಿ ನಡೆಸಿ ಗಾಯಗೊಳಿಸಿರುವ ಘಟನೆ ತಾಲ್ಲೂಕಿನ ಗೋಪಾಲಪುರ ಸಮೀಪದ ಕುಣಗಳ್ಳಿ ಬಳಿ ನಡೆದಿದೆ.

ನೂರಾಳು ಹುಲಿ ದಾಳಿಯಿಂದ ಗಾಯಗೊಂಡಿರುವ ವ್ಯಕ್ತಿಯಾಗಿದ್ದು ಗೋಪಾಲಸ್ವಾಮಿ ಬೆಟ್ಟ ಅರಣ್ಯ ವಲಯದ ಪ್ರದೇಶದಲ್ಲಿ ಭಾನುವಾರ ಬೆಳಗ್ಗೆ ಕುರಿ ಮೇಯಿಸಲು ಹೋಗಿದ್ದಾಗ ಹುಲಿ ಹಠಾತ್ ದಾಳಿ ನಡೆಸಿದೆ. ವಿಷಯ ತಿಳಿದು ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿ, ಗಾಯಾಳುವನ್ನು ಗುಂಡ್ಲುಪೇಟೆ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದು ಚಿಕಿತ್ಸೆ ಕೊಡಿಸಲಾಗಿದೆ ಸದ್ಯ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ಅರಣ್ಯಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ವರ್ಷಾಂತ್ಯಕ್ಕೆ ತಾಲ್ಲೂಕಿನ 105 ಕೆರೆಗಳಿಗೆ ಎತ್ತಿನಹೊಳೆ ನೀರು: ಶಾಸಕ ಷಡಕ್ಷರಿ

• ಉದಯವಾಹಿನಿ, ತಿಪಟೂರು


ಉದಯವಾಹಿನಿ ಚಿತ್ರ

ವರ್ಷಾಂತ್ಯದ ವೇಳೆಗೆ ತಾಲ್ಲೂಕಿನ 105 ಕೆರೆಗಳಿಗೆ ಎತ್ತಿನಹೊಳೆ ನೀರು ಹರಿಸಲಾಗುವುದು. ಅರಸೀಕೆರೆ ಹಾಗೂ ತಿಪಟೂರು ತಾಲ್ಲೂಕಿನ ಕೆರೆಗಳನ್ನು ತುಂಬಿಸುವ ಯೋಜನೆ ಶೀಘ್ರದಲ್ಲೇ ಸಾಕಾರಗೊಳ್ಳಲಿದ್ದು, ಇದರಿಂದ ಮೀನುಗಾರಿಕೆಗೆ ವಿಪುಲ ಅವಕಾಶಗಳು ದೊರೆಯಲಿವೆ ಎಂದು ಶಾಸಕ ಕೆ. ಷಡಕ್ಷರಿ ತಿಳಿಸಿದರು.

ನಗರದ ಮೀನುಗಾರಿಕೆ ಇಲಾಖೆ ಆವರಣದಲ್ಲಿ ಆಯೋಜಿಸಿದ್ದ ಮೀನುಗಾರಿಕೆ ಇಲಾಖೆ ರಾಜ್ಯ ವಲಯ ಹಾಗೂ ಜಿಲ್ಲಾ ವಲಯ ಯೋಜನೆಯಡಿ ವಿವಿಧ ಸವಲತ್ತುಗಳು ಮತ್ತು ಮತ್ಸ್ಯವಾಹಿನಿ ವಾಹನ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮೀನುಗಾರಿಕೆಯನ್ನು ರೈತರು ಉಪಕಸುಬಾಗಿ ಅಳವಡಿಸಿಕೊಳ್ಳಬಹುದು. ಇದರಿಂದ ಹೆಚ್ಚಿನ ಆದಾಯ ಗಳಿಸಲು ಸಾಧ್ಯವಿದೆ ಎಂದರು.

ಸಿಲ್ಕ್, ಮಿಲ್ಕ್ ಹಾಗೂ ಫಿಶ್ ರೈತರ ಆದಾಯವನ್ನು ಹೆಚ್ಚಿಸುವ ಪ್ರಮುಖ ಉಪಕಸುಬುಗಳಾಗಿವೆ. ತಾಲ್ಲೂಕಿನಲ್ಲಿ ಮೀನುಗಾರಿಕೆಗೆ ವಿಪುಲಅವಕಾಶಗಳಿದ್ದು, ವರ್ಷಾಂತ್ಯಕ್ಕೆ 105 ಕೆರೆಗಳಿಗೆ ಎತ್ತಿನಹೊಳೆ ನೀರು ಹರಿಯುವ ಹಿನ್ನೆಲೆಯಲ್ಲಿ ಮೀನುಗಾರಿಕೆ ಚಟುವಟಿಕೆಗಳಿಗೆ ಮತ್ತಷ್ಟು ಉತ್ತೇಜನ ಸಿಗಲಿದೆ ಎಂದು ಅವರು ಹೇಳಿದರು.

ಮೀನುಗಾರಿಕೆ ಕೇವಲ ಆದಾಯ ತರುವ ಉದ್ಯಮವಲ್ಲ, ಮನುಷ್ಯನ ಆರೋಗ್ಯಕ್ಕೂ ಉತ್ತಮ ಆಹಾರ ಒದಗಿಸುವ ಕ್ಷೇತ್ರವಾಗಿದೆ. ತಾಲ್ಲೂಕಿನ ಮೀನುಗಾರರಿಗೆ ಅಗತ್ಯ ಸೌಕರ್ಯ ಕಲ್ಪಿಸಲು ಯೋಜನೆ ರೂಪಿಸಲಾಗಿದ್ದು, ಮತ್ಸ್ಯಾಶ್ರಯ ಯೋಜನೆಯಡಿ ಮನೆ ನಿರ್ಮಾಣಕ್ಕೂ ಕ್ರಮ ಕೈಗೊಳ್ಳಲಾಗಿದೆ. ತಮ್ಮ ಜಮೀನುಗಳಲ್ಲಿ ಮೀನುಗಾರಿಕೆ ನಡೆಸುವ ರೈತರಿಗೆ ಅಗತ್ಯ ಅನುದಾನ ಒದಗಿಸಲಾಗುವುದು ಎಂದು ಹೇಳಿದರು.

**ನೊಣವಿನಕೆರೆ, ಈಚನೂರು ಕೆರೆ, ಕರಡಿಕೆರೆ ಸೇರಿದಂತೆ ಹಲವಾರು ಗ್ರಾಮಗಳಲ್ಲಿ ದೊಡ್ಡ ಕೆರೆಗಳಿದ್ದು, ಮೀನುಗಾರಿಕೆಗೆ ಉತ್ತಮ ಅವಕಾಶಗಳಿವೆ. ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಮೀನು ಹೊಂಡಗಳ ನಿರ್ಮಾಣಕ್ಕೆ ಅನುದಾನ ನೀಡಲಾಗುವುದು. -ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ನಂಜುಂಡಪ್ಪ**

# ನಮ್ಮೂರ ಶಾಲೆ ಮುಚ್ಚಲು ಬಿಡುವುದಿಲ್ಲ: ಕೂರಗಲ್ಲು ಗ್ರಾಮಸ್ಥರ ಪ್ರತಿಭಟನೆ

## ಬಡಜನರ ಮಕ್ಕಳಿಗೆ ಶಿಕ್ಷಣವನ್ನು ಖಾತ್ರಿಪಡಿಸಬೇಕಿದ್ದ ಸರ್ಕಾರವೇ ಶಿಕ್ಷಣದ ವ್ಯಾಪಾರಕ್ಕೆ ನಿಂತಿದೆ

• ಉದಯವಾಹಿನಿ ,ಪಿರಿಯಾಪಟ್ಟಣ


ಉದಯವಾಹಿನಿ ಚಿತ್ರ

ತಾಲ್ಲೂಕು ಕೂರಗಲ್ಲು ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯನ್ನು ವಿಲೀನದ ಹೆಸರಿನಲ್ಲಿ ಮುಚ್ಚಲು ಹೊರಟಿರುವ ಸರ್ಕಾರದ ನಡೆ ಖಂಡಿಸಿ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯ ನೇತೃತ್ವದಲ್ಲಿ ಗ್ರಾಮಸ್ಥರು, ಪೋಷಕರು ಹಾಗೂ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿ ಆಕ್ರೋಶ ಹೊರಹಾಕಿದರು.

ಪ್ರತಿಭಟನೆಯನ್ನು ಜಿಲ್ಲಾ ಅಧ್ಯಕ್ಷರು, ಹಾಗೂ ಮೈಸೂರು ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಉಪಾಧ್ಯಕ್ಷರಾದ ಬಸವರಾಜು ಅವರು ಮಾತನಾಡಿ ಕೂರಗಲ್ಲು ಗ್ರಾಮದ ಶಾಲೆಯನ್ನು ಮುಚ್ಚಿ ನಾಲ್ಕು ಕಿಲೋಮೀಟರ್ ದೂರ ಇರುವ ಬೆಟ್ಟದಪುರದ ಶಾಲೆಗೆ ವಿಲೀನಗೊಳಿಸಲು ಸರ್ಕಾರ ಆದೇಶಿಸಿದೆ. ಬಡಜನರ ಮಕ್ಕಳಿಗೆ ಶಿಕ್ಷಣವನ್ನು ಖಾತ್ರಿಪಡಿಸಬೇಕಿದ್ದ ಸರ್ಕಾರವೇ ಶಿಕ್ಷಣದ ವ್ಯಾಪಾರಕ್ಕೆ ನಿಂತಿದೆ. ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಹೆಸರಲ್ಲಿ ಹಳ್ಳಿಯ ಶಾಲೆಗಳನ್ನು ಮುಚ್ಚುತ್ತಿದೆ. ಕೆಪಿಎಸ್ ಶಾಲೆಗಳ ಮೇಲುಸ್ತುವಾರಿಯನ್ನು ಹೊರಗುತ್ತಿಗೆ ಕೊಡುವುದರ ಮೂಲಕ ಸಾರ್ವಜನಿಕ ಶಿಕ್ಷಣವನ್ನು ಕಂಪನಿಗಳಿಗೆ ಹಂತ–ಹಂತವಾಗಿ ಖಾಸಗಿ ಕಂಪನಿಗಳಿಗೆ ಧಾರೆಯೆರೆಯುವ ಹುನ್ನಾರ ಮಾಡಲಾಗಿದೆ. ಈಶ್ವರಚಂದ್ರ ವಿದ್ಯಾಸಾಗರ್, ಜ್ಯೋತಿಬಾಯಿಫುಲೆ. ಸಾವಿತ್ರಿಬಾಯಿಫುಲೆ, ಕುದ್ಮುಲ್ ರಂಗರಾವ್ ಮುಂತಾದವರ ಹೋರಾಟದಿಂದ ಇಂದು ನಮ್ಮ ನಾಡಿನ ಎಲ್ಲಾ ಮಕ್ಕಳಿಗೆ ಶಿಕ್ಷಣ ದೊರೆಯುತ್ತಿದೆ. ಈ ಮಹನೀಯರಿಗೆ ಅವಮಾನ ಮಾಡಿ ಸರ್ಕಾರವು ಶಾಲೆಗಳನ್ನು ಮುಚ್ಚುತ್ತಿದೆ. ಇಂತಹ ಶಾಲೆಗಳನ್ನು ಮುಚ್ಚುವುದು ಬಡಮಕ್ಕಳ ಭವಿಷ್ಯವನ್ನಷ್ಟೇ ಕತ್ತಲೆಗೆ ದೂಡಿದಂತೆ. ಅಲ್ಲದೇ ಸರ್ಕಾರದ ಈ ನೀತಿಯು ಕಡು ಜನವಿರೋಧಿಯಾಗಿದೆ' ಎಂದು ವ್ಯಕ್ತಪಡಿಸಿದರು.

### ಮೋಸ ಮಾಡಿ ಒಪ್ಪಿಗೆ ಪತ್ರಕ್ಕೆ ಸಹಿ

**''ರಾಮನಗರ ಮತ್ತು ಅರಸೀಕೆರೆ ತಾಲೂಕುಗಳಲ್ಲಿ ಶಾಲೆ ಮುಚ್ಚಲು ಊರಿನ ಜನರಿಗೆ ಮೋಸ ಮಾಡಿ ಒಪ್ಪಿಗೆ ಪತ್ರಕ್ಕೆ ಸಹಿ ಮಾಡಿಸಲಾಗಿದೆ. ಈ ಕುರಿತು ಗ್ರಾಮಸ್ಥರು ಎಚ್ಚರವಾಗಿರಬೇಕು. ಸರ್ಕಾರದ ಮೋಸಗಳಿಗೆ ಬಲಿಯಾಗದೇ ಊರಿನ ಶಾಲೆ ಉಳಿಸಲು ಹೋರಾಡಬೇಕು'' ಎಂದು ಕರೆ ನೀಡಿದರು.**

# ದೇವೇಗೌಡ, ಕುಮಾರಸ್ವಾಮಿ ಬಗ್ಗೆ ನಾಲಿಗೆ ಹರಿಬಿಟ್ರೆ ಕತ್ತರಿಸುತ್ತೇವೆ: ಚಲುವರಾಯಸ್ವಾಮಿಗೆ ಸುರೇಶ್ ಗೌಡ ಎಚ್ಚರಿಕೆ

• ಉದಯವಾಹಿನಿ, ಮಂಡ್ಯ


ಉದಯವಾಹಿನಿ ಚಿತ್ರ

ಸಚಿವ ಚಲುವರಾಯಸ್ವಾಮಿ ಅಧಿಕಾರ, ಹಣ, ಮದದಿಂದ ತಪ್ಪು ಮಾಡುತ್ತಿದ್ದಾರೆ. ಅವರು ಯಾರ ಸಾವನ್ನು ಬಯಸುತ್ತಿದ್ದಾರೆ ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರು ಮತ್ತು ಹೆಚ್‌ಡಿ ಕುಮಾರಸ್ವಾಮಿ ಬಗ್ಗೆ ನಾಲಿಗೆ ಹರಿಬಿಟ್ಟರೆ ಕತ್ತರಿಸುತ್ತೇವೆ ಎಂದು ಸಚಿವ ಚಲುವರಾಯಸ್ವಾಮಿ ವಿರುದ್ಧ ಜೆಡಿಎಸನ ಮಾಜಿ ಶಾಸಕ ಸುರೇಶ್ ಗೌಡ ತೀವ್ರ ವಾಗ್ದಾಳಿ ಮಾಡಿದ್ದಾರೆ.

ಡಿಕೆ ಶಿವಕುಮಾರ್ ಸಿಎಂ ಆಗುತ್ತಿರುವುದರಿಂದ ದೇವೇಗೌಡರ ಮನೆಯಲ್ಲಿ ಸೂತಕ ಎಂಬ ಸಚಿವ ಚಲುವರಾಯಸ್ವಾಮಿ ಹೇಳಿಕೆ ವಿಚಾರ ಸದ್ಯ ಸಾಕಷ್ಟು ಚರ್ಚೆಗೆ ಗ್ರಾಸವಾಗಿದ್ದು, ಚಲುವರಾಯಸ್ವಾಮಿ ವಿರುದ್ಧ ಜೆಡಿಎಸ್ ನಾಯಕರು ಕೆಂಡಾಮಂಡಲರಾಗಿದ್ದಾರೆ. ಈ ವಿಚಾರವಾಗಿ ಮಾಧ್ಯಮದವರೊಂದಿಗೆ ಮಾತನಾಡಿದವರು ಮಾಜಿ ಶಾಸಕ ಸುರೇಶ್ ಗೌಡ ತಿರುಗೇಟು ನೀಡಿದ್ದಾರೆ.

ಕಾಂಗ್ರೆಸ್ ಪಕ್ಷವನ್ನು ರಾಜ್ಯದ ಜನ ಆಯ್ಕೆ ಮಾಡಿದ್ದಾರೆ. 5 ವರ್ಷ ಪೂರ್ಣಗೊಳಿಸಬೇಕು. ಅಭಿವೃದ್ಧಿ ಕುಂಠಿತದ ಬಗ್ಗೆ ರಾಜ್ಯದ ಜನತೆಗೆ ಗೊತ್ತಿದೆ. ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ಡಿಕೆ ಶಿವಕುಮಾರ್ ಸಿಎಂ ಆಗಿದ್ದಾರೆ. ಕೆಲವು ಕಿಡಿಗೇಡಿಗಳು ಯಾರನ್ನೋ ಮೆಚ್ಚಿಸಲು ನಮ್ಮ ನಾಯಕರ ಬಗ್ಗೆ ಕೇವಲವಾಗಿ ಮಾತನಾಡಿದ್ದಾರೆ. ದೇವೇಗೌಡರ ಮನೆಯಲ್ಲಿ ಸೂತಕದ ಛಾಯೆ ಬಂದಿದೆ ಅಂತ ಹೇಳುತ್ತಾರೆ. ಸಾವಿನ ಸಂದರ್ಭದಲ್ಲಿ ಮಾತ್ರ ಸೂತಕ ಬರುವುದು. ಚಲುವರಾಯಸ್ವಾಮಿ ಯಾರ ಸಾವನ್ನು ಬಯಸುತ್ತಿದ್ದಾರೆ ಎಂದು ಪ್ರಶ್ನಿಸಿದ್ದಾರೆ. ಚಲುವರಾಯಸ್ವಾಮಿಗೆ ಯಾವ ರೀತಿ ಬುದ್ಧಿ ಹೇಳಬೇಕು. ದೇವೇಗೌಡರ ಇತಿಹಾಸ ನಿಮಗೆ ಏನು ಗೊತ್ತು. ಕನ್ನಡನಾಡಿನಲ್ಲಿ ಪ್ರಧಾನಿಯಾದ ಒಬ್ಬ ಕನ್ನಡಿಗ ಅಂದರೆ ದೇವೇಗೌಡರು. ಎಸ್ ಎಂ ಕೃಷ್ಣ ಅವರನ್ನು ಸಿಎಂ ಮಾಡಿದ್ದು ಯಾರು? ಇವಾಗ ಡಿಕೆ ಶಿವಕುಮಾರ್ ಮುಖ್ಯಮಂತ್ರಿ ಆದರೆ ದೇವೇಗೌಡರಿಗೆ ಹೊಟ್ಟೆ ಉರಿನಾ ಬಿಜೆಪಿ ಜೊತೆ ಎನ್‌ಡಿಎ ಸರ್ಕಾರ ಇದೆ.

ಕಾಂಗ್ರೆಸ್ ಪಕ್ಷದಿಂದ ಯಾರೇ ಸಿಎಂ ಆದರೂ ನಮ್ಮ ವಿರೋಧವೆ. ವಿರೋಧ ಪಕ್ಷದ ಕೆಲಸ ವಿರೋಧ ಮಾಡುವುದೆ ಎಂದಿದ್ದಾರೆ.

### ಜನರ ಶಕ್ತಿ ನಮ್ಮ ಬಳಿ ಇದೆ

**ಅಧಿಕಾರ ಶಾಶ್ವತ ಅಲ್ಲ, ಚುನಾವಣೆ ಬುರುತ್ತೆ ಬುದ್ದಿ ಕಲಿಸುತ್ತಾರೆ. ದೇವೇಗೌಡರ ಬಗ್ಗೆ ಮಾತನಾಡಿ ಲೀಡರ್ ಆಗುತ್ತೇನೆ ಎನ್ನುವ ಭ್ರಮೆಯಲ್ಲಿದ್ದಾರೆ. ನಿನ್ನ ಬಳಿ ಅಧಿಕಾರ ಇರಬಹುದು ಜನರ ಶಕ್ತಿ ನಮ್ಮ ಬಳಿ ಇದೆ. ಚಲುವರಾಯಸ್ವಾಮಿಗೆ ಯಾರ ಮನೆಯಲ್ಲಿ ಸಾಯುತ್ತಾರೆ ಎನ್ನುವುದು ಮುನ್ಸೂಚನೆ ಗೊತ್ತಾಗುತ್ತೆ. ಮಾಟ- ಮಂತ್ರ ಮಾಡಿಸುವುದರಲ್ಲಿ ಎತ್ತಿದ ಕೈ ಎಂದು ವಾಗ್ದಾಳಿ ಮಾಡಿದ್ದಾರೆ.**

**ಸುರೇಶ್ ಗೌಡ ಜೀವನದಲ್ಲಿ ಅಡ್ಜಸ್ಟ್ಮೆಂಟ್ ರಾಜಕೀಯ ಇಲ್ಲ. ಕಾಂಗ್ರೆಸ್ ಸರ್ಕಾರ ರಾಜ್ಯದ ಲೂಟಿ ಮಾಡುತ್ತಿದೆ. ದೇವೇಗೌಡರ ಮನೆಗೆ ಏನೋ ಮಾಡಿಸಿದ್ದಾರೆ, ನನಗೂ ಮಾಟ-ಮಂತ್ರ ಮಾಡಿಸಿದ್ದಾರೆ ಎಂಬುವುದು ನಾನು ನಂಬಲ್ಲ. ನಾವು ನಮ್ಮ ಶತ್ರುಗಳಿಗೂ ಕೆಟ್ಟದ್ದು ಬಯಸಲ್ಲ. ಸುರೇಶ್ ಗೌಡ ಮಾಜಿ ಶಾಸಕ**

1 ಹೆಚ್‌ಡಿಡಿ ಮನೆಯಲ್ಲಿ ಸೂತಕದ ಛಾಯೆ ಹೇಳಿಕೆ ವಿವಾದ
2 ಚಲುವರಾಯಸ್ವಾಮಿ ವಿರುದ್ಧ ಜೆಡಿಎಸ್ ಕೆಂಡಾಮಂಡಲ
3 ಜೆಡಿಎಸ್‌ನ ಮಾಜಿ ಶಾಸಕ ಸುರೇಶ್ ಗೌಡ ನೇರ ವಾಗ್ದಾಳಿ



# ಮಿನಿ ನ್ಯೂಸ್

## ಜೂಜು ಅಡ್ಡೆ ಮೇಲೆ ಪೊಲೀಸರ ದಾಳಿ : ಹಣ ವಶ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ಬೊಮ್ಮಲಾಪುರ ಗ್ರಾಮದ ಪೆಟ್ರೋಲ್ ಬಂಕ್ ಹಿಂಭಾಗ ಜೂಜಾಟ ನಡೆಯುತ್ತಿರುವ ಕುರಿತಾಗಿ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಗುಂಡ್ಲುಪೇಟೆ ಪಟ್ಟಣ ಪೊಲೀಸರು ಆರು ಮಂದಿ ಬಳಿಯಿದ್ದ 1 ಲಕ್ಷದ 10 ಸಾವಿರ ಹಣವನ್ನ ವಶಕ್ಕೆ ಪಡೆದು ಪ್ರಕರಣ ದಾಖಲಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ. ದಾಳಿಯಲ್ಲಿ ಪಿಐ ಜಯಕುಮಾರ್, ಪಿಎಸ್ ಐ ನರೇಶ್ ಕುಮಾರ್, ನಟೇಶ್, ಮಣಿ, ಬಸವ, ನವೀನ್, ಶಿವರಾಜು, ಗಣೇಶ್, ಮಲ್ಲುಸ್ವಾಮಿ ಭಾಗವಹಿಸಿದ್ದರು.

## ಕಳ್ಳಿಪಾಳ್ಯ ರೈಲ್ವೆ ಗೇಟ್ ರಸ್ತೆ ಕೆಳ ಸೇತುವೆ ಕಾಮಗಾರಿಗೆ ಶಿಲಾನ್ಯಾಸ

• ಉದಯವಾಹಿನಿ, ತುಮಕೂರು

ಜಿಲ್ಲೆಯ ಗುಬ್ಬಿ ತಾಲ್ಲೂಕಿನ ಕಳ್ಳಿಪಾಳ್ಯ ಗೇಟ್ ಎಲ್‌ಸಿ ಸಂಖ್ಯೆ 48ರ ಬದಲಿಗೆ ರಸ್ತೆ ಕಳ ಸೇತುವೆಗೆ ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಶಂಕುಸ್ಥಾಪನೆ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಈ ಯೋಜನೆಯು ಸಾರ್ವಜನಿಕರಿಗೆ ಸುರಕ್ಷತೆ, ಸಂಪರ್ಕ ಮತ್ತು ಸಾರಿಗೆಯ ಸೌಲಭ್ಯವನ್ನು ಮತ್ತಷ್ಟು ಹೆಚ್ಚಿಸುತ್ತದೆ ಎಂದು ಹೇಳಿದರು. ರಸ್ತೆ ಕೆಳ ಸೇತುವೆ ಕಾಮಗಾರಿಯಿಂದ ಕಳ್ಳಿಪಾಳ್ಯ ಹಾಗೂ ಈ ಭಾಗದ ಹಳ್ಳಿಗಳ ಜನರ ಓಡಾಟಕ್ಕೆ ತುಂಬಾ ಅನುಕೂಲವಾಗಲಿದೆ ಎಂದರು. ಈ ಸಂದರ್ಭದಲ್ಲಿ, ಶಾಸಕರಾದ ಎಸ್.ಆರ್ ಶ್ರೀನಿವಾಸ್, ಬಿಜೆಪಿ ಜಿಲ್ಲಾಧ್ಯಕ್ಷ ರವಿ ಹೆಬ್ಬಾಕ, ರೈಲ್ವೆ ಅಧಿಕಾರಿಗಳಾದ ಪ್ರವೀಣ್ ಕುಮಾರ್ ಸೇರಿದಂತೆ ಪ್ರಮುಖ ನಾಯಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಮುಳುವಾಯ್ತು ಬಿಲ್ವಪತ್ರೆ–ವೃದ್ಧೆ ಕೊಂದು, ಚಿರತೆ ದಾಳಿ

• ಉದಯವಾಹಿನಿ, ನಂಜನಗೂಡು

ನಿಗೂಢವಾಗಿ ನಾಪತ್ತೆಯಾಗಿದ್ದ ತಾಲ್ಲೂಕಿನ ಕಸುವಿನಹಳ್ಳಿಯ ವೃದ್ಧೆ ಶಿವರುದ್ರಮ್ಮ (63) ಶವವಾಗಿ ಪತ್ತೆಯಾಗಿದ್ದು, ಜಮೀನೊಂದರ ಇಂಗು ಗುಂಡಿಯಲ್ಲಿ ಮೃತ ದೇಹ ಸಿಕ್ಕಿದೆ. ಮಹದೇವಪ್ಪ ಬಂಧಿತ ವ್ಯಕ್ತಿ. ನಂಜನಗೂಡು ತಾಲ್ಲೂಕಿನ ಕಸುವಿನಹಳ್ಳಿ ಗ್ರಾಮದಲ್ಲಿ 63 ವರ್ಷದ ಮಹಿಳೆಯನ್ನು ಕೊಲೆ ಮಾಡಿದ್ದ ಮಹದೇವ ಚಿರತೆಯ ನಕಲಿ ಗುರುತುಗಳನ್ನು ಸೃಷ್ಟಿಸಿ, ಕಾಡು ಪ್ರಾಣಿಗಳ ದಾಳಿಯಂತೆ ಬಿಂಬಿಸಲು ಪ್ರಯತ್ನಿಸಿ ಸಿಕ್ಕಿಬಿದ್ದಿದ್ದಾನೆ.

ಶಿವರುದ್ರಮ್ಮ ಅವರು ಪೂಜೆಗಾಗಿ ಬಿಲ್ವಪತ್ರೆ ಸಂಗ್ರಹಿಸಲು ಗ್ರಾಮದ ಹೊರವಲಯದಲ್ಲಿರುವ ಮಹಾಲಿಂಗೇಶ್ವರ ಸ್ವಾಮಿ ದೇವಸ್ಥಾನಕ್ಕೆ ಹೋಗಿದ್ದಾಗ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸುಮಾರು 70 ಗ್ರಾಂ ತೂಕದ ಚಿನ್ನದ ಆಭರಣಗಳನ್ನು ಧರಿಸಿದ್ದರು. ದೇವಾಲಯದ ಆವರಣದಲ್ಲಿ ಬಿಲ್ವಪತ್ರೆ ಸಂಗ್ರಹಿಸಲು ಮಹದೇವಪ್ಪ ಅವರ ಸಹಾಯ ಪಡೆದರು. ಮಹದೇವಪ್ಪ ಬಿಲ್ವ ಪತ್ರೆ ಎಲೆಗಳನ್ನು ಸಂಗ್ರಹಿಸಲು ಸಹಾಯ ಮಾಡಿ ಹತ್ತಿರದ ಹೊಲಕ್ಕೆ ಕರೆದೊಯ್ದಿದ್ದಾನೆ.

## ಚಿಕ್ಕಬಳ್ಳಾಪುರದಲ್ಲಿ ಭೀಕರ ಸರಣಿ ಅಪಘಾತ: ಥಾರ್, ಆಟೋ ಮತ್ತು ಕ್ಯಾಂಟರ್ ನಡುವೆ ಢಿಕ್ಕಿ; 5 ಮಂದಿ ಸಾವು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮದ್ದೂರು

ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲ್ಲೂಕಿನ ಸುಂಕಲಮ್ಮ ದೇವಸ್ಥಾನದ ಬಳಿ ಭೀಕರ ಸರಣಿ ಅಪಘಾತ ಸಂಭವಿಸಿದ್ದು, ಥಾರ್, ಆಟೋ ಮತ್ತು ಕ್ಯಾಂಟರ್ ನಡುವೆ ಸಂಭವಿಸಿದ ಈ ದುರ್ಘಟನೆಯಲ್ಲಿ ಐವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಅಂತೆಯೇ ಈ ದುರ್ಘಟನೆಯಲ್ಲಿ ಹತ್ತಕ್ಕೂ ಹೆಚ್ಚು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ವಿವಿಧ ಆಸ್ಪತ್ರೆಗಳಿಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಬಾಗೇಪಲ್ಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಾಗೇಪಲ್ಲಿ ತಾಲ್ಲೂಕಿನ ಸುಂಕಲಮ್ಮ ದೇವಸ್ಥಾನದ ಬಳಿ ಥಾರ್ ಕಾರು, ಆಟೋ ಮತ್ತು ಕ್ಯಾಂಟರ್ ವಾಹನಗಳ ನಡುವೆ ಸರಣಿ ಅಪಘಾತ ಸಂಭವಿಸಿದೆ. ಈ ವೇಳೆ ಆಟೋದಲ್ಲಿದ್ದ ಐದು ಜನ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಮೃತರನ್ನು ಉಮಾದೇವಿ (55), ವಿಜಯಾ (40), ಲಕ್ಷ್ಮಮ್ಮ (50), ಸರೋಜಮ್ಮ ಹಾಗೂ ಆಟೋ ಚಾಲಕ ಆಂಜಿನಪ್ಪ (35) ಎಂದು ಗುರುತಿಸಲಾಗಿದೆ. ಇವರೆಲ್ಲರೂ ಬಾಗೇಪಳ್ಳಿ ಪಟ್ಟಣದ ನಿವಾಸಿಗಳಾಗಿದ್ದಾರೆ ಎಂದು ತಿಳಿದುಬಂದಿದೆ.

ಅಂತೆಯೇ ದುರಂತದಲ್ಲಿ ಹತ್ತಕ್ಕೂ ಹೆಚ್ಚು ಜನರಿಗೆ ಗಂಭೀರ ಗಾಯಗಳಾಗಿದ್ದು, ವಿವಿಧ ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನಾ ಸ್ಥಳಕ್ಕೆ ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೌಶಲ್ ಚೌಕ್ಸೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪೊಲೀಸರು ಸ್ಥಳ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದು, ಅಪಘಾತದ ನಿಖರ ಕಾರಣದ ಬಗ್ಗೆ ತನಿಖೆ ಆರಂಭಿಸಿದ್ದಾರೆ.

ಅಂತರಾಳದಿಂದ...
EDITORIAL

# ಪಾಕ್ ಪ್ರೇರಿತ ಉಗ್ರ ಜಾಲದ ವಿರುದ್ಧ ತೀವ್ರ ನಿಗಾ ಅಗತ್ಯ



ದೇಶದ ವಿವಿಧೆಡೆಗಳಲ್ಲಿ ಕಳೆದ ಕೆಲವು ತಿಂಗಳುಗಳಿಂದೀಚೆಗೆ ಭಯೋತ್ಪಾದನ ಕೃತ್ಯಗಳನ್ನು ನಡೆಸಲು ಸಂಚು ರೂಪಿಸುತ್ತಿದ್ದ ವಿವಿಧ ಉಗ್ರ ಜಾಲಗಳನ್ನು ಭದ್ರತಾ ಪಡೆಗಳು ಭೇದಿಸುತ್ತಲೇ ಬಂದಿವೆ.

ಇಂತಹ ಉಗ್ರ ಜಾಲ ಸಂಚಿಗೆ ಹೊಸ ಸೇರ್ಪಡೆ ಎಂದರೆ ದಿಲ್ಲಿ ಪೊಲೀಸರು ಬಯಲಿಗೆಳೆದ ಪಾಕಿಸ್ಥಾನದ ಗುಪ್ತಚರ ಸಂಸ್ಥೆಯಾದ ಐಎಸ್‌ಐ ಮತ್ತು ಮುಂಬಯಿಯ ಭೂಗತ ಜಗತ್ತಿನೊಂದಿಗೆ ನಂಟು ಹೊಂದಿದ್ದ ಉಗ್ರ ಜಾಲ. ದಿಲ್ಲಿ ಪೊಲೀಸರು ನಡೆಸಿದ ಈ ಮಹತ್ವದ ಕಾರ್ಯಾಚರಣೆಯಲ್ಲಿ ಈ ಜಾಲಕ್ಕೆ ಸೇರಿದ ಒಂಬತ್ತು ಉಗ್ರರನ್ನು ಬಂಧಿಸಿದ್ದಲ್ಲದೆ ಅವರಿಂದ ಶಸ್ತ್ರಾಸ್ತ್ರಗಳು ಮತ್ತು ಸ್ಫೋಟಕಗಳನ್ನು ವಶಪಡಿಸಿಕೊಂಡಿದ್ದಾರೆ. ಬಂಧಿತ ಉಗ್ರರು ದಿಲ್ಲಿ, ಮುಂಬಯಿ ಸಹಿತ ದೇಶದ ಪ್ರಮುಖ ನಗರಗಳಲ್ಲಿನ ವಿಮಾನ ಮತ್ತು ರೈಲ್ವೇ ನಿಲ್ದಾಣಗಳು, ವಿದ್ಯುತ್ ಸ್ಥಾವರಗಳು ಹಾಗೂ ಅಣುಸ್ಥಾವರಗಳನ್ನು ಗುರಿಯಾಗಿಸಿ ದಾಳಿ ನಡೆಸುವ ಸಂಚು ರೂಪಿಸಿದ್ದ ಆತಂಕಕಾರಿ ವಿಷಯ ಪ್ರಾಥಮಿಕ ತನಿಖೆಯ ವೇಳೆ ಬೆಳಕಿಗೆ ಬಂದಿದೆ.

ದೇಶದಲ್ಲಿ ಉಗ್ರರ ನಿರ್ಮೂಲನೆಗೆ ಪಣತೊಟ್ಟಿರುವ ಕೇಂದ್ರ ಸರಕಾರ ಉಗ್ರರು ಮತ್ತು ಉಗ್ರ ಸಂಘಟನೆಗಳ ವಿರುದ್ಧ ಶೂನ್ಯ ಸಹಿಷ್ಣು ನೀತಿಯನ್ನು ಅನುಸರಿಸುವಂತೆ ಭದ್ರತ ಪಡೆಗಳು ಮತ್ತು ತನಿಖಾ ಸಂಸ್ಥೆಗಳಿಗೆ ಸ್ಪಷ್ಟ ನಿರ್ದೇಶನ ನೀಡಿದೆ. ಅದರಂತೆ ಭದ್ರತ ಪಡೆಗಳು ನಿರಂತರವಾಗಿ ದೇಶದ ಗಡಿ ಭಾಗಗಳಲ್ಲದೆ ನಗರಗಳ ಸಹಿತ ದೇಶಾದ್ಯಂತ ತೀವ್ರ ನಿಗಾ ಇರಿಸಿದ್ದು, ಭದ್ರತಾ ಪಡೆಗಳು ದೇಶದ ಅಲ್ಲಲ್ಲಿ ಉಗ್ರ ಜಾಲಗಳನ್ನು ಭೇದಿಸಿ, ಷಡ್ಯಂತ್ರಗಳನ್ನು ಬಯಲು ಮಾಡುತ್ತಿವೆ. ಇಷ್ಟೆಲ್ಲ ಆಗಿಯೂ ಉಗ್ರ ಸಂಘಟನೆಗಳು ಮತ್ತು ಉಗ್ರರು ದೇಶದಲ್ಲಿ ಕುಕೃತ್ಯಗಳನ್ನು ಎಸಗಲು ಹವಣಿಸುತ್ತಿರುವ ಪ್ರಕರಣಗಳು ಬಯಲಾಗುತ್ತಿರುವುದು ಸಹಜವಾಗಿ ಭದ್ರತಾ ಪಡೆಗಳು ಮತ್ತು ತನಿಖಾ ಸಂಸ್ಥೆಗಳು ತಮ್ಮ ಕಣ್ಗಾವಲು ಮತ್ತು ಬೇಹುಗಾರಿಕೆಯನ್ನು ಇನ್ನಷ್ಟು ತೀವ್ರಗೊಳಿಸುವ ಅನಿವಾರ್ಯತೆಯನ್ನು ಎತ್ತಿ ತೋರಿಸುತ್ತಿವೆ.

### ತನಿಖೆ ನಡೆಸುವ ಅಗತ್ಯವಿದೆ

**ಪಾಕಿಸ್ಥಾನ ಪ್ರೇರಿತ ಮತ್ತು ಪೋಷಿತ ಉಗ್ರ ಸಂಘಟನೆಗಳು ಭಾರತೀಯರನ್ನೇ ಬಳಸಿಕೊಂಡು ತಮ್ಮ ಬೇಳೆ ಬೇಯಿಸಿಕೊಳ್ಳುವುದನ್ನು ಚಾಳಿಯನ್ನಾಗಿಸಿಕೊಂಡಿದ್ದು, ಈಗ ಇಂತಹುದೇ ಮತ್ತೊಂದು ಷಡ್ಯಂತ್ರ ಬಯಲಾಗಿದೆ. ಈ ಪ್ರಕರಣವನ್ನು ಆಮೂಲಾಗ್ರವಾಗಿ ತನಿಖೆ ನಡೆಸುವ ಅಗತ್ಯವಿದೆ. ಈ ಉಗ್ರ ಜಾಲದ ಕಬಂಧಬಾಹು ಇನ್ನಷ್ಟು ವ್ಯಾಪಿಸಿರುವ ಸಾಧ್ಯತೆ ಇರುವುದರಿಂದ ದೇಶದ ಅತ್ಯುನ್ನತ ತನಿಖಾ ಸಂಸ್ಥೆಯಾದ ರಾಷ್ಟ್ರೀಯ ತನಿಖಾ ಸಂಸ್ಥೆಗೆ ಈ ಪ್ರಕರಣದ ತನಿಖೆಯ ಹೊಣೆಯನ್ನು ವಹಿಸುವ ಮೂಲಕ ಈ ಜಾಲದ ಮೂಲವನ್ನು ಜಾಲಾಡಬೇಕು.**

ಈಗ ದಿಲ್ಲಿ ಪೊಲೀಸರಿಂದ ಬಂಧಿತರಾಗಿರುವ ಉಗ್ರರೆಲ್ಲರೂ ಭಾರತೀಯ ಮೂಲದವರೇ ಆಗಿದ್ದಾರೆ. ಆದರೆ, ಪಾಕಿಸ್ಥಾನ ಐಎಸ್‌ಐ ಮತ್ತು ಮುಂಬಯಿಯ ಭೂಗತ ಜಗತ್ತಿನೊಂದಿಗೆ ನಂಟು ಹೊಂದಿರುವುದನ್ನು ಗಮನಿಸಿದಾಗ ಈ ಉಗ್ರ ಜಾಲ ದೇಶದಲ್ಲಿ ಆಳವಾಗಿ ಬೇರೂರಿರುವಂತೆ ಕಂಡುಬರುತ್ತಿದೆ. ಈ ಹಿಂದೆ ದೇಶದಲ್ಲಿ ನಡೆದ ಹಲವು ಭಯೋತ್ಪಾದಕ ಕೃತ್ಯಗಳಲ್ಲಿ ಶಾಮೀಲಾಗಿದ್ದ ಉಗ್ರರು ಇಂತಹುದೇ ನಂಟು ಹೊಂದಿದ್ದುದು ತನಿಖೆಯ ವೇಳೆ ಬಯಲಾಗಿತ್ತು.

ಇದೇ ವೇಳೆ ಈ ಉಗ್ರರಿಗೆ ದೇಶದಲ್ಲಿ ಆಶ್ರಯ ಮತ್ತು ನೆರವು ನೀಡುತ್ತಿರುವವರ ವಿರುದ್ಧವೂ ಕಠಿನ ಕ್ರಮ ಕೈಗೊಳ್ಳಬೇಕು. ಉಗ್ರರ ಬಂಧನ, ಸಂಚು ಬಯಲು, ಶಸ್ತ್ರಾಸ್ತ್ರ ವಶಕ್ಕಷ್ಟೇ ಭದ್ರತ ಪಡೆಗಳು ಮತ್ತು ತನಿಖಾ ಸಂಸ್ಥೆಗಳು ಸೀಮಿತವಾಗದೆ ಈ ದೇಶದ್ರೋಹಿಗಳ ವಿರುದ್ಧ ಸಾಕ್ಷ್ಯಾಧಾರಗಳನ್ನು ಕಲೆಹಾಕಿ ನ್ಯಾಯಾಲಯದ ಮುಂದಿಟ್ಟು ಅವರು ಕಾನೂನಿನ ಕುಣಿಕೆಗೇರುವಂತಾದಲ್ಲಿ ಮಾತ್ರವೇ ಉಗ್ರರ ಮೂಲೋತ್ಪಾಟನೆ ಮಾಡುವ ಸರಕಾರದ ಸಂಕಲ್ಪ ಈಡೇರಲು ಸಾಧ್ಯ.

## ರಾಮಾಯಣ



ತನ್ನ ಕುರುಹಾಗಿ ಜನಕಜೆಯು ಹನುಮನಿಗೆ ತನ್ನ ಶಿರೋರತ್ನವನ್ನಿತ್ತು ಅವನನ್ನು ಬೀಳ್ಕೊಟ್ಟದು

• ಹಿಂದಿನ ಸಂಚಿಕೆಯಿಂದ 121ನೆಯ ಅಧ್ಯಾಯ

ಸಮುದ್ರವನ್ನು ದಾಟಬಲ್ಲ ಬಲಶಾಲಿ ಎಂಬುದು ನಿಶ್ಚಿತವಾದರೂ, ರಘುವೀರನನ್ನು ಹೊರತುಪಡಿಸಿ ಬೇರಾವ ಗಂಡಸನ್ನೂ ಮುಟ್ಟುವುದಿಲ್ಲವೆಂಬ ವೀರವ್ರತ ನನ್ನದು, ಅಂಥದ್ದರಲ್ಲಿ ನಿನ್ನ ಭುಜದ ಮೇಲೆ ಕೂತು ಬಂದರೆ ಜನರು ಏನೆಂದುಕೊಳ್ಳುವುದಿಲ್ಲ? ನನ್ನನ್ನು ಕದ್ದೊಯ್ದು ತನ್ನ ವಶದಲ್ಲಿಟ್ಟುಕೊಂಡ ರಾವಣನು ಅಪಕೀರ್ತಿಗೀಡಾದ, ಆದ್ದರಿಂದ ಅವನ ಕುಲವನ್ನು ನಿರ್ನಾಮ ಮಾಡಿ ಮೂರು ಲೋಕವೂ ತಿಳಿಯುವ ಹಾಗೆ ಕರೆದೊಯ್ದರೆ ಕೀರ್ತಿ ಬರುತ್ತದೆ. ಆದ್ದರಿಂದ ರಾಮನ ಬಳಿ ವಾಪಸು ಹೋಗು, ಆತನನ್ನು ಕರೆತಂದು ಸಮುದ್ರವನ್ನು ದಾಟಿ ಹೋಗುವುದು ಸೂಕ್ತ'' ಎಂದು ಬಿಡಿಸಿ ಹೇಳಿದಳು.ಆ ಮಾತುಗಳನ್ನು ಕೇಳಿದ ಸಮೀರಸುತನು ಸೀತೆಗೆ ನಮಸ್ಕರಿಸಿ, ''ಅಮ್ಮಾ ನೀನು ನನಗೆ ಬುದ್ಧಿ ಕಲಿಸಿದ ರೀತಿಯು ಅಸಾಮಾನ್ಯವಾದುದು. ಅತಿವೇಗವು ಹೆದರಿಕೆಯನ್ನುಂಟುಮಾಡುವುದು ಸಹಜ, ಸುಚರಿತನಾದರೂ ರಾಮನನ್ನು ಹೊರತಾಗಿ ಬೇರಾವ ಗಂಡಸಿನ ಸ್ಪರ್ಶವು ನಿನಗೆ ಉಚಿತವಲ್ಲ, ತಾಯೆ, ಸಾಮಾನ್ಯ ಹೆಂಗಸರಲ್ಲಿ ಇಂತಹ ಪತಿಭಕ್ತಿ ಇರಲು ಸಾಧ್ಯವೇ, ನೀನು ಪರದೇವತೆಯೇ ಸರಿ'' ಖಖ ಹೇಳಿದ ಬಳಿಕ ಮತ್ತೆ, ''ಚರಣಸೇವಕನ ಭಕ್ತಿಭಾವದಿಂದ ನಾನು ರಘುವೀರನ ಬಳಿಗೆ ಬೇಗ ಹೋಗಬೇಕೆಂಬ ತವಕದಿಂದ ನಾನು ಈ ಸಲಹೆಯನ್ನಿತ್ತೆನೇ ಹೊರತು ಅನ್ಯಥಾ ಅಲ್ಲ. ನೀನಿರುವ ತಾಣ ತಿಳಿಯದೆ ಪರಮಪುರುಷನು ಇದುವರೆಗೆ ನಿಷ್ಪ್ರಯತ್ನ ದಿಂದಿದ್ದ; ಈಗ ನಾನು ಹೋಗಿ ಈ ಶುಭವಾರ್ತೆಯನ್ನು ತಿಳಿಸಿದರೆ ಕಪಿನಾಯಕರ ನಾಯಿವಿಳಿದ ಆತನು ಬರುವುದರಲ್ಲಿ ಸಂದೇಹವಿಲ್ಲ. ರಕ್ಕಸಕುಲವು ಆತನ ಬಾಣಕ್ಕಾಹುತಿಯಾಗುವುದು ತಪ್ಪದು, ದೇವಿ; ನಿನ್ನ ಕುರುಹನ್ನು ಹೇಳಿದರೆ ನಾನು ಹೋಗಿ ಒಡೆಯನಿಗೆ ಹೇಳುತ್ತೇನೆ'' ಎಂದು ಬಿನ್ನವಿಸಿಕೊಂಡ. ಆಗ ಸೀತಾದೇವಿಯು, ''ನಾನು ಆತನೊಡನೆ ಕಳೆದ ಒಂದು ಸನ್ನಿವೇಶವು ತುಂಬ ಮುಖ್ಯವಾದುದು. ಪರಮಪಾವನವಾದ ಗೋದಾತಟದಲ್ಲಿನ ಗಿರಿಯ ತಪ್ಪಲಲ್ಲಿ ಒಂದು ದಿನ ರಘುರಾಮನು ಮೈಮರೆತು ನನ್ನ ತೊಡೆಯ ಮೇಲೆ ತಲೆಯಿರಿಸಿಕೊಂಡು ನಿದ್ರಿಸುತ್ತಿದ್ದ. ಆಗ ಒಂದು ವಿಚಿತ್ರವು ನಡೆಯಿತು: ಒಂದು ಕಾಗೆಯು ವೇಗವಾಗಿ ಹಾರಿ ಬರಲು ನಾನು ಮಣ್ಣ ಹೆಂಟೆಯೊಂದನ್ನು ಅದರ ಮೇಲೆಸೆದೆ. ಆದರೆ ಆ ಕಾಗೆಯು ದುರ್ಬುದ್ಧಿಯಿಂದ ಕೂಡಿ ನನ್ನ ಸ್ತನತಟವನ್ನು ಕುಕ್ಕಲು ರಕ್ತ ಸೋರತೊಡಗಿತು; ನೋವಾದರೂ ಪತಿಗೆ ನಿದ್ರಾಭಂಗವಾಗದಿರುವಂತೆ ಅಲ್ಲಾಡದೆ ಕುಳಿತಿದ್ದೆ; ಆದರೆ ಆ ಕಾಗೆಯು ಮಾಂಸದ ಆಸೆಯಿಂದ ಮತ್ತೊಂದು ಕುಚವನ್ನು ಕುಕ್ಕತೊಡಗಿತು. ಅದನ್ನು ನಾನು ಎಷ್ಟೇ ನಿವಾರಿಸಿದರೂ ಮತ್ತೆ ಮತ್ತೆ ಹತ್ತಿರ ಬರುತ್ತಿತ್ತು. ಅಷ್ಟರಲ್ಲಿ ರಾಘವನಿಗೆ ಎಚ್ಚರವಾಯಿತು; ಸುರಿಯುತ್ತಿದ್ದ ರಕ್ತವನ್ನು ನೋಡಿ ಅವನ ಕೋಪ ನೆತ್ತಿಗೇರಿ ಕಣ್ಣುಗಳು ಕೆಂಡ ಕಾರಿದವು; ನನ್ನನ್ನು ಉಪಚರಿಸಿ, ನಿನಗೆ ಹೀಗೆ ಮಾಡಿದವನಾರು? ಸಿಂಹದ ಜೊತೆಗೆ, ಬೆಂಕಿಯ ಜೊತೆಗೆ ಸರಸವಾಡುವವನಾರು, ಹೇಳು' ಎಂದು ಗರ್ಜಿಸಿ ನಾಲ್ಕೂ ದಿಕ್ಕುಗಳನ್ನು ನೋಡತೊಡಗಿದ; ಕೊಕ್ಕಿನಲ್ಲಿ ಮಾಂಸದ ತುಂಡನ್ನು ಕಚ್ಚಿಕೊಂಡಿದ್ದ ಕಾಗೆಯನ್ನು ಎದುರಲ್ಲಿ ನೋಡಿ ಕನಲಿಕೆಯಿಂದ ಒಂದು ಬಿಲ್ಲಿಗೆ ಬ್ರಹ್ಮಾಸ್ತ್ರವೊಂದನ್ನು ಹೂಡಿ ಬಿಡಲು ಅದು ಬೆಂಕಿಯನ್ನುಗುಳುತ್ತ ಗರ್ಜಿಸುತ್ತ ಬರಲು ಕಾಗೆಯು ಭಯದಿಂದ ಎಲ್ಲಾ ಕಡೆಯೂ ಸುತ್ತಾಡಿ ಕೊನೆಗೆ ಇಂದ್ರನನ್ನು ಮೊರೆಹೊಕ್ಕಿತು. ಆಗ ಆತನು ಭೀತಿಯಿಂದ, ''ಜಗತ್ಪತಿಯಾದ ರಾಮನು ಕೋಪಿಸಿಕೊಂಡರೆ ಯಾರು ತಾನೇ ತಪ್ಪಿಸಿಕೊಳ್ಳಲು ಸಾಧ್ಯ? ಸಿಡಿಲ ಹೊಡೆತಕ್ಕೆ ಕೊಡೆಯನ್ನು ಅಡ್ಡ ಹಿಡಿದರೇನು ಫಲ? ಈ ದುರ್ಬುದ್ಧಿ ಯಾಕೆ, ನೀನೇ ಆ ಕರುಣಾಂಬುನಿಧಿಯ ಬಳಿ ಹೋಗಿ ಕ್ಷಮೆ ಕೇಳಿದರೆ ರಕ್ಷಿಸುತ್ತಾನೆ'' ಎನ್ನಲು ಕಾಗೆಯು ಹಾಗೆಯೇ ರಾಮನ ಬಳಿ ಬಂದು ನಡುನಡುಗುತ್ತಲೇ ಕಾಲಿಗೆ ಬಿದ್ದು ಸ್ತುತಿಗೈಯಲು, ''ಮರುತವೇಗಿಯೂ, ಸಮಸ್ತಲೋಕಸಂಚಾರಿಯೂ ಆದ ಈತನು ಸುರರಾಜನಣುಗ, ಇವನಿಗೆ ಮುನಿಶಾಪದಿಂದ ಕಾಗೆಯ ಜನ್ಮ ಬಂದಿದೆ, ಮರೆವೊಕ್ಕ ಇವನನ್ನು ಕಾಪಾಡಬೇಕಾದುದು ಧರ್ಮ' ಎಂದು ನಿಶ್ಚೈಸಿ ಕಾಕನೊಡನೆ, 'ನಾನು ಬಿಟ್ಟ ಬಾಣವು ಅಮೋಘವಾದುದು, ಹಿಂತೆಗೆದುಕೊಳ್ಳಲು ಅಸಾಧ್ಯ

ಮುಂದುವರೆಯುವುದು



ಲೇಖಕರು
ವಿಶ್ವಾಸ್ .ಡಿ.ಗೌಡ
ಲೇಖಕರು
ಸಾಮಾಜಿಕ ಚಿಂತಕರು

# ಕಳ್ಳರು: ದೇಶದ ಆರ್ಥಿಕತೆಯ ಮೌನ ಶಿಲ್ಪಿಗಳು

ಸಾಮಾನ್ಯವಾಗಿ ''ಕಳ್ಳ'' ಎಂಬ ಪದ ಕೇಳಿದರೆ ನಮ್ಮ ಮನಸ್ಸಿನಲ್ಲಿ ಮೂಡುವ ಚಿತ್ರ ನಕಾರಾತ್ಮಕವಾಗಿರುತ್ತದೆ. ಕಳ್ಳತನ ಮಾಡುವುದು ಅಪರಾಧ, ಸಮಾಜಕ್ಕೆ ಹಾನಿಕಾರಕ ಎಂಬುದು ಎಲ್ಲರಿಗೂ ಗೊತ್ತಿರುವ ಸತ್ಯ. ಆದರೆ ಕೆಲವೊಮ್ಮೆ ವ್ಯಂಗ್ಯಮಯ ದೃಷ್ಟಿಯಿಂದ ಒಂದು ವಿಷಯವನ್ನು ನೋಡಿದಾಗ ಅದರಲ್ಲಿ ಅಡಗಿರುವ ವಿಚಿತ್ರ ಸತ್ಯಗಳು ಗೋಚರಿಸುತ್ತವೆ. ಎಂಟನೇ ತರಗತಿಯ ಒಬ್ಬ ವಿದ್ಯಾರ್ಥಿ ''ಕಳ್ಳರು'' ಎಂಬ ವಿಷಯದ ಮೇಲೆ ಬರೆದ ಪ್ರಬಂಧ ಇದಕ್ಕೆ ಅತ್ಯುತ್ತಮ ಉದಾಹರಣೆ. ಆತ ಕಳ್ಳರನ್ನು ಕೇವಲ ಅಪರಾಧಿಗಳಾಗಿ ನೋಡದೆ, ದೇಶದ ಆರ್ಥಿಕ ವ್ಯವಸ್ಥೆಯ ಒಂದು ''ಅನೈಚ್ಛಿಕ ಉದ್ಯೋಗ ಸೃಷ್ಟಿಕರ್ತರು'' ಎಂದು ವಿವರಿಸಿದ್ದಾನೆ.ವಿದ್ಯಾರ್ಥಿಯ ಪ್ರಕಾರ, ಕಳ್ಳರಿರುವುದರಿಂದಲೇ ಬೀಗಗಳು, ಲಾಕರ್‌ಗಳು, ಸೇಫ್‌ಗಳು ಮತ್ತು ಭದ್ರತಾ ಸಾಧನಗಳಿಗೆ ಬೇಡಿಕೆ ಉಂಟಾಗುತ್ತದೆ. ನಿಜವಾಗಿಯೂ ಯೋಚಿಸಿದರೆ, ಕಳ್ಳತನದ ಭಯವೇ ಇಲ್ಲದಿದ್ದರೆ ಜನರು ದುಬಾರಿ ಲಾಕರ್‌ಗಳನ್ನು ಏಕೆ ಖರೀದಿಸುತ್ತಿದ್ದರು? ಮನೆಗಳಿಗೆ ಗಟ್ಟಿಯಾದ ಬಾಗಿಲುಗಳು, ಕಬ್ಬಿಣದ ಗ್ರಿಲ್‌ಗಳು, ಅಲಾರಂ ವ್ಯವಸ್ಥೆಗಳು, ಡಿಜಿಟಲ್ ಲಾಕ್‌ಗಳು ಇವೆಲ್ಲವೂ ಕಳ್ಳತನದ ಭೀತಿಯ ಪರಿಣಾಮವೇ. ಇವುಗಳನ್ನು ತಯಾರಿಸುವ ಕಾರ್ಖಾನೆಗಳು ಸಾವಿರಾರು ಕಾರ್ಮಿಕರಿಗೆ ಉದ್ಯೋಗ ನೀಡುತ್ತಿವೆ. ಅಂದರೆ ಕಳ್ಳರು ಪರೋಕ್ಷವಾಗಿ ಕೈಗಾರಿಕೆಗಳ ಚಕ್ರವನ್ನು ತಿರುಗಿಸುತ್ತಿದ್ದಾರೆ ಎನ್ನುವ ವ್ಯಂಗ್ಯಾತ್ಮಕ ಅಭಿಪ್ರಾಯವನ್ನು ವಿದ್ಯಾರ್ಥಿ ವ್ಯಕ್ತಪಡಿಸಿದ್ದಾನೆ.ಮನೆ ನಿರ್ಮಾಣ ಕ್ಷೇತ್ರದಲ್ಲಿಯೂ ಇದೇ ಸ್ಥಿತಿ. ಸುರಕ್ಷತೆಗಾಗಿ ಜನರು ಬಲಿಷ್ಠ ಬಾಗಿಲು, ಕಿಟಕಿ, ಕಬ್ಬಿಣದ ಗೇಟ್, ಗ್ರಿಲ್ ಮುಂತಾದವುಗಳನ್ನು ಅಳವಡಿಸುತ್ತಾರೆ. ಇದರಿಂದ ಕಾರ್ಪೆಂಟರ್‌ಗಳು, ಫ್ಯಾಬ್ರಿಕೇಟರ್‌ಗಳು, ಗಾರೆ ಕೆಲಸದವರು ಹಾಗೂ ಎಲೆಕ್ಟ್ರಿಷಿಯನ್‌ಗಳಿಗೆ ಕೆಲಸ ಸಿಗುತ್ತದೆ. ಕಳ್ಳರ ಭಯ ಇಲ್ಲದಿದ್ದರೆ ಭದ್ರತಾ ವ್ಯವಸ್ಥೆಗಳ ಮೇಲಿನ ವೆಚ್ಚ ಇಷ್ಟೊಂದು ಹೆಚ್ಚಿರುತ್ತಿತ್ತೇ ಎಂಬ ಪ್ರಶ್ನೆಯನ್ನು ಲೇಖನ ವ್ಯಂಗ್ಯವಾಗಿ ಎತ್ತುತ್ತದೆ.ಇದರ ಜೊತೆಗೆ, ಸೆಕ್ಯೂರಿಟಿ ಗಾರ್ಡ್‌ಗಳು ಮತ್ತು ವಾಚ್‌ಮನ್‌ಗಳ ಉದ್ಯೋಗವೂ ಕಳ್ಳತನದ ಭೀತಿಯೊಂದಿಗೇ ಬೆಸೆದುಕೊಂಡಿದೆ. ಮನೆಗಳು, ಬ್ಯಾಂಕ್‌ಗಳು, ಶಾಲೆಗಳು, ಕಾರ್ಖಾನೆಗಳು, ಮಾಲ್‌ಗಳು ಎಲ್ಲೆಡೆ ಭದ್ರತೆಗೆ ಜನರನ್ನು ನೇಮಕ ಮಾಡಲಾಗುತ್ತದೆ. ಸಿಸಿಟಿವಿ ಕ್ಯಾಮೆರಾ, ಮೆಟಲ್ ಡಿಟೆಕ್ಟರ್, ಅಲಾರಂ ಸಿಸ್ಟಮ್ ಹಾಗೂ ಇತರ ಭದ್ರತಾ ಸಾಧನಗಳನ್ನು ತಯಾರಿಸುವ ಕಂಪನಿಗಳು ಕೂಡ ಈ ಭೀತಿಯಿಂದಲೇ ಬೆಳೆದಿವೆ. ತಂತ್ರಜ್ಞಾನ ಕ್ಷೇತ್ರದ ಒಂದು ಭಾಗವೇ ಭದ್ರತೆಯ ಸುತ್ತ ನಿರ್ಮಾಣವಾಗಿದೆ ಎನ್ನುವುದು ಇಲ್ಲಿ ಕಾಣುವ ಸತ್ಯ. ವಿದ್ಯಾರ್ಥಿಯ ದೃಷ್ಟಿಯಲ್ಲಿ ಇದು ಕೂಡ ದೇಶದ ಆರ್ಥಿಕ ಚಟುವಟಿಕೆಯ ಒಂದು ಭಾಗವೇ.ಇಂದಿನ ಯುಗದಲ್ಲಿ ಮೊಬೈಲ್, ಲ್ಯಾಪ್‌ಟಾಪ್, ಬೈಕ್ ಅಥವಾ ಕಾರು ಕಳುವಾದರೆ ಜನರು ಹೊಸದನ್ನು ಖರೀದಿಸುತ್ತಾರೆ. ಇದರಿಂದ ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚುತ್ತದೆ. ಕಂಪನಿಗಳಿಗೆ ಲಾಭವಾಗುತ್ತದೆ. ವ್ಯಾಪಾರ ಚಟುವಟಿಕೆ ಮುಂದುವರೆಯುತ್ತದೆ. ಈ ವಾದ ನಿಜಕ್ಕೂ ವ್ಯಂಗ್ಯಭರಿತವಾದರೂ, ಅದರೊಳಗೆ ಸಮಾಜದ ಉಪಭೋಗ

**ವಿದ್ಯಾರ್ಥಿಯ ಚಿಂತನೆ ಇನ್ನೂ ಮುಂದೆ ಸಾಗುತ್ತದೆ. ಕಳ್ಳರು ಇಲ್ಲದಿದ್ದರೆ ಪೊಲೀಸ್ ಇಲಾಖೆ ಇಷ್ಟೊಂದು ದೊಡ್ಡದಾಗುತ್ತಿತ್ತೇ ಪೊಲೀಸರು, ಪೊಲೀಸ್ ಅಧಿಕಾರಿಗಳು, ತನಿಖಾಧಿಕಾರಿಗಳು, ನ್ಯಾಯಾಧೀಶರು, ವಕೀಲರು, ಕೋರ್ಟ್ ಸಿಬ್ಬಂದಿ ಇವರೆಲ್ಲರ ಕೆಲಸ ಅಪರಾಧ ನಿಯಂತ್ರಣದೊಂದಿಗೆ ನೇರವಾಗಿ ಸಂಬಂಧಿಸಿದೆ. ಜೈಲುಗಳು, ಜೈಲು ಸಿಬ್ಬಂದಿ ಹಾಗೂ ಕೈದಿಗಳ ಪುನರ್ವಸತಿ ವ್ಯವಸ್ಥೆಗಳೂ ಅಪರಾಧಿಗಳ ಅಸ್ತಿತ್ವದಿಂದಲೇ ಹುಟ್ಟಿಕೊಂಡಿವೆ. ಸರ್ಕಾರ ಪೊಲೀಸ್ ವಾಹನಗಳು, ಯೂನಿಫಾರ್ಮ್‌ಗಳು, ಭದ್ರತಾ ಸಾಧನಗಳು, ಶಸ್ತ್ರಾಸ್ತ್ರಗಳು ಮುಂತಾದವುಗಳಿಗೆ ಹಣ ಖರ್ಚು ಮಾಡುತ್ತದೆ. ಇದರಿಂದ ಹಲವು ಕೈಗಾರಿಕೆಗಳು ಬೆಳೆಯುತ್ತವೆ.**



ಧೋರಣೆಯ ಒಂದು ವಿಚಿತ್ರ ಚಿತ್ರಣ ಅಡಗಿದೆ.ಲೇಖನದ ಕೊನೆಯ ಭಾಗದಲ್ಲಿ ವಿದ್ಯಾರ್ಥಿ ಅತ್ಯಂತ ವ್ಯಂಗ್ಯಾತ್ಮಕವಾಗಿ ''ಕೆಲವರು ದೊಡ್ಡ ಮಟ್ಟದ ಕಳ್ಳರು ರಾಜಕೀಯಕ್ಕೆ ಸೇರುತ್ತಾರೆ'' ಎಂದು ಹೇಳಿದ್ದಾನೆ. ಇದು ಸಮಾಜದಲ್ಲಿರುವ ಭ್ರಷ್ಟಾಚಾರದ ಮೇಲೆ ಹೊಡೆದ ತೀಕ್ಷ್ಣ ಟೀಕೆ. ಸಣ್ಣ ಕಳ್ಳತನ ಅಪರಾಧವೆನಿಸಿದರೂ, ದೊಡ್ಡ ಮಟ್ಟದ ಭ್ರಷ್ಟಾಚಾರವು ಕೆಲವೊಮ್ಮೆ ಗೌರವದ ಹೊದಿಕೆಯಲ್ಲಿ ನಡೆಯುತ್ತದೆ ಎಂಬ ಕಹಿ ಸತ್ಯವನ್ನು ವಿದ್ಯಾರ್ಥಿ ಹಾಸ್ಯಮಯವಾಗಿ ವ್ಯಕ್ತಪಡಿಸಿದ್ದಾನೆ.ಒಟ್ಟಿನಲ್ಲಿ, ಈ ಪ್ರಬಂಧ ಕಳ್ಳತನವನ್ನು ಸಮರ್ಥಿಸುವುದಿಲ್ಲ. ಬದಲಿಗೆ, ಸಮಾಜದ ವ್ಯವಸ್ಥೆಗಳು ಹಲವಾರು ಬಾರಿ ಸಮಸ್ಯೆಗಳ ಸುತ್ತಲೇ ನಿರ್ಮಾಣವಾಗುತ್ತವೆ ಎಂಬ ವ್ಯಂಗ್ಯಾತ್ಮಕ ಸತ್ಯವನ್ನು ಮನರಂಜನೆಯ ಮೂಲಕ ಹೇಳುತ್ತದೆ. ಒಂದು ಎಂಟನೇ ತರಗತಿ ವಿದ್ಯಾರ್ಥಿಯ ಕಲ್ಪನೆ ಮತ್ತು ವಿಶ್ಲೇಷಣಾ ಶಕ್ತಿ ಶಿಕ್ಷಕರನ್ನೇ ಆಶ್ಚರ್ಯಕ್ಕೊಳಪಡಿಸಿತ್ತು. ಅದಕ್ಕಾಗಿಯೇ ಶಿಕ್ಷಕರು ಆತನಿಗೆ ಹತ್ತಕ್ಕೆ ಹತ್ತು ಅಂಕಗಳನ್ನು ಕೊಟ್ಟಿರಬಹುದು! ನಮ್ಮ ಸಮಾಜದಲ್ಲಿ ಒಳ್ಳೆಯದು ಮತ್ತು ಕೆಟ್ಟದ್ದು ಎರಡೂ ಜೊತೆಯಾಗಿ ಸಾಗುತ್ತವೆ. ಆದರೆ ಕೆಲವೊಮ್ಮೆ ವ್ಯಂಗ್ಯ ಮತ್ತು ಹಾಸ್ಯದ ಮೂಲಕ ಹೇಳುವ ಸತ್ಯಗಳು ನೇರವಾಗಿ ಹೇಳುವ ಸತ್ಯಗಳಿಗಿಂತ ಹೆಚ್ಚು ಪರಿಣಾಮಕಾರಿಯಾಗುತ್ತವೆ. ಈ ವಿದ್ಯಾರ್ಥಿಯ ಪ್ರಬಂಧ ಅದಕ್ಕೆ ಜೀವಂತ ಉದಾಹರಣೆ.



ಕಲಾ ಸಾಹಿತ್ಯ
ವೈ.ಕೆ. ಸಂಧ್ಯಾ ಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

# ಬಹುಮುಖ ಪ್ರತಿಭೆ- ನೃತ್ಯ ಕಲಾವಿದೆ ಕು. ನೇಯಾ ಭಾಸ್ಕರ್ ರಂಗಪ್ರವೇಶ



ಬೆಂಗಳೂರಿನ ಹೆಸರಾಂತ 'ನಟರಾಜರಂಗಂ ಸ್ಕೂಲ್ ಆಫ್ ಡ್ಯಾನ್ಸ್' ನೃತ್ಯಸಂಸ್ಥೆಯ ಬಹು ಬದ್ಧತೆಯ ನಾಟ್ಯಗುರು ಮತ್ತು ಉತ್ತಮ ನೃತ್ಯ ಕಲಾವಿದೆ ಎಂದು ಹೆಸರಾಗಿರುವ ಶ್ರೀಮತಿ. ಅಭಿನಯಾ ನಟರಾಜನ್ ಅವರ ಬಳಿ ಕಳೆದ ನಾಲ್ಕು ವರ್ಷಗಳಿಂದ ಹಾಗೂ ಒಟ್ಟು ಹನ್ನೊಂದು ವರ್ಷಗಳ ನೃತ್ಯಾಭ್ಯಾಸ ಹೊಂದಿರುವ ಬಹುಮುಖ ಪ್ರತಿಭೆ ಕು. ನೇಯಾ ಭಾಸ್ಕರ್ ಶ್ರೀಮತಿ. ಶರ್ಮಿಳಾ ಆರ್ಮುಗಂ ಮತ್ತು ಭಾಸ್ಕರ್ ರುದ್ರಮೂರ್ತಿ ಅವರ ಮಗಳು. ಈಗಾಗಲೇ ಕರ್ನಾಟಕ ಸರ್ಕಾರದ ಜ್ಯೂನಿಯರ್ ನೃತ್ಯ ಪರೀಕ್ಷೆಯಲ್ಲಿ ಉತ್ತಮಾಂಕಗಳಿಂದ ತೇರ್ಗಡೆ ಹೊಂದಿದ್ದು 'ಗೇರ್ ಇನೋವೇಟಿವ್ ಇಂಟರ್ನ್ಯಾಷನಲ್ ಸ್ಕೂಲ್' ನಲ್ಲಿ 12 ನೇ ತರಗತಿಯಲ್ಲಿ ಅಭ್ಯಾಸ ಮಾಡುತ್ತಿದ್ದಾಳೆ. ಓದಿನಲ್ಲಿ ಮುಂದಿರುವ ನೇಯಾ, ಕ್ರೀಡೆ ಮತ್ತು ಕಲಾರಂಗದಲ್ಲೂ ತನ್ನ ಪ್ರತಿಭೆಯನ್ನು ತೋರಿದ್ದಾಳೆ. ನಾಡಿನಾದ್ಯಂತ ಅನೇಕ ವೇದಿಕೆಗಳ ಮೇಲೆ ನೃತ್ಯ ಪ್ರದರ್ಶನ ನೀಡಿ ಮೆಚ್ಚುಗೆ ಗಳಿಸಿರುವ ಇವಳು, ಉತ್ತಮ ಕ್ರೀಡಾಪಟು ಕೂಡ. ರಾಜ್ಯಮಟ್ಟದ ಅಥ್ಲಿಟ್, ಫುಟ್ ಬಾಲ್ ಆಟಗಾರ್ತಿ ಮತ್ತು ಟೆನಿಸ್ ಆಟದಲ್ಲೂ ಪಾಲ್ಗೊಂಡಿರುವ ವೈಶಿಷ್ಟ್ಯ ಅವಳದು. ಇವುಗಳಿಗಾಗಿ ನೇಯಾ ಚಿನ್ನದ ಪದಕಗಳನ್ನು ಗಳಿಸಿರುವ ಪ್ರತಿಭಾನ್ವಿತೆ. ಇದೀಗ ನೇಯಾ ತನ್ನ ನೃತ್ಯ ಪ್ರತಿಭೆಯ ಪ್ರದರ್ಶನಕ್ಕಾಗಿ ಇದೇ ಭಾನುವಾರ 7 ರಂದು ಬೆಳಗ್ಗೆ 10.30 ಕ್ಕೆ ಬೆಂಗಳೂರು-ಬ್ರೂಕ್ ಫೀಲ್ಡ್‌ನ ಸಿ. ಎಂ.ಆರ್.ಐ.ಟಿ ಕಾಲೇಜಿನ 'ಧ್ವನಿ ' ಸಭಾಂಗಣದಲ್ಲಿ ವಿದ್ಯುಕ್ತವಾಗಿ ತನ್ನ ರಂಗಪ್ರವೇಶವನ್ನು ನೆರವೇರಿಸಿಕೊಳ್ಳಲಿದ್ದಾಳೆ. ಈ ನೃತ್ಯ ಬೆಡಗಿಯ ಸುಮನೋಹರ ನಾಟ್ಯ ಸೊಬಗನ್ನು ಕಣ್ತುಂಬಿಕೊಳ್ಳಲು ಸರ್ವರಿಗೂ ಸುಸ್ವಾಗತ.



ಬೆಂಗಳೂರಿನಲ್ಲಿ ವಾಸವಾಗಿರುವ ಶ್ರೀ. ಭಾಸ್ಕರ್ ರುದ್ರಮೂರ್ತಿ ಮತ್ತು ಶ್ರೀಮತಿ ಶರ್ಮಿಳಾ ಅರ್ಮುಗಂ ಅವರ ಮುದ್ದಿನ ಮಗಳಾದ ನೇಯಾಗೆ ನೃತ್ಯ ಬಾಲ್ಯದ ಒಲವು. ಅದನ್ನು ಗಮನಿಸಿದ ಅವಳ ಹೆತ್ತವರು ಅವಳನ್ನು ಭರತನಾಟ್ಯ ಕಲಿಯಲು ಸೇರಿಸಿದರು. ಒಟ್ಟು ಹನ್ನೊಂದು ವರ್ಷಗಳ ಕಾಲ ನೇಯಾ ಬಹು ಆಸಕ್ತಿಯಿಂದ ನೃತ್ಯ ಕಲಿಯುತ್ತಿದ್ದು, ಉತ್ತಮ ನೃತ್ಯ ಪಟು- ಗುರುವಾದ ಅಭಿನಯಾ ನಟರಾಜನ್ ಅವರ ಬಳಿ ಕಳೆದ 4 ವರ್ಷಗಳಿಂದ ನೃತ್ಯದ ವಿವಿಧ ಆಯಾಮಗಳ ವಿಶೇಷ ತರಬೇತಿ ಪಡೆಯುತ್ತಿದ್ದಾಳೆ. ಸ್ವತಃ ಕಲಾಪ್ರಪೂರ್ಣ ನೃತ್ಯ ಕಲಾವಿದೆಯಾಗಿ ಗಮನ ಸೆಳೆದಿರುವ ಅಭಿನಯಾ ಪ್ರತಿಬಾರಿಯೂ ತಮ್ಮ ಶಿಷ್ಯೆಯರ ರಂಗಪ್ರವೇಶಗಳಲ್ಲಿ ಪ್ರಾಯೋಗಿಕ ಹೊಸ ಪ್ರಯತ್ನಗಳನ್ನು ನಡೆಸುವುದು ಅವರ ವೈಶಿಷ್ಟ್ಯ.

ಉತ್ತಮ ಕ್ರೀಡಾಪಟುವಾದ ನೇಯಾ ಉತ್ತಮ ವ್ಯಾಸಂಗದ ಜೊತೆ, ಕಲಾಭ್ಯಾಸ ಹಾಗೂ ವಿವಿಧ ಕ್ರೀಡಾ ಟೋರ್ನಮೆಂಟುಗಳಲ್ಲಿ ತನ್ನ ಶಾಲೆಯನ್ನು ಪ್ರತಿನಿಧಿಸಿ ಅನೇಕ ಬಹುಮಾನಗಳನ್ನು ಗಳಿಸಿರುವುದು ಅವಳ ಅಗ್ಗಳಿಕೆ. 'ನೇಯಾ ನವರಸ' ಅವಳ ಸೃಜನಾತ್ಮಕ ಪ್ರತಿಭೆಯ ಇನ್ನೊಂದು ಮುಖವನ್ನು ಅನಾವರಣಗೊಳಿಸುತ್ತಿದ್ದು, ಶಾಸ್ತ್ರೀಯ ನೃತ್ಯದ ಸೌಂದರ್ಯ ಪ್ರಸಾರಕ್ಕಾಗಿ ತನ್ನದೇ ಆದ ಅನೇಕ ಕಾರ್ಯ ಯೋಜನೆಗಳನ್ನು ನೇಯಾ ಹಮ್ಮಿಕೊಂಡಿದ್ದಾಳೆ.

# ನಮ್ಮ ನಾಡಿನ ಹೆಮ್ಮೆಯ ಗೌರವಾನ್ವಿತರು ಶ್ರೀ ಡಿ ಕೆ ಶಿವಕುಮಾರ್ ರವರಲ್ಲಿ ಮನವಿ ಪ್ರಮಾಣವಚನ ಸ್ವೀಕಾರದ ಸಮಯದಲ್ಲಿ ಈ ನೆಲದ ಅನ್ನದಾತರಿಗೆ ವಿವಾಹ ಭಾಗ್ಯ ಯೋಜನೆ ಜಾರಿಗೊಳಿಸಲು ಮನವಿ

ಮಾನ್ಯರೇ ರಾಜ್ಯದಲ್ಲಿ ಅನ್ನದಾತ ಮಕ್ಕಳು ಪ್ರತೀ ಹಳ್ಳಿಯಲ್ಲಿ ಸುಮಾರು ಶೇಕಡಾ 20 ರಿಂದ 30 ರಷ್ಟು ಯುವಕರಿಗೆ ವಿವಾಹ ಭಾಗ್ಯ ಸಿಗುತ್ತಿಲ್ಲ. ಈ ವಿಷಯದ ಬಗ್ಗೆ ಮಕ್ಕಳ ಪೋಷಕರು ಕಂಗಾಲಾಗಿದ್ದಾರೆ. ರೈತ ಮಕ್ಕಳಿಗೆ ಹೆಣ್ಣುಮಕ್ಕಳನ್ನು ಕೊಡುತ್ತಿಲ್ಲ...ಈ ಗಂಭೀರ ಸಮಸ್ಯೆಗೆ ಸೂಕ್ತ ಪರಿಹಾರ ನೀಡುವುದು ಬಹಳ ಅವಶ್ಯಕವಾಗಿದ್ದು.....

ಈ ಮೇಲ್ಕಂಡ ವಿಷಯದ ಬಗ್ಗೆ ನೀವುಗಳು ಈ ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುವ ಸಮಯದಲ್ಲಿ ಈ ರಾಜ್ಯದ ರೈತಾಪಿ ಮಕ್ಕಳನ್ನು ವಿದ್ಯಾವಂತ ಹೆಣ್ಣು ಮಕ್ಕಳು ಮದುವೆಯಾದರೆ ಅಂತಹ ಹೆಣ್ಣುಮಕ್ಕಳಿಗೆ ಸಂಬಂಧಪಟ್ಟ ಕ್ಷೇತ್ರದಲ್ಲಿ ಅರ್ಹತೆಯ ಮೂಲಕ ಸರ್ಕಾರಿ ಕೆಲಸ ನೀಡುವ ಬಗ್ಗೆ ಆದೇಶ ಹೊರಡಿಸಿ. ಇದರಿಂದ ಈ ತಲೆಮಾರಿನ ಅನ್ನದಾತಮಕ್ಕಳನ್ನು ನಾವು ರಕ್ಷಿಸಿದಂತೆ ಹಾಗೂ ಈ ನೆಲದ ಬೆನ್ನೆಲುಬಾಗಿರುವವರ ಜೀವನಕ್ಕೆ ನಮ್ಮ ರಾಜ್ಯ ಸರ್ಕಾರ ಆಶ್ರಯ ನೀಡಿದಂತಾಗುತ್ತದೆ. ದಯಮಾಡಿ ಈ ನೆಲದ ಅನ್ನದಾತರ ಬಗ್ಗೆ ಗೌರವ ನೀಡಿ ನಿಮ್ಮ ಇನ್ನೊಂದು ಭಾಗ್ಯ ಈ ಸಮೃದ್ಧ ನೆಲದ ಅನ್ನದಾತರಿಗೆ ನೀಡಿದಂತಾಗುತ್ತದೆ.

ವಂದನೆಗಳು ಚನ್ನೇಗೌಡ ಉಜ್ಜನಿ ಚಲುವಯ್ಯ
ಲೇಖಕರು, ಕನ್ನಡ ಪರ ಚಿಂತಕರು.



ಅಂತರಂಗದ ಮಾತು
ಡಾ.ಸುಧಾಕರ.ಜಿ. ಲಕ್ಕವಳ್ಳಿ
ಲೇಖಕರು
ಸಾಮಾಜಿಕ ಚಿಂತಕರು

# ಹನುಮಾನ್ ಗದೆ:ಪೈಲ್ವಾನರ ಭುಜದ ಮಿಂಚು!

ಹಳ್ಳಿಯ ಗರಡಿಮನೆಯ ಕೆಮ್ಮಣ್ಣಿನ ಘಮಲಲ್ಲಿ ಗಿರಿಗಿರನೆ ಸುತ್ತುವ ಹನುಮಾನ್ ಗದೆ ಕಣ್ಮನ ಸೆಳೆಯುತ್ತದೆ. ಇದು ಕೇವಲ ಆಯುಧವಲ್ಲ ಮೈಯನ್ನು ಕಲ್ಲಾಗಿಸುವ ತಪೋಸಾಧನ. ಭೀಮ-ಹನುಮನ ಸಾಮರ್ಥ್ಯದ ನೆನಪು ತರುವ ಈ ತಾಲೀಮು ಪೈಲ್ವಾನರಿಗೆ ಗಜಬಲ ನೀಡುತ್ತದೆ. ಜಿಮ್ ಯಂತ್ರಗಳಿಗಿಂತ ಗದೆಯೇ ತೋಳಿಗೆ ನೈಜ ಕಸುವು ತುಂಬುತ್ತದೆ.

ಒಂದು ತುದಿ ಭಾರವಾದ ಗದೆಯನ್ನು ಹಿಡಿದಿಡುವುದೇ ಮೊದಲ ಸವಾಲು. ಹಿಡಿಕೆಯನ್ನು ಬಿಗಿಯಾಗಿ ಅಪ್ಪಿದಾಗ ಮುಂಗೈ, ಮಣಿಕಟ್ಟು ಉಕ್ಕಿನಂತಾಗುತ್ತವೆ. ಅಖಾಡದಲ್ಲಿ ಎದುರಾಳಿಯ ಮೈ ಹಿಡಿದರೆ ಬಿಡಿಸಲಾಗದ ವಜ್ರಮುಷ್ಟಿ ಇಲ್ಲಿಂದಲೇ ರೂಪುಗೊಳ್ಳುತ್ತದೆ.

ತಲೆಯ ಹಿಂದೆ ವೃತ್ತಾಕಾರವಾಗಿ ಲಯಬದ್ಧವಾಗಿ ಸುತ್ತಿಸಿದಾಗ ಹೆಗಲ ಸ್ನಾಯುಗಳು ಅರಳಿ, ಎದೆಗೂಡು ವಿಸ್ತರಿಸುತ್ತದೆ. ಭುಜದ ಕೀಲುಗಳಿಗೆ ಅಪೂರ್ವ ನಮನೀಯತೆ, ಹಿಡಿತ ದೊರೆಯುತ್ತದೆ. ನೂರಾರು ಬಾರಿ ವೇಗವಾಗಿ ತಿರುಗಿಸುವಾಗ ಉಸಿರಾಟಕ್ಕೆ ಹದ ಸಿಗುತ್ತದೆ; ಶ್ವಾಸಕೋಶದ ದಮ್ಮು, ಕಣದ ಸಹನೆ ಹೆಚ್ಚುತ್ತದೆ.

ಭಾರ ಒಂದೆಡೆ ವಾಲದಂತೆ ಬೆನ್ನು, ಉದರದ ಸ್ನಾಯುಗಳನ್ನು ಬಿಗಿಯಿಡಬೇಕು. ಇದರಿಂದ ಬೆನ್ನೆಲುಬು ವಜ್ರವಾಗುತ್ತದೆ, ನೆಲಕ್ಕೆ ಅಂಟಿಕೊಂಡಂತೆ ನಿಲ್ಲುವ ಸಮತೋಲನ ಸಿದ್ಧಿಸುತ್ತದೆ.

ಕ್ಷಣ ಗಮನ ತಪ್ಪಿದರೂ ಗದೆ ಮೈಗೆ ಅಪ್ಪಳಿಸೀತು; ಹೀಗಾಗಿ ಏಕಾಗ್ರತೆ, ಚುರುಕುತನ ಬೆಳೆಯುತ್ತದೆ. ಎದುರಾಳಿಯ ದಾಳಿಗೆ ಮಿಂಚಿನ ಪ್ರತಿಕ್ರಿಯೆ ಇಲ್ಲೇ ಕಲಿಯುವುದು.ಹನುಮಾನ್ ಗದೆ ಕೇವಲ ಕಬ್ಬಿಣವಲ್ಲ; ಶೌರ್ಯ-ಶಿಸ್ತಿನ ಮುದ್ರೆ. ಯಂತ್ರಯುಗದ ಯುವಜನ ಮತ್ತೆ ಮಣ್ಣಿನೆಡೆಗೆ ಮುಖ ಮಾಡಿ, ಈ ದೇಸಿ ವಿಜ್ಞಾನವನ್ನು ಅಪ್ಪಿಕೊಂಡರೆ ನಾಡಿನ ಕುಸ್ತಿ ಪರಂಪರೆ ಅಜೇಯವಾಗಿ ಮಿನುಗುತ್ತದೆ.



# ಈ ಕೆಲವು ಸಸ್ಯಾಹಾರಗಳಿಂದಲೂ ಅತ್ಯಧಿಕ ಪ್ರಮಾಣದ ಪ್ರೋಟೀನ್ ಪಡೆಯಬಹುದು?

ದೇಹವನ್ನು ಬಲವಾಗಿ ಹಾಗೂ ಆರೋಗ್ಯವಾಗಿಡಲು ಪ್ರೋಟೀನ್ ಅತ್ಯಗತ್ಯವಾಗಿ ಬೇಕಾಗುತ್ತದೆ. ಪ್ರೋಟೀನ್ ಸ್ನಾಯುಗಳನ್ನು ಬಲಪಡಿಸಲು, ದೇಹದ ಜೀವಕೋಶಗಳನ್ನು ಸರಿಪಡಿಸಲು ಹಾಗೂ ದೀರ್ಘಕಾಲದವರೆಗೆ ಶಕ್ತಿಯ ಮಟ್ಟ ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ಜನರು ಸಾಮಾನ್ಯವಾಗಿ ಪ್ರೋಟೀನ್ ಅನ್ನು ಮಾಂಸಾಹಾರಿ ಆಹಾರಗಳಿಂದ ಮಾತ್ರ ಪಡೆಯಲಾಗುತ್ತದೆ ಎಂದು ತಿಳಿದುಕೊಂಡಿದ್ದಾರೆ. ಸಸ್ಯಾಹಾರಿಗಳಿಗೆ ದೇಹದ ಪ್ರೋಟೀನ್ ಅವಶ್ಯಕತೆಗಳನ್ನು ಸುಲಭವಾಗಿ ಪೂರೈಸುವ ಹಲವಾರು ಆಹಾರಗಳು ಲಭ್ಯವಿದೆ.

ನಿಮ್ಮ ದೈನಂದಿನ ಆಹಾರದಲ್ಲಿ ಸಾಕಷ್ಟು ಪ್ರಮಾಣದ ಪ್ರೋಟೀನ್ ಕೊರತೆ ಉಂಟಾದರೆ, ದೈಹಿಕ ದೌರ್ಬಲ್ಯ ಆಯಾಸ ಸ್ನಾಯುಗಳ ನಷ್ಟದಂತಹ ಸಮಸ್ಯೆಗಳಿಗೆ ಕಾರಣವಾಗಬಹುದು. ಕಸರತ್ತು ಮಾಡುವವರು, ಜಿಮ್‌ಗೆ ಹೋಗುವವರು ಹಾಗೂ ದೇಹದ ತೂಕ ಇಳಿಸಿಕೊಳ್ಳಲು ಪ್ರಯತ್ನಿಸುವವರಿಗೆ ಪ್ರೋಟೀನ್ ವಿಶೇಷವಾಗಿ ನಿರ್ಣಾಯಕ ಪಾತ್ರವಹಿಸುತ್ತದೆ. ದೈನಂದಿನ ಅಗತ್ಯ ಪ್ರಮಾಣದ ಪ್ರೋಟೀನ್ ಪಡೆದುಕೊಳ್ಳುವುದರಿಂದ ದೇಹವು ಫಿಟ್, ಸಕ್ರಿಯವಾಗಿರುವುದರ ಜೊತೆಗೆ ಶಕ್ತಿಯುತವಾಗಿರಲು ಸಾಧ್ಯವಾಗುತ್ತದೆ. ಆರೋಗ್ಯಕರ, ಪ್ರೋಟೀನ್ ಭರಿತ ಸಸ್ಯಾಹಾರಿ ಆಹಾರ ದೈನಂದಿನ ಆಹಾರದಲ್ಲಿ ಸೇರಿಸಿಕೊಳ್ಳುವುದು ಅವಶ್ಯವಾಗಿದೆ.

**ಪನೀರ್:** ಪನೀರ್ ಸಸ್ಯಾಹಾರಿಗಳಿಗೆ ಪ್ರೋಟೀನ್‌ನ ಅತ್ಯಂತ ಜನಪ್ರಿಯ ಮೂಲ ಎಂದು ಪರಿಗಣಿಸಲಾಗಿದೆ. ಇದು ಉತ್ತಮ ಪ್ರಮಾಣದ ಕ್ಯಾಲ್ಸಿಯಂ ಮತ್ತು ಆರೋಗ್ಯಕರ ಕೊಬ್ಬನ್ನು ಸಹ ಹೊಂದಿರುತ್ತದೆ. ಪನೀರ್ ಸ್ನಾಯುಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ. ದೀರ್ಘಕಾಲದವರೆಗೆ ನಿಮ್ಮನ್ನು ಹೊಟ್ಟೆ ತುಂಬಿರುವಂತೆ ಮಾಡುತ್ತದೆ. ಇದನ್ನು ಸಲಾಡ್‌ಗಳು, ಮೇಲೋಗರಗಳು ಇಲ್ಲವೇ ತಿಂಡಿಯಾಗಿ ಸೇವಿಸಬಹುದು ಎಂದು ತಜ್ಞರು ತಿಳಿಸುತ್ತಾರೆ.

ಕ್ಯಾಲ್ಸಿಯಂ ಮತ್ತು ರಂಜಕದ ಅಂಶವಿರುವುದರಿಂದ ಇದು ಮೂಳೆ, ಹಲ್ಲುಗಳನ್ನು ಬಲಪಡಿಸುತ್ತದೆ. ಪನೀರ್ ಸೇವನೆಯಿಂದ ಹೊಟ್ಟೆ ತುಂಬಿದ ಅನುಭವವಾಗುತ್ತದೆ, ಪದೇ ಪದೇ ಹಸಿವಾಗುವುದನ್ನು ತಡೆಯುತ್ತದೆ. ಇದರಲ್ಲಿ ಕಾರ್ಬೋಹೈಡ್ರೇಟ್ ಅಂಶ ಕಡಿಮೆ ಇರುವುದರಿಂದ, ಮಧುಮೇಹ ಇರುವವರಿಗೆ ಇದು ಅತ್ಯುತ್ತಮ ಆಹಾರವಾಗಿದೆ. ಪೊಟ್ಯಾಸಿಯಮ್ ಮತ್ತು ಮೆಗ್ನೀಸಿಯಮ್ ರಕ್ತದೊತ್ತಡವನ್ನು ನಿಯಂತ್ರಿಸಲು ಹಾಗೂ ಹೃದಯವನ್ನು ಆರೋಗ್ಯವಾಗಿಡಲು ತುಂಬಾ ಸಹಾಯವಾಗುತ್ತದೆ.

**ಮಸೂರ ಬೇಳೆ:** ಕೆಂಪು ಮಸೂರ ಬೇಳೆ ಸಸ್ಯಾಹಾರಿಗಳಿಗೆ ಪ್ರೋಟೀನ್‌ನ ಅತ್ಯುತ್ತಮ ಮೂಲವಾಗಿದೆ. ಈ ಬೇಳೆಯಲ್ಲಿ ಪ್ರೋಟೀನ್ ಮಾತ್ರವಲ್ಲದೇ ಫೈಬರ್, ಕಬ್ಬಿಣ ಹಾಗೂ ವಿವಿಧ ಖನಿಜಗಳಲ್ಲಿ ಸಮೃದ್ಧವಾಗಿವೆ. ಜೀರ್ಣಕ್ರಿಯೆ ಸುಧಾರಿಸುತ್ತದೆ, ದೀರ್ಘಕಾಲದವರೆಗೆ ದೇಹಕ್ಕೆ ನಿರಂತರ ಶಕ್ತಿಯನ್ನು ಒದಗಿಸುತ್ತದೆ. ನಿಯಮಿತವಾಗಿ ನಿಮ್ಮ ಆಹಾರ ಕ್ರಮದಲ್ಲಿ ಸೇರಿಸಿಕೊಳ್ಳುವುದರಿಂದ ಸ್ನಾಯುಗಳನ್ನು ಬಲಪಡಿಸುತ್ತದೆ. ಬೇಳೆಯಲ್ಲಿ ಪ್ರೋಟೀನ್ ಮತ್ತು ಫೈಬರ್ ಎರಡರಲ್ಲೂ ಸಮೃದ್ಧವಾಗಿವೆ. ಇದರಲ್ಲಿ ಪ್ರಭೇದಗಳು ದೇಹಕ್ಕೆ ಅಗತ್ಯವಾದ ಅಮೈನೋ ಆಮ್ಲಗಳನ್ನು ನೀಡುತ್ತದೆ.

**ಸೋಯಾ ಚಂಕ್ಸ್:** ಸೋಯಾ ಚಂಕ್ಸ್ ಅನ್ನು ಸಸ್ಯಾಹಾರಿಗಳಿಗೆ 'ಪ್ರೋಟೀನ್ ಪವರ್‌ಹೌಸ್' ಎಂದು ಕರೆಯಲಾಗುತ್ತದೆ. ಇವು ಗಮನಾರ್ಹವಾಗಿ ಹೆಚ್ಚಿನ ಪ್ರಮಾಣದ ಪ್ರೋಟೀನ್ ಹೊಂದಿರುತ್ತವೆ. ಇದು ಸ್ನಾಯುಗಳನ್ನು ನಿರ್ಮಿಸಲು ಸಹಾಯ ಮಾಡುತ್ತದೆ. ಅವುಗಳನ್ನು ಕರಿ, ಪುಲಾವ್ (ಅಕ್ಕಿ ಭಕ್ಷ್ಯಗಳು) ಅಥವಾ ಸಲಾಡ್‌ಗಳಲ್ಲಿ ಸೇರಿಸಿಕೊಳ್ಳಬಹುದು. **ಕಡಲೆ ಹಾಗೂ ಬೀನ್ಸ್:** ಕಡಲೆ ಮತ್ತು ಬೀನ್ಸ್ ಎರಡೂ ಪ್ರೋಟೀನ್ ಮತ್ತು ಫೈಬರ್‌ನಲ್ಲಿ ಸಮೃದ್ಧವಾಗಿವೆ. ಅವು ದೇಹಕ್ಕೆ ನಿರಂತರ ಶಕ್ತಿಯನ್ನು ಒದಗಿಸುತ್ತವೆ. ತೂಕವನ್ನು ನಿರ್ವಹಿಸಲು ಸಹ ಸಹಾಯಕ ಎಂದು ಪರಿಗಣಿಸಲಾಗುತ್ತದೆ.

ಕಡಲೆಯಲ್ಲಿರುವ ಅಧಿಕ ನಾರಿನಂಶವು ಜೀರ್ಣಕ್ರಿಯೆ ಸುಧಾರಿಸುತ್ತದೆ, ಮಲಬದ್ಧತೆಯ ಸಮಸ್ಯೆಯನ್ನು ತಡೆಯುತ್ತದೆ. ಕಡಲೆಯು ಕೆಟ್ಟ ಕೊಲೆಸ್ಟ್ರಾಲ್ ಕಡಿಮೆ ಮಾಡುವ ಮೂಲಕ ಹೃದಯದ ಆರೋಗ್ಯ ಕಾಪಾಡುತ್ತದೆ ಕಡಲೆಯು ಕಡಿಮೆ ಗ್ಲೈಸೆಮಿಕ್ ಇಂಡೆಕ್ಸ್ ಹೊಂದಿದೆ.

# ತಿಮ್ಮಾಪೂರ, ಬೇವಿನಮಟ್ಟಿ ಗ್ರಾಮದಲ್ಲಿ ಶಾಲಾ ಪ್ರಾರಂಭೋತ್ಸವಕ್ಕೆ ಶಾಸಕ ಉಮೇಶ ಮೇಟಿ ಚಾಲನೆ

• ಉದಯವಾಹಿನಿ ,ಬಾಗಲಕೋಟೆ

ಪ್ರಸಕ್ತ ಶೈಕ್ಷಣಿಕ ವರ್ಷ ಪ್ರಾರಂಭವಾದ ಹಿನ್ನೆಲೆಯಲ್ಲಿ ಸೋಮವಾರ ತಿಮ್ಮಾಪೂರ ಹಾಗೂ ಬೇವಿನಮಟ್ಟಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಶಾಲಾ ಪ್ರಾರಂಭೋತ್ಸವ ಹಾಗೂ ದಾಖಲಾತಿ ಆಂದೋಲನಕ್ಕೆ ಬಾಗಲಕೋಟೆ ಶಾಸಕ ಉಮೇಶ ಮೇಟಿ ಚಾಲನೆ ನೀಡಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಶಾಲಾ ಪ್ರಾರಂಭೋತ್ಸವ ಹಾಗೂ ದಾಖಲಾತಿ ಆಂದೋಲನಕ್ಕೆ ಚಾಲನೆ ನೀಡಿ, ಸಾಂಕೇತಿಕವಾಗಿ ವಿದ್ಯಾರ್ಥಿಗಳಿಗೆ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ವಿತರಿಸಿದರು. ಬಳಿಕ ಮಾತನಾಡಿದ ಅವರು, ಶಿಕ್ಷಣವು ಪ್ರತಿಯೊಬ್ಬರ ಜೀವನದ ಭದ್ರ ಅಡಿಪಾಯವಾಗಿದ್ದು, ಶಿಕ್ಷಣವೇ ವ್ಯಕ್ತಿಯ ಭವಿಷ್ಯವನ್ನು ರೂಪಿಸುವ ಪ್ರಮುಖ


ಉದಯವಾಹಿನಿ ಚಿತ್ರ

ಸಾಧನವಾಗಿದೆ. ವಿದ್ಯಾರ್ಥಿಗಳು ಪಠ್ಯಾಭ್ಯಾಸದ ಜೊತೆಗೆ ಉತ್ತಮ ಸಂಸ್ಕಾರ, ಶಿಸ್ತು, ಸಮಯ ಪಾಲನೆ ಹಾಗೂ ಸಾಮಾಜಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ಸರ್ಕಾರ ಶಿಕ್ಷಣ ಕ್ಷೇತ್ರಕ್ಕೆ ವಿಶೇಷ ಆದ್ಯತೆ ನೀಡುತ್ತಿದ್ದು, ಸರ್ಕಾರಿ ಶಾಲೆಗಳ ಬಲವರ್ಧನೆಗಾಗಿ ಹಲವು ಮಹತ್ವದ ಯೋಜನೆಗಳನ್ನು ಜಾರಿಗೊಳಿಸಿದೆ. ಪಾಲಕರು ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸಿ ಅವರ ಶಿಕ್ಷಣದ ಬಗ್ಗೆ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಹಕಾರ ನೀಡಬೇಕು. ಬೇವಿನಮಟ್ಟಿ ಶಾಲೆಗೆ ಶಾಸಕರ ಅನುದಾನದಲ್ಲಿ ಹೆಚ್ಚುವರಿಯಾಗಿ 2 ಕೊಠಡಿ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು. ಇದರಿಂದ ವಿದ್ಯಾರ್ಥಿಗಳಿಗೆ ಅನುಕೂಲಕರ ಕಲಿಕಾ ವಾತಾವರಣ ದೊರೆಯಲಿದೆ ಎಂದರು. ಈ ಸಂದರ್ಭದಲ್ಲಿ ಸ್ಮಾರ್ಟ್ ಕ್ಲಾಸ್‌ಗೆ ಚಾಲನೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಶಾಲೆಗಳು ಕೇವಲ ಪಠ್ಯ ಪುಸ್ತಕಗಳ ಜ್ಞಾನವಲ್ಲ, ಜೀವನದ ಮೌಲ್ಯಗಳನ್ನು ಕಲಿಸುತ್ತವೆ. ಶಾಲೆಯ ಪರಿಸರ ಸರಳತೆ, ಸಹನೆ ಶಿಸ್ತನ್ನು ಬೆಳೆಸುತ್ತದೆ.

# ಕೈಕೊಟ್ಟ ಮುಂಗಾರುಪೂರ್ವ ಮಳೆ- ಏಣೇಲು ಆರಂಭಕ್ಕೆ ವಿಘ್ನ..!

**ರೈತನ ಭತ್ತದ ಗದ್ದೆಗಳಲ್ಲಿ ಕಳೆ ಗಿಡಗಳು ಬೆಳೆದು ನಿಂತಿವೆ. ಗದ್ದೆಯನ್ನು ಹದ ಮಾಡುವ ಕೆಲಸಕ್ಕೂ ಮಳೆಯ ಕೊರತೆಯಿಂದ ಸಾಧ್ಯವಾಗಿಲ್ಲ**

ಉದಯವಾಹಿನಿ ಚಿತ್ರ


• ಉದಯವಾಹಿನಿ, ಪುತ್ತೂರು

ಕಳೆದ ಮೂರು ವರ್ಷಗಳಿಂದ ಭತ್ತ ಕೃಷಿ ಆರಂಭಕ್ಕೆ ಹೆಚ್ಚು ತೊಂದರೆ ನೀಡದ ವರುಣ ಈ ಬಾರಿ ಮಾತ್ರ ಮತ್ತೆ ಸಮಸ್ಯೆ ತಂದೊಡ್ಡಿದ್ದಾನೆ. ಮೇ ತಿಂಗಳಲ್ಲಿ ಸಾಕಷ್ಟು ಮಳೆ ಸುರಿಯುತ್ತಿದ್ದ ಕಾರಣದಿಂದ ಭತ್ತದ ಏಣೇಲು ಬೆಳೆಗೆ ಮುನ್ನುಡಿ ಬರೆಯಲು ಯಾವುದೇ ವಿಘ್ನ ಇರಲಿಲ್ಲ. ಆದರೆ ಈ ಸಲ ಮುಂಗಾರುಪೂರ್ವ ಮಳೆ ಕೈಕೊಟ್ಟ ಪರಿಣಾಮ ಏಣೇಲು ಬೆಳೆ ಆರಂಭಿಸಲು ರೈತವರ್ಗ ಪರದಾಡುವಂತಾಗಿದೆ.

ರೈತನ ಕೃಷಿ ಚಟುವಟಿಕೆ ಮೇ ತಿಂಗಳಲ್ಲಿ ಸುರಿಯಬೇಕಾಗಿದ್ದ ಮುಂಗಾರುಪೂರ್ವ ಮಳೆಗೆ ಕಾಯುತ್ತಿದ್ದ ರೈತವರ್ಗ ವರುಣನ ಕೃಪೆಯಿಂದ ಕಂಗಾಲಾಗಿದೆ. ಸಾಮಾನ್ಯವಾಗಿ ಮೇ ತಿಂಗಳ ಅಂತ್ಯದಲ್ಲಿ ಸಾಕಷ್ಟು ಮಳೆ ಸುರಿದು ಭತ್ತದ ಗದ್ದೆಗಳು ನೀರಿನಿಂದ ತುಂಬಿರಬೇಕಿತ್ತು. ಆದರೆ ಈಗ ಗದ್ದೆಯಲ್ಲಿ ಹನಿ ನೀರು ಇಲ್ಲದಂತಹ ಸ್ಥಿತಿ ನಿರ್ಮಾಣವಾಗಿದೆ. ಹಾಗಾಗಿ ಏಣೇಲು ಬೆಳೆಯ ಆರಂಭ ಮತ್ತಷ್ಟು ತಡವಾಗಲಿದೆ. ಜೂನ್ ತಿಂಗಳ ಆರಂಭದಲ್ಲಿ ದಿನಗಳಲ್ಲಿ ನಾಟಿ ಮಾಡಬೇಕಿದ್ದ ಭತ್ತದ ಬೆಳೆಗೆ ಇನ್ನೂ ನೇಜಿ ತಯಾರಿಗೇ ರೈತ ಇಳಿದಿಲ್ಲ. ಕಾರಣ ಮುಂಗಾರುಪೂರ್ವ ಮಳೆ ಇಲ್ಲ. ಮುಂಗಾರು ಮಳೆಯ ಆರಂಭದ ಸೂಚನೆಯೂ ಇಲ್ಲ. ರೈತನ ಭತ್ತದ ಗದ್ದೆಗಳಲ್ಲಿ ಕಳೆ ಗಿಡಗಳು ಬೆಳೆದು ನಿಂತಿವೆ. ಗದ್ದೆಯನ್ನು ಹದ ಮಾಡುವ ಕೆಲಸಕ್ಕೂ ಮಳೆಯ ಕೊರತೆಯಿಂದ ಸಾಧ್ಯವಾಗಿಲ್ಲ. ಮಳೆ ತಡವಾದಷ್ಟೂ ರೈತ ಬೆಳೆಯುವ ಬೆಳೆಯೂ ತಡವಾಗುತ್ತಿದೆ. ಇದರಿಂದ ಮುಂದೆ ಸುಗ್ಗಿ ಬೆಳೆಗೂ ಸಮಸ್ಯೆ ಉಂಟಾಗುತ್ತದೆ. ರೈತ ವರ್ಗ ಇಂದಿಗೂ ಮಳೆಯಾಧಾರಿತ ಬೆಳೆಯನ್ನು ನಂಬಿಕೊಂಡಿದ್ದು, ಅನಿಯಮಿತ ಮಳೆ ರೈತವರ್ಗಕ್ಕೆ ಸದಾ ಸಂಕಷ್ಟವನ್ನೇ ಉಂಟುಮಾಡುತ್ತಿದೆ.

ಮೇ ತಿಂಗಳಲ್ಲಿ ಮುಂಗಾರುಪೂರ್ವ ಮಳೆ ಸಾಕಷ್ಟು ಸುರಿಯುತ್ತಿದ್ದರೆ ಈಗಾಗಲೇ ರೈತವರ್ಗ ನೇಜಿ ತಯಾರಿಯನ್ನು ಆರಂಭಿಸಿ ಗದ್ದೆ ಹದ ಮಾಡುವ ಕೆಲಸಕ್ಕೂ ಮುಂದಾಗುತ್ತಿತ್ತು. ಜೂನ್ ತಿಂಗಳ ಮೊದಲ ಅಥವಾ 2ನೇ ವಾರದಲ್ಲಿ ನೇಜಿ ನಾಟಿಯನ್ನೂ ಮಾಡುತ್ತಿದ್ದರು. ಸಾಧಾರಣವಾಗಿ ಸೆಪ್ಟಂಬರ್-ಅಕ್ಟೋಬರ್ ತಿಂಗಳಿಗೆ ಬೆಳೆಯ ಕೊಲು ಆಗಿ ಮುಂದೆ ಸುಗ್ಗಿ ಬೆಳೆಯ ತಯಾರಿಯೂ ನಡೆಯುತ್ತಿತ್ತು. ಇದೀಗ ಜೂನ್ ತಿಂಗಳ ಆರಂಭವಾದರೂ ಮಳೆರಾಯ ತನ್ನ ಕೃಪೆ ತೋರಿಲ್ಲ. ವಾಯುಭಾರ ಕುಸಿತದ ಪರಿಣಾಮ ಒಂದಷ್ಟು ಮಳೆ ಬಂದಿದ್ದರೂ ಭತ್ತದ ಬೇಸಾಯಕ್ಕೆ ಯಾವುದೇ ಪ್ರಯೋಜನವಾಗುವಂತೆ ವಾತಾವರಣ ನಿರ್ಮಾಣವಾಗಿಲ್ಲ.

ವರ್ಷದಿಂದ ವರ್ಷಕ್ಕೆ ಭತ್ತದ ಕೃಷಿ ರೈತನ ಪಾಲಿಗೆ ಕಷ್ಟ ಸಾಧ್ಯವಾಗಿ ಪರಿಣಮಿಸುತ್ತಿದೆ. ಸಾಕಷ್ಟು ರೈತರು ಭತ್ತದ ಮಹತ್ವವನ್ನು ಮರೆತು ಭತ್ತದ ಬೆಳೆಯಿಂದ ದೂರವಾಗಿದ್ದಾರೆ. ಅಡಿಕೆ ತೆಂಗು ಬೆಳೆಗಳನ್ನು ಅಳವಡಿಸಿಕೊಂಡಿದ್ದಾರೆ. ಆದರೆ ಒಂದಷ್ಟು ರೈತರು ಏನೇ ಕಷ್ಟ ಬರಲಿ ನಮ್ಮ ಗದ್ದೆಗಳನ್ನು ಉಳಿಸಿಕೊಳ್ಳಲು ಹರಸಾಹಸ ಪಡುತ್ತಿದ್ದಾರೆ. ಈಗ ಭತ್ತದ ಬೆಳೆ ಲಾಭದಾಯಕವಲ್ಲ ಎಂಬ ಅರಿವಿದ್ದರೂ ತಮಗೆ ಬೇಕಾದಷ್ಟು ಅಕ್ಕಿಯನ್ನು ತಾವೇ ಬೆಳೆಸಿಕೊಳ್ಳಬೇಕು ಎಂಬ ಸಾಂಪ್ರದಾಯಿಕ ಮನಸ್ಸು ಇವರದ್ದಾಗಿದೆ. ಹಾಗಾಗಿ ಹಳೆಯ ಪದ್ದತಿಯನ್ನು ಬಿಟ್ಟು ಯಾಂತ್ರೀಕೃತ ವ್ಯವಸ್ಥೆಯಲ್ಲಿ ಭತ್ತದ ಬೆಳೆಗಳನ್ನು ಉಳಿಸಿಕೊಳ್ಳುವ ಕಾಯಕ ನಡೆಸುತ್ತಿದ್ದಾರೆ.


ಉದಯವಾಹಿನಿ ಚಿತ್ರ

**ಕೇರಳ ಮಾದರಿಯಲ್ಲಿ ರೈತರ ಸಹಾಯ**

ಭತ್ತದ ಕೃಷಿಗೆ ಅತ್ಯಂತ ಪೂರಕ ವ್ಯವಸ್ಥೆಯನ್ನು ಕೇರಳ ಸರ್ಕಾರ ಮಾಡುತ್ತಿದೆ. ಅದೇ ರೀತಿಯ ವ್ಯವಸ್ಥೆಗಳು ಕರ್ನಾಟಕದಲ್ಲಿ ಅನುಷ್ಠಾನಗೊಂಡರೆ ಮಾತ್ರ ಮುಂದೆ ಭತ್ತದ ಕೃಷಿಯನ್ನು ಉಳಿಸಿಕೊಳ್ಳಲು ಸಾಧ್ಯವಿದೆ. ಹಾಗಾಗಿ ರಾಜ್ಯ ಸರ್ಕಾರ ಕೃಷಿ ಇಲಾಖೆಯ ಮೂಲಕ ಕೇರಳ ಮಾದರಿಯಲ್ಲಿ ರೈತರ ಸಹಾಯಕ್ಕೆ ಮುಂದಾಗಬೇಕು

-ಧನಂಜಯ ಗೌಡ ಪಿ ಕೃಷಿಕ.

**ರೈತವರ್ಗಕ್ಕೆ ಸರ್ಕಾರದ ಈ ಕೊಡುಗೆ**

**ತಮ್ಮ ವ್ಯಾಪ್ತಿಯಲ್ಲಿಯೇ ಸಿಗುತ್ತಿದ್ದ ಕೃಷಿಯಂತ್ರಗಳನ್ನು ಈಗ ದೂರದಿಂದ ಖಾಸಗಿ ವ್ಯವಸ್ಥೆಯನ್ನು ಅವಲಂಭಿಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಭತ್ತಕೃಷಿಯನ್ನು ಉಳಿಸಿಕೊಳ್ಳಲು ಹೆಣಗಾಡುತ್ತಿರುವ ರೈತವರ್ಗಕ್ಕೆ ಸರ್ಕಾರದ ಈ ಕೊಡುಗೆಯೂ ಇಲ್ಲದಂತಾಗಿರುವುದು ಈಗ ಭತ್ತ ಉಳಿಸಿಕೊಂಡ ರೈತರೂ ಭವಿಷ್ಯದಲ್ಲಿ ಭತ್ತದ ಕೃಷಿಯಿಂದ ದೂರವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ.**

# ಬರೀದ್ ಶಾಹಿ ಉದ್ಯಾನದಲ್ಲಿ ಸಿಗರೇಟ್ ದಹಿಸಿ ವಿಶ್ವ ತಂಬಾಕು ನಿಷೇಧ ದಿನಾಚರಣೆ

• ಉದಯವಾಹಿನಿ, ಬೀದರ್

ವಿಶ್ವ ತಂಬಾಕು ನಿಷೇಧ ದಿನಾಚರಣೆಯ ಅಂಗವಾಗಿ ನಗರದ ಬರೀದ್ ಶಾಹಿ ಉದ್ಯಾನದಲ್ಲಿ ಯೋಗ ಸಾಧಕರು ಹಾಗೂ ಹಿರಿಯ ನಾಗರಿಕರು ಸಿಗರೇಟ್ ದಹಿಸುವ ಮೂಲಕ ತಂಬಾಕು ಉತ್ಪನ್ನಗಳ ವಿರುದ್ಧ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ರಾಜ್ಯ ಹಿರಿಯ ನಾಗರಿಕರ ಪ್ರಶಸ್ತಿ ಪುರಸ್ಕೃತ ವೀರಭದ್ರಪ್ಪ ಉಪ್ಪಿನ್ ಅವರು, ತಂಬಾಕು ಉತ್ಪನ್ನಗಳಾದ ಸಿಗರೇಟ್, ಬೀಡಿ, ಗುಟ್ಕಾ ಮುಂತಾದವುಗಳ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಸರ್ಕಾರಕ್ಕೆ ನಿಜವಾದ ಕಾಳಜಿ ಇದ್ದರೆ ಅವುಗಳ ಉತ್ಪಾದನೆಯನ್ನೇ ನಿಷೇಧಿಸಬೇಕು ಎಂದು ಆಗ್ರಹಿಸಿದರು.

ದೇಶದಲ್ಲಿ ಸುಮಾರು 50 ಕೋಟಿ ಜನರು ಸಿಗರೇಟ್ ಹಾಗೂ ಗುಟ್ಕಾ ಸೇವನೆಯ ದುಶ್ಚಟಕ್ಕೆ ಒಳಗಾಗಿದ್ದಾರೆ. ವಿವಿಧ ಜಾಗೃತಿ ಅಭಿಯಾನಗಳ ಪರಿಣಾಮ ಕೇವಲ ಶೇ.6 ರಷ್ಟು ಜನರು ಮಾತ್ರ ಈ ದುಶ್ಚಟಗಳಿಂದ ದೂರವಾಗಲು ಸಾಧ್ಯವಾಗಿದೆ. ಇದು ಸಾಕಾಗುವುದಿಲ್ಲ. ಸರ್ಕಾರ ಇಚ್ಛಾಶಕ್ತಿ ಪ್ರದರ್ಶಿಸಿ ತಂಬಾಕು


ಉದಯವಾಹಿನಿ ಚಿತ್ರ

ಉತ್ಪನ್ನಗಳ ಉತ್ಪಾದನೆ ಸ್ಥಗಿತಗೊಳಿಸಿದರೆ ಜನರು ದುಶ್ಚಟಗಳಿಂದ ಮುಕ್ತಿ ಪಡೆದು ಆರೋಗ್ಯವಂತರಾಗಬಹುದು ಎಂದು ಅವರು ಅಭಿಪ್ರಾಯಪಟ್ಟರು. ಯೋಗ ಮೇಲ್ವಿಚಾರಕ ಗಂಗಪ್ಪ ಸಾವಳೆ ಅವರು, ಕುಟುಂಬದ ಸದಸ್ಯರು ಹಾಗೂ ಸುತ್ತಮುತ್ತಲಿನ ಜನರಲ್ಲಿ ತಂಬಾಕು ಸೇವನೆಯ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವ ಪ್ರತಿಜ್ಞೆಯನ್ನು ಎಲ್ಲರಿಗೂ ಬೋಧಿಸಿದರು.

ಪ್ರಗತಿಪರ ರೈತ ಮಲ್ಲಿಕಾರ್ಜುನ ಪಾಟೀಲ ಕಾರ್ಯಕ್ರಮಕ್ಕೆ ಸ್ವಾಗತ ಕೋರಿದರು. ಹಿರಿಯರಾದ ಅಶೋಕ ಶೀಲವಂತ ವಂದಿಸಿದರು. ಕಾರ್ಯಕ್ರಮದಲ್ಲಿ ಸಾಂಕೇತಿಕವಾಗಿ ಸಿಗರೇಟ್ ದಹಿಸಿ ತಂಬಾಕು ವಿರೋಧಿ ಸಂದೇಶ ಸಾರಲಾಯಿತು.

# ತಾಲ್ಲೂಕು ಜಿಲ್ಲಾ ಪಂಚಾಯ್ತಿ ಚುನಾವಣೆಗೆ ಸನ್ನದ್ಧರಾಗಿ : ಮೀನಳ್ಳಿ ತಾಯಣ್ಣ

• ಉದಯವಾಹಿನಿ, ಬಳ್ಳಾರಿ

ಮುಂಬರುವ ತಾಲ್ಲೂಕು, ಜಿಲ್ಲಾ ಪಂಚಾಯಿತಿ ಚುನಾವಣೆಗೆ ಕಾರ್ಯಕರ್ತರು ಸನ್ನದ್ಧರಾಗಬೇಕು, ಪಕ್ಷವನ್ನು ಮತ್ತಷ್ಟು ತಳಮಟ್ಟದಿಂದ ಸಂಘಟಿಸಿ ಎಲ್ಲರೂ ಸೇರಿ ಜೆಡಿಎಸ್ ಪಕ್ಷವನ್ನು ಅಧಿಕಾರಕ್ಕೆ ತರೋಣ ಎಂದು ಪಕ್ಷದ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಕಾರ್ಯಕರ್ತರಿಗೆ ಕರೆ ನೀಡಿದರು.

ಅವರು ನಿನ್ನೆ ನಗರದ ಜೆಡಿಎಸ್ ಜಿಲ್ಲಾ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಬಳ್ಳಾರಿ ಗ್ರಾಮಾಂತರ ಹಾಗೂ ನಗರ ಅಧ್ಯಕ್ಷರ ಹಾಗೂ ಜಿಲ್ಲಾ ವಿದ್ಯಾರ್ಥಿ ಘಟಕದ ಅಧ್ಯಕ್ಷರ ನೇಮಕಾತಿ ಆದೇಶ ಪತ್ರ ವಿತರಣೆ ಸಮಾರಂಭದಲ್ಲಿ ಮಾತನಾಡಿದರು. ವಿಸಿಟಿಂಗ್ ಕಾರ್ಡ್ ಅಧ್ಯಕ್ಷರು ನಮಗೆ ಬೇಡ, ಪಕ್ಷದ ತತ್ವ ಸಿದ್ಧಾಂತಗಳನ್ನು ಪಾಲಿಸುವ, ಪಕ್ಷದ ಬಲವರ್ಧನೆಗೆ ಪ್ರಾಮಾಣಿಕವಾಗಿ ಶ್ರಮಿಸಲು ಮುಂದಾಗಬೇಕು, ಬರುವ ದಿನಗಳಲ್ಲಿ ಜೆಡಿಎಸ್ ಮತ್ತೆ ಅಧಿಕಾರಕ್ಕೆ ಬರುವುದು ಶತ ಸಿದ್ಧ, ಮತ್ತೆ ನಮ್ಮ ಕುಮಾರಣ್ಣನವರೇ ರಾಜ್ಯದ ಮುಖ್ಯಮಂತ್ರಿಯಾಗಲಿದ್ದಾರೆ ಇದರಲ್ಲಿ ಅನುಮಾನವೇ

ಉದಯವಾಹಿನಿ ಚಿತ್ರ



ಬೇಡ, ಕಾರ್ಯಕರ್ತರು, ಪದಾಧಿಕಾರಿಗಳು ಪಕ್ಷದ ಸಂಘಟನೆಗೆ ಸನ್ನದ್ಧರಾಗಬೇಕು, ನಮ್ಮ ಪಕ್ಷ ಅಧಿಕಾರಕ್ಕೆ ಬರುವವರೆಗೂ ಎಲ್ಲರೂ ಶ್ರಮಿಸೋಣ ಎಂದರು.

ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಅಧ್ಯಕ್ಷರಾಗಿ ರಾಜಶೇಖರ್ ಗೌಡ, ಬಳ್ಳಾರಿ ಜಿಲ್ಲಾ ವಿದ್ಯಾರ್ಥಿ ಘಟಕದ ಜಿಲ್ಲಾಧ್ಯಕ್ಷರಾಗಿ ಆರ್.ರಾಕೇಶ್ ಅವರನ್ನು ನೇಮಕ ಮಾಡಲಾಗಿದೆ.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಯಲ್ಲನಗೌಡ, ಉಪಾಧ್ಯಕ್ಷ ವಿಜಯಕುಮಾರ್ ಮದಿರೆ, ಚಾಗನೂರು ನಾಗರಾಜ್, ಬಸಪ್ಪ, ಅಶೋಕ ಸಂಗನಕಲ್ಲು, ವೀರೇಶ್, ಹೊನ್ನೂರು ಅಲಿ, ಜಮೀಲಾ, ಶಬಾನಾ, ರಹೆಮತ್, ಜಯಲಕ್ಷ್ಮೀ, ಶಮೀಮ್ ಬಾನು, ಲಕ್ಷ್ಮೀ ಸೇರಿದಂತೆ ವಿವಿಧ ಕಾರ್ಯಕರ್ತರು ಭಾಗವಹಿಸಿದ್ದರು.

## ರಜೆ ಬಳಿಕ ಶಾಲೆಗಳ ಪುನಾರಂಭ

• ಉದಯವಾಹಿನಿ, ಬಳ್ಳಾರಿ

ಬೇಸಿಗೆ ರಜೆಯ ಬಳಿಕ ಜಿಲ್ಲಾದ್ಯಂತ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳು ಸೋಮವಾರ ಪುನರಾರಂಭಗೊಂಡಿವೆ. ಹೊಸ ಶೈಕ್ಷಣಿಕ ವರ್ಷದ ಮೊದಲ ದಿನ ವಿದ್ಯಾರ್ಥಿಗಳನ್ನು ಆತ್ಮೀಯವಾಗಿ ಸ್ವಾಗತಿಸಲು ಶಾಲೆಗಳು ವಿಶೇಷ ಸಿದ್ಧತೆ ಮಾಡಿಕೊಂಡಿದ್ದು, ಶಾಲಾ ಆವರಣಗಳಲ್ಲಿ ಹಬ್ಬದ ವಾತಾವರಣ ಕಂಡುಬಂತು.

**ಶಾಲೆಗಳು ಪುನಾರಂಭ:** ಶನಿವಾರ ಮತ್ತು ಭಾನುವಾರವೇ ಶಿಕ್ಷಕರು ಶಾಲಾ ಕೊಠಡಿಗಳು, ಶೌಚಾಲಯಗಳು, ಅಡುಗೆ ಮನೆ ಹಾಗೂ ಶಾಲಾ ಆವರಣವನ್ನು ಸ್ವಚ್ಛಗೊಳಿಸಿ ಮಕ್ಕಳ ಆಗಮನಕ್ಕೆ ಸಜ್ಜುಗೊಳಿಸಿದ್ದರು. ಸರ್ಕಾರದ ಆದೇಶದಂತೆ 1ನೇ ತರಗತಿಯಿಂದ ಎಸ್‌ಎಸ್‌ಎಲ್‌ಸಿವರೆಗೆ ತರಗತಿಗಳು ಆರಂಭಗೊಂಡಿದ್ದು, ವಿದ್ಯಾರ್ಥಿಗಳು ಹಾಗೂ ಪೋಷಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಯಿತು. ಬಳ್ಳಾರಿಯಲ್ಲಿ ವಿದ್ಯಾರ್ಥಿಗಳಿಗೆ ಹೂ ನೀಡಿ ಸ್ವಾಗತ ತಳಿರು ತೋರಣಗಳಿಂದ ಅಲಂಕೃತವಾದ ಶಾಲೆಗಳು ಶಾಲಾ ಕಟ್ಟಡಗಳನ್ನು ತಳಿರು ತೋರಣ, ಬಣ್ಣಬಣ್ಣದ ರಂಗೋಲಿ ಹಾಗೂ ಸ್ವಾಗತ ಫಲಕಗಳಿಂದ ಅಲಂಕರಿಸಲಾಗಿತ್ತು. ಮಕ್ಕಳ ಮುಖದಲ್ಲೂ ಹೊಸ ತರಗತಿಗೆ ಕಾಲಿಡುವ ಸಂಭ್ರಮ ಸ್ಪಷ್ಟವಾಗಿ ಗೋಚರಿಸಿತು. ಬಹುತೇಕ ಶಾಲೆಗಳಲ್ಲಿ ಶಿಕ್ಷಕರು ಪ್ರವೇಶ ದ್ವಾರದಲ್ಲೇ ವಿದ್ಯಾರ್ಥಿಗಳಿಗೆ ಹೂವು ನೀಡಿ ಬರಮಾಡಿಕೊಂಡರು.

**ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ ವಿತರಣೆ:** ಬೇಸಿಗೆ ರಜೆಯ ನಂತರ ಸ್ನೇಹಿತರನ್ನು ಭೇಟಿಯಾಗುವ ಸಂತಸ, ಹೊಸ ಪುಸ್ತಕಗಳು ಮತ್ತು ಹೊಸ ತರಗತಿಯ ಉತ್ಸಾಹದಿಂದ ವಿದ್ಯಾರ್ಥಿಗಳು ಶಾಲೆಗೆ ಆಗಮಿಸಿದರು. ಕೆಲವು ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕಗಳು ಹಾಗೂ ಸಮವಸ್ತ್ರಗಳನ್ನು ವಿತರಿಸುವ ಮೂಲಕ ವಿಶೇಷವಾಗಿ ಸ್ವಾಗತಿಸಲಾಯಿತು.

# ನೂತನ ಸಿಎಂ ಡಿಕೆಶಿ ಗೆ ಶುಭ ಕೋರಿ-ಹಂಪಿಯಲ್ಲಿ ವಿಶೇಷ ಪೂಜೆ

• ಉದಯವಾಹಿನಿ,ಹೊಸಪೇಟೆ

ರಾಜ್ಯದ ನೂತನ ಮುಖ್ಯಮಂತ್ರಿ ಆಗಿ ಜೂ.3 ರಂದು ಡಿ.ಕೆ. ಶಿವಕುಮಾರ್ ಪ್ರಮಾಣವಚನ ಸ್ವೀಕರಿಸುತ್ತಿರುವ ಹಿನ್ನಲೆಯಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಹಂಪಿಯಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಶುಭವಾಗಲಿ ಎಂದು ಪ್ರಾರ್ಥಿಸಿ, ಹಂಪಿಯ ಶ್ರೀವಿರೂಪಾಕ್ಷೇಶ್ವರ ದೇವಸ್ಥಾನದಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು, ಶ್ರೀವಿರೂಪಾಕ್ಷೇಶ್ವರ ಸ್ವಾಮಿಗೆ ಅಭಿಷೇಕ ಸೇರಿದಂತೆ ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಯುವ ಕಾಂಗ್ರೆಸ್ ಮುಖಂಡ


ಉದಯವಾಹಿನಿ ಚಿತ್ರ

ಭರತ್ ಕುಮಾರ್ ಸಿ.ಆರ್, ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕಳೆದ 3 ವರ್ಷಗಳಲ್ಲಿ 5 ಗ್ಯಾರಂಟಿ ಯೋಜನೆಗಳನ್ನು ಜನರಿಗೆ ನೀಡುವ ಮೂಲಕ ಅನೇಕ ಅಭಿವೃದ್ಧಿ ಕಆರ್ಯಗಳನ್ನು ಮಾಡಿದೆ. ಅದೇ ನಿಟ್ಟಿನಲ್ಲಿ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ಮುಂದಿನ 2 ವರ್ಷಗಳ ಕಾಲ ಜನಪರ ಕಾರ್ಯಕ್ರಮಗಳನ್ನು ಜನತೆಗೆ ನೀಡಲಿ. ಡಿಕೆಶಿ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ರಾಜ್ಯದ ಜನತೆಗೆ ನೂತನ ಸರ್ಕಾರದಿಂದ ಒಳ್ಳೆಯದಾಗಲಿ ಎಂದು ಪ್ರಾರ್ಥಿಸಿ, ಶ್ರೀವಿರೂಪಾಕ್ಷೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿರುವುದಾಗಿ ತಿಳಿಸಿದರು. ಮುಖಂಡ ದಾದಾ ಖಲಂದರ್ ಮಾತಾನಾಡಿ, ನೂತನ ಸಿಎಂ ಡಿಕೆಶಿ ಆಧಿಕಾರವಧಿಯಲ್ಲಿ ರಾಜ್ಯದಲ್ಲಿ ಉತ್ತಮವಾದ ಮಳೆ, ಬೆಳೆ ಆಗಲಿ, ರಾಜ್ಯದ ಜನತೆ ಸಮೃದ್ಧಿಯಿಂದ ಇರಲಿ. 2028 ರಲ್ಲಿ ಕೂಡ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವಂತಾಗಲಿ ಎಂದರು.

# ಬೆಳಗಾವಿಯಲ್ಲಿ ಅದ್ದೂರಿ ಶಾಲಾ ಪ್ರಾರಂಭೋತ್ಸವ

• ಉದಯವಾಹಿನಿ, ಬೆಳಗಾವಿ

ಬೇಸಿಗೆ ರಜೆಯ ಮಜಾ ಮುಗಿಸಿದ ವಿದ್ಯಾರ್ಥಿಗಳು ಇಂದು ಸಂಭ್ರಮದಿಂದ ಶಾಲೆಗೆ ಮರಳಿದರು. ಜೂನ್ 1ರ ಸಂಪ್ರದಾಯದಂತೆ ಜಿಲ್ಲೆಯಾದ್ಯಂತ 'ಶಾಲಾ ಪ್ರಾರಂಭೋತ್ಸವ' ಅದ್ದೂರಿಯಾಗಿ ಜರುಗಿತು. ಮೊದ ದಿನ ಶಾಲೆಗಳಲ್ಲಿ ಹಬ್ಬದ ವಾತಾವರಣವೇ ನಿರ್ಮಾಣ ಆಗಿತ್ತು. ಕೈಯಲ್ಲಿ ಹೂವನ್ನು ಹಿಡಿದು ಸಾಲುಗಟ್ಟಿ ನಿಂತಿರುವ ಶಿಕ್ಷಕರು, ಮಕ್ಕಳು ಶಾಲೆಯ ಗೇಟ್ ಪ್ರವೇಶಿಸುತ್ತಿದ್ದಂತೆ ಹೂವಿನ ಮಳೆ, ತಳಿರು ತೋರಣಗಳಿಂದ ಶೃಂಗಾರಗೊಂಡ ಶಾಲೆಗಳು, ಮೊದಲ ದಿನವೇ ಮಕ್ಕಳಿಗೆ ಪುಸ್ತಕಗಳು-ಬುಕ್ ವಿತರಣೆ. ಈ ಎಲ್ಲಾ ದೃಶ್ಯಗಳು ಕಂಡು ಬಂದಿದ್ದು ಬೆಳಗಾವಿ ಜಿಲ್ಲೆಯ ವಿವಿಧ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಪ್ರಾರಂಭೋತ್ಸವದಲ್ಲಿ. ಎರಡು ತಿಂಗಳು ರಜೆ ಮುಗಿದ ನಂತರ ಮಕ್ಕಳನ್ನು ಸ್ವಾಗತಿಸಲು ಅಕ್ಷರಶಃ ಶಿಕ್ಷಕರು ಮನೆಯಲ್ಲಿ ಹಬ್ಬ ಇರುವ ರೀತಿಯಲ್ಲಿ ಹೊಸ ಬಟ್ಟೆ ತೊಟ್ಟು ಕಾತುರರಾಗಿದ್ದರು. ಕೊಠಡಿಗಳು, ಶಾಲೆಯ ಆವರಣ ಸಂಪೂರ್ಣ ಸ್ವಚ್ಛಗೊಳಿಸಲಾಗಿತ್ತು. ಮಕ್ಕಳು ಪ್ರವೇಶ ದ್ವಾರಕ್ಕೆ ಬರುತ್ತಿದ್ದಂತೆ ಶಿಕ್ಷಕರು ಪುಷ್ಪವೃಷ್ಟಿಗೈದು, ಗುಲಾಬಿ ಹೂವು ನೀಡಿ, ಪೆನ್ನು-ಪುಸ್ತಕ ಕೊಟ್ಟು ಬರಮಾಡಿಕೊಂಡಿರು. ಬಳಿಕ ಪ್ರಸಕ್ತ ವರ್ಷದ ಪಠ್ಯಪುಸ್ತಕಗಳು, ಸಮವಸ್ತ್ರ, ಶೂಗಳನ್ನು ಇದೇ ವೇಳೆ ವಿತರಿಸಲಾಯಿತು.

ಈ ಕುರಿತು ಈಟಿವಿ ಭಾರತ ಜೊತೆಗೆ ಮಾತನಾಡಿದ ಎಸ್ಎಸ್ಎಲ್ ಸಿ ವಿದ್ಯಾರ್ಥಿ ಯಶವಂತ ಯದ್ದಲಗುಡ್ಡ, ಇಷ್ಟು ಚೆಂದ ಸ್ವಾಗತಿಸುತ್ತಾರೆ ಅಂತಾ ನಾನು ಅಂದುಕೊಂಡಿರಲಿಲ್ಲ. ನಮಗೆಲ್ಲಾ ಗ್ರ್ಯಾಂಡ್ ಎಂಟ್ರಿ ಮಾಡಿಸಿದರು. ರಜೆ ಸಮಯದಲ್ಲಿ ಸ್ವಲ್ಪ ಮಜಾ ಮಾಡಿ, ಹೆಚ್ಚಿನ ಸಮಯ ಅಭ್ಯಾಸ ಮಾಡಿದ್ದೇನೆ. ಕಠಿಣ ಆದ ವಿಷಯಗಳ ಬಗ್ಗೆ ನಮ್ಮ ಗುರುಗಳಿಗೆ ಫೋನ್ ಮಾಡಿ ತಿಳಿದುಕೊಂಡೆ. ಈಗ ಶಾಲೆ ಶುರು ಆಗಿದೆ.

# ಮಿನಿ ನ್ಯೂಸ್

## ಹಿಂದೂಪರ ಸಂಘಟನೆಗಳಿಂದ ಹುಬ್ಬಳ್ಳಿಯ ಅನೇಕ ಕಡೆ ಕೇಸರಿ ಶಾಲು ವಿತರಣೆ

• ಉದಯವಾಹಿನಿ, ಹುಬ್ಬಳ್ಳಿ

ಶಾಲಾ-ಕಾಲೇಜುಗಳಲ್ಲಿ ಹಿಜಾಬ್ ಧರಿಸಲು ಕಾಂಗ್ರೆಸ್ ಸರ್ಕಾರ ಅವಕಾಶ ಕಲ್ಪಿಸಿರುವುದನ್ನು ವಿರೋಧಿಸಿ ಹಿಂದೂಪರ ಸಂಘಟನೆಗಳು ಮತ್ತೊಮ್ಮೆ ಪ್ರತಿಭಟನೆಯ ಹಾದಿ ಹಿಡಿದಿವೆ.

ಇಂದಿನಿಂದ ಹೊಸ ಶೈಕ್ಷಣಿಕ ವರ್ಷದ ಶಾಲಾ-ಕಾಲೇಜುಗಳು ಆರಂಭವಾಗಿದ್ದು, ಸರ್ಕಾರದ ಆದೇಶಕ್ಕೆ ಕೌಂಟರ್ ನೀಡಲು ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಹುಬ್ಬಳ್ಳಿ ನಗರದ ಪ್ರಮುಖ ಕಾಲೇಜುಗಳ ಮುಂಭಾಗದಲ್ಲಿ ವಿದ್ಯಾರ್ಥಿಗಳಿಗೆ ಕೇಸರಿ ಶಾಲು ವಿತರಿಸಿದ್ದಾರೆ. ಈ ಮೂಲಕ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಕ್ಷಣವೇ ಹಿಜಾಬ್ ಆದೇಶವನ್ನು ಹಿಂಪಡೆಯದಿದ್ದರೆ ರಾಜ್ಯಾದ್ಯಂತ ಈ ಅಭಿಯಾನವನ್ನು ವಿಸ್ತರಿಸುವುದಾಗಿ ಕಾರ್ಯಕರ್ತರು ಎಚ್ಚರಿಕೆ ನೀಡಿದ್ದಾರೆ.

ಹಿಂದಿನ ಬಿಜೆಪಿ ಸರ್ಕಾರ ಶಾಲಾ-ಕಾಲೇಜುಗಳಲ್ಲಿ ಕಡ್ಡಾಯಗೊಳಿಸಿದ್ದ ಸಮವಸ್ತ್ರ ನಿಯಮ ಹಾಗೂ ಹಿಜಾಬ್ ನಿಷೇಧದ ಆದೇಶವನ್ನು ಪ್ರಸಕ್ತ ಸರ್ಕಾರ ಹಿಂಪಡೆದಿರುವುದು ಹಿಂದೂಪರ ಸಂಘಟನೆಗಳ ಕೆಂಗಣ್ಣಿಗೆ ಗುರಿಯಾಗಿದೆ. ಬೆಳಿಗ್ಗೆ ಹುಬ್ಬಳ್ಳಿಯ ಕನಕದಾಸ ಕಾಲೇಜು ಮುಂಭಾಗ ಜಮಾಯಿಸಿದ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು, ಕಾಲೇಜಿಗೆ ಆಗಮಿಸುತ್ತಿದ್ದ ಹಿಂದೂ ವಿದ್ಯಾರ್ಥಿಗಳಿಗೆ ಕೇಸರಿ ಶಾಲು ಹಾಕಿ ಸ್ವಾಗತಿಸಿದರು. ಕೆಲವು ವಿದ್ಯಾರ್ಥಿಗಳು ಸ್ವಇಚ್ಛೆಯಿಂದಲೇ ಕೇಸರಿ ಶಾಲು ಧರಿಸಿ ಕಾಲೇಜಿನೊಳಗೆ ಪ್ರವೇಶಿಸಿದರೆ, ಕೆಲವು ವಿದ್ಯಾರ್ಥಿಗಳು ಶಾಲು ಧರಿಸಲು ನಿರಾಕರಿಸಿದರು. ಪೊಲೀಸರ ಕಟ್ಟುನಿಟ್ಟಿನ ಸೂಚನೆ ಇದ್ದಿದ್ದರಿಂದ ಕಾರ್ಯಕರ್ತರು ಯಾರಿಗೂ ಒತ್ತಾಯಪೂರ್ವಕವಾಗಿ ಶಾಲು ಧರಿಸದೆ ಸಂಯಮ ಕಾಯ್ದುಕೊಂಡರು.

## ಎಮ್ಮೆ ಕರೆತರಲು ಹೋಗಿದ್ದ ತಂದೆ ನೀರಿನಲ್ಲಿ ಮುಳುಗಿ ಸಾವು,

• ಉದಯವಾಹಿನಿ, ಕಲಬುರಗಿ

ಎಮ್ಮೆಯನ್ನು ವಾಪಸ್ ಕರೆತರುವ ಸಲುವಾಗಿ ಭೀಮಾ ನದಿಗೆ ಇಳಿದಿದ್ದ ತಂದೆ ಮಗನ ಕಣ್ಣೆದುರೇ ನದಿಯಲ್ಲಿ ಮುಳುಗಿ ಸಾವನ್ನಪ್ಪಿರುವ ಮನಕಲಕುವ ಘಟನೆ ಕಲಬುರಗಿಯ ಜೇವರ್ಗಿ ತಾಲ್ಲೂಕಿನ ಕಟ್ಟಿ ಸಂಗಾವಿ ಗ್ರಾಮದಲ್ಲಿ ನಡೆದಿದೆ.

ಈಜು ಬಾರದಿದ್ದರೂ ವಿಜಯ್ ರಾಜು ಎಂಬುವವರು ನದಿಗೆ ಇಳಿದಿದ್ದರು. ನದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ನೀರು ಸೊಂಟದ ಮೇಲಕ್ಕೆ ಬಂದಿದೆ. ಈ ವೇಳೆ ಈಜಲು ಪ್ರಯತ್ನಿಸಿದ್ದಾರೆ. ಆದರೆ ನೀರಿನ ಸೆಳೆತಕ್ಕೆ ಸಿಲುಕಿ ಮುಳುಗಲು ಪ್ರಾರಂಭಿಸಿದರು. ಈ ವೇಳೆ ಕಾಪಾಡಿ, ಕಾಪಾಡಿ ಎಂದು ಕೂಗಿದ್ದರೂ ಆದರೆ ದಡದ ಮೇಲೆ ಇದ್ದ ಮಗನಿಗೆ ಏನು ಮಾಡಬೇಕೆಂದು ತೋಚದೆ ಅಸಹಾಯಕನಾಗಿ ನಿಂತಿದ್ದನು. ಇನ್ನು ತಂದೆ ನೀರಿನಲ್ಲಿ ಮುಳುಗುತ್ತಿರುವ ದೃಶ್ಯ ಮಗನ ಮೊಬೈಲ್ ನಲ್ಲಿ ಸೆರೆಯಾಗಿದೆ.

## ಸೌಮ್ಯ ಸ್ವಭಾವ-ಉತ್ತಮ ಆಡಳಿತದ ಮೂಲಕ ಕಿರಿಯರಿಗೆ ಮಾರ್ಗದರ್ಶಕರಾಗಿದ್ದ ಚವ್ಹಾಣ

• ಉದಯವಾಹಿನಿ, ವಿಜಯಪುರ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಸುಮಾರು 32 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತರಾದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಕೆ. ಕೆ. ಚವ್ಹಾಣ ಅವರಿಗೆ ಇಲ್ಲಿನ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಹಮ್ಮೊಕೊಂಡಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ವಿವಿಧ ಇಲಾಖೆ ಅಧಿಕಾರಿ,ಸಿಬ್ಬಂದಿ ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಆತ್ಮೀಯವಾಗಿ ಸನ್ಮಾನಿಸಿ, ಶುಭ ಹಾರೈಸಿದರು.

ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು, ಸೇವಾ ನಿವೃತ್ತಿ ಹೊಂದುತ್ತಿರುವ ಕೆ. ಕೆ. ಚವ್ಹಾಣ ಅವರು ಸಂಘಟಿತ ಆಡಳಿತ ಮತ್ತು ಎಲ್ಲರನ್ನೂ ಒಳಗೊಳ್ಳುವ ಅದ್ಭುತ ಸ್ವಭಾವವನ್ನು ಹೊಂದಿದ್ದರು.

ಎಂತಹ ಕೆಲಸದ ಒತ್ತಡದ ಕ್ಲಿಷ್ಟಕರ ಹಾಗೂ ಕಷ್ಟದ ಪರಿಸ್ಥಿತಿಯಲ್ಲೂ ತಮ್ಮ ಅಧೀನ ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿ, ಕಾರ್ಯ ನಿರ್ವಹಣೆಯನ್ನು ಸುಗಮಗೊಳಿಸುತ್ತಿದ್ದರು.

## ಬಿ.ಜೆ.ಪಿ. ಜಿಲ್ಲಾ ಕಾರ್ಯಾಲಯದಲ್ಲಿ ಅಹಿಲ್ಯಬಾಯಿ ಹೊಳ್ಕರ್ ಜಯಂತಿ ಆಚರಣೆ

• ಉದಯವಾಹಿನಿ, ಬೀದರ

ಅಹಿಲ್ಯಬಾಯಿ ಹೊಳ್ಕರ್ ಜಯಂತಿ ಆಚರಣೆ ಜಯಂತ್ಯೋತ್ಸವನ್ನು ಭಾರತೀಯ ಜನತಾ ಪಕ್ಷದ ಜಿಲ್ಲಾ ಕಾರ್ಯಾಲಯ ಬೀದರನಲ್ಲಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಅಹಿಲ್ಯಬಾಯಿ ಹೊಳ್ಕರ್‌ವರ ಭಾವಚಿತ್ರಕ್ಕೆ ಪುಷ್ಪ ಅರ್ಪಿಸಲಾಯಿತು. ಬಿ.ಜೆ.ಪಿ. ಜಿಲ್ಲಾಧ್ಯಕ್ಷರಾದ ಶ್ರೀ ಸೋಮನಾಥ ಪಾಟೀಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ನಗರ ಘಟಕದ ಅಧ್ಯಕ್ಷ ಶಶಿಧರ ಹೊಸಳ್ಳಿ,ಬಾಬುರಾವ ಕಾರುಬಾರಿ, ವೀರು ದಿಗ್ವಾಲ್, ಗೋಪಾಲ ಕಕಡಾಲ್ ಶ್ರೀಮತಿ ಶಂಕುತಲಾ ಬೆಲ್ದಾಳೆ, ಉಲ್ಲಾಸಿನಿ ಮುದಾಳೆ , ಜಿಲ್ಲಾ ಮಾಧ್ಯಮ ಘಟಕದ ಸಂಚಾಲಕರಾದ ಶ್ರೀನಿವಾಸ ಚೌದರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸಚಿವ ಸ್ಥಾನದ ಮೇಲೆ ಧಾರವಾಡ ಜಿಲ್ಲೆಯ ನಾಲ್ವರ ಕಣ್ಣು; ಯಾರಾಗಲಿದ್ದಾರೆ ನೂತನ ಸಚಿವರು?

• ಉದಯವಾಹಿನಿ, ಹುಬ್ಬಳ್ಳಿ

ರಾಜ್ಯದಲ್ಲಿ ನಾಯಕತ್ವ ಬದಲಾವಣೆಯಾಗಿದೆ. ಮುಖ್ಯಮಂತ್ರಿಯಾಗಿ ಡಿ. ಕೆ. ಶಿವಕುಮಾರ್ ಅವರು ನಿಯೋಜನೆಗೊಂಡಿದ್ದು, ಧಾರವಾಡ ಜಿಲ್ಲೆಯಿಂದ ಮಂತ್ರಿಗಿರಿ ಯಾರಿಗೆ ಸಿಗುತ್ತದೆ ಎಂಬ ಚರ್ಚೆ ಜೋರಾಗಿದೆ.

ತಮ್ಮ ನಾಯಕರಿಗೆ ಈ ಸಲ ಸಚಿವಗಿರಿ ಕೊಡಲೇಬೇಕೆಂಬ ಒತ್ತಡವೂ ಕಾರ್ಯಕರ್ತರ ಬಳಗದಿಂದ ಕೇಳಿ ಬರುತ್ತಿದೆ. ಈ ನೂತನ ಮುಖ್ಯಮಂತ್ರಿ ಆಡಳಿತದಲ್ಲಿ ಸಚಿವ ಸ್ಥಾನಕ್ಕೆ ಆಕಾಂಕ್ಷಿಗಳ ಪೈಪೋಟಿ ಜೋರಾಗಿದೆ. ಅದರಲ್ಲೂ ಹೊಸಬರಿಗೆ ಸಚಿವ ಸ್ಥಾನ ಹೆಚ್ಚಿನ ಪ್ರಮಾಣದಲ್ಲಿ ಕೊಡಬೇಕು ಎಂಬ ಬೇಡಿಕೆಯ ಕೂಗು ಹೈಕಮಾಂಡ್ ವರೆಗೂ ತಲುಪಿದ್ದು, ಹೊಸಬರಲ್ಲಿ ಆಶಾಭಾವನೆ ಮೂಡಿದೆ.

**ರೇಸ್‌ನಲ್ಲಿ ಯಾರ್ಯಾರು ಇದ್ದಾರೆ :** ಜಿಲ್ಲೆಯಲ್ಲಿ ಏಳು ಶಾಸಕ ಸ್ಥಾನಗಳಿವೆ. ಅದರಲ್ಲಿ ಒಬ್ಬರು (ವಿನಯ ಕುಲಕರ್ಣಿ) ಸದ್ಯ ಕೊಲೆ ಆರೋಪದಲ್ಲಿ ಜೈಲು ಸೇರಿರುವುದರಿಂದ ಅನರ್ಹರಾಗಿದ್ದಾರೆ. ಇನ್ನುಳಿದಂತೆ ಈಗಾಗಲೇ ಸಚಿವರಾಗಿರುವ ಸಂತೋಷ ಲಾಡ್, ಮೂರು ಬಾರಿ ಶಾಸಕರಾಗಿ ಸದ್ಯ ಸ್ಲಂ ಬೋರ್ಡ್ ಅಧ್ಯಕ್ಷರಾಗಿರುವ ಪ್ರಸಾದ ಅಬ್ಬಯ್ಯ, ಮಹದಾಯಿ ಹೋರಾಟದಿಂದ ಬಂದಿರುವ ಎನ್. ಹೆಚ್. ಕೋನರೆಡ್ಡಿ ಶಾಸಕರಾಗಿದ್ದಾರೆ.

ಈ ಮೂವರಲ್ಲಿ ಯಾರಿಗೆ ಸಚಿವ ಸ್ಥಾನ ಸಿಗುತ್ತದೆ ಎಂಬ ಚರ್ಚೆ ನಡೆಯುತ್ತಿದೆ. ಈ ಭಾಗದ ಸ್ಥಳೀಯ ಸಂಸ್ಥೆಗಳಿಂದ ಆಯ್ಕೆಯಾಗಿರುವ ಪಕ್ಷದ ನಾನಾ ಹುದ್ದೆಗಳನ್ನು ಸಮರ್ಥವಾಗಿ ನಿಭಾಯಿಸಿರುವ ಸಲೀಂ ಅಹ್ಮದ್ ಹೆಸರು ಮುಂಚೂಣಿಯಲ್ಲಿದೆ. ಇವರಲ್ಲಿ ಯಾರಿಗೆ ಸಚಿವ ಸ್ಥಾನ ಸಿಗುತ್ತದೆ ಎಂಬ ಚರ್ಚೆ ನಡೆಯುತ್ತಿದೆ. ಸಂತೋಷ್ ಲಾಡ್ 2 ಬಾರಿ ಸಚಿವರಾಗಿ ಅನುಭವ ಹೊಂದಿದ್ದು, ಇವರನ್ನು ಮುಂದುವರಿಸುತ್ತಾರೆ ಎಂಬ


ಉದಯವಾಹಿನಿ ಚಿತ್ರ

ಮಾತು ಕೇಳಿ ಬರುತ್ತಿದೆ. ಹ್ಯಾಟ್ರಿಕ್ ಗೆಲುವು ಸಾಧಿಸಿರುವ ಪ್ರಸಾದ ಅಬ್ಬಯ್ಯ ಹಿಂದೆ ಲಿಡ್ಕರ್ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದವರು. ಇವರಿಗೆ ಈ ಸಲ ಸಚಿವಗಿರಿ ಕೊಡಲೇಬೇಕು ಎಂಬ ಒತ್ತಾಯ ಅವರ ಬೆಂಬಲಿಗರದ್ದು. ಇನ್ನು ಜೆಡಿಎಸ್‌ನಿಂದ ಬಂದಿರುವ ಕೋನರಡ್ಡಿ, ರೈತ, ಮಹದಾಯಿ ಹೋರಾಟದಲ್ಲಿ ತೊಡಗಿಸಿಕೊಂಡಿದ್ದು, ಇವರಿಗೆ ಸಚಿವ ಸ್ಥಾನ ಸಿಗುತ್ತದೆ ಎಂಬ ನಿರೀಕ್ಷೆಯಲ್ಲಿ ಅವರ ಅಭಿಮಾನಿಗಳಿದ್ದಾರೆ.

ಸಲೀಂ ಹೆಸರು ಮುಂಚೂಣಿಗೆ : ಇವುಗಳ ನಡುವೆ ಅತಿ ಹೆಚ್ಚು ಮುಂಚೂಣಿಯಲ್ಲಿರುವ ಹೆಸರೆಂದರೆ ಸಲೀಂ ಅಹ್ಮದ್. ವಿಧಾನ ಪರಿಷತ್ ಸದಸ್ಯ, ಸರ್ಕಾರಿ ಮುಖ್ಯ ಸಚೇತಕರಾಗಿರುವ ಸಲೀಂ, ಪಕ್ಷದ ಅತ್ಯಂತ ಕಟ್ಟಾ ನಿಷ್ಠಾವಂತರೆಂದು ಗುರುತಿಸಿಕೊಂಡವರು. ವಿಧಾನ ಪರಿಷತ್‌ಗೆ ಸ್ಥಳೀಯ ಸಂಸ್ಥೆಗಳಿಂದ ಆಯ್ಕೆಯಾದವರು. ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಪಕ್ಷ ಸಂಘಟಿಸಿದವರು. ಹಾನಗಲ್, ಶಿಗ್ಗಾಂವಿ ಉಪಚುನಾವಣೆಗಳಲ್ಲೂ ಪಕ್ಷ ಗೆಲ್ಲುವಲ್ಲಿ ಇವರ ಶ್ರಮ ಸಾಕಷ್ಟಿದೆ. ದಾವಣಗೆರೆಯಲ್ಲಿ ಇತ್ತೀಚಿಗೆ ನಡೆದ ಉಪ ಚುನಾವಣೆಯಲ್ಲಿಯೂ ಅಲ್ಪಸಂಖ್ಯಾತರೆಲ್ಲರೂ ಕಾಂಗ್ರೆಸ್ ವಿರುದ್ಧ ಅಸಮಾಧಾನಗೊಂಡಾಗ ಅವರನ್ನು ಸಮಾಧಾನಗೊಳಿಸಿ ಪಕ್ಷವನ್ನು ಗೆಲ್ಲಿಸಿಕೊಂಡು ಬರುವಲ್ಲಿ ಇವರ ಪಾತ್ರವನ್ನು ಅಲ್ಲಗೆಳೆಯುವಂತಿಲ್ಲ. ಯಾವುದೇ ಸ್ಥಾನವಾದರೂ ಶಾಂತವಾಗಿ ಕಾರ್ಯನಿರ್ವಹಿಸುತ್ತಾ ಬಂದಿರುವ ಸಜ್ಜನ ರಾಜಕಾರಣಿ ಎಂದೇ ಸಲಿಂ ಹೆಸರಾಗಿದ್ದಾರೆ. ಈ ಸಲ ಮಂತ್ರಿಗಿರಿ ಸಿಕ್ಕೇ ಸಿಗುತ್ತದೆ ಎಂಬ ಭರವಸೆ ಅವರ ಬೆಂಬಲಿಗರದ್ದಾಗಿದೆ.

**ರೈತನಾಯಕನಿಗೆ ಒಲಿಯುವುದೇ ಪಟ್ಟ**

ಧಾರವಾಡ ಜಿಲ್ಲೆಯಿಂದ ನವಲಗುಂದ ಕ್ಷೇತ್ರದ ಶಾಸಕ ಎನ್. ಹೆಚ್ ಕೋನರಡ್ಡಿ ಅವರ ಹೆಸರು ಸಚಿವ ಸ್ಥಾನಕ್ಕೆ ಬಲವಾಗಿ ಕೇಳಿ ಬರುತ್ತಿದೆ. ನಾಲ್ಕೂವರೆ ದಶಕಗಳಿಂದ ರೈತಪರ ಹೋರಾಟ, ನೀರಾವರಿ ಹೋರಾಟ, ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡು ಹೋರಾಟದ ಹಾದಿಯಲ್ಲಿ ಸುದೀರ್ಘ ಕಾಲ ಸಾಗಿ ಬಂದಿರುವ ಎನ್. ಹೆಚ್ ಕೋನರಡ್ಡಿ ಅವರಿಗೆ ಈ ಕ್ಷೇತ್ರದ ಮತದಾರರು ಎರಡು ಬಾರಿ ಆಯ್ಕೆ ಮಾಡುವ ಮೂಲಕ 'ಜನನಾಯಕ'ನ ಪಟ್ಟ ನೀಡಿದ್ದಾರೆ.ಎರಡೂವರೆ ದಶಕಗಳ ಹಿಂದೆ ಕೆ. ಎನ್ ಗಡ್ಡಿ ಅವರು ಶಾಸಕರಾಗಿದ್ದ ವೇಳೆ ಈ ಕ್ಷೇತ್ರಕ್ಕೆ ಕಾಂಗ್ರೆಸ್ ಸಚಿವ ಸ್ಥಾನ ನೀಡಿತ್ತು. ನಂತರ ಎರಡೂವರೆ ದಶಕಗಳ ಬಳಿಕ ಕಾಂಗ್ರೆಸ್ ಈ ಕ್ಷೇತ್ರದಲ್ಲಿ ಅಧಿಕಾರಕ್ಕೆ ಬಂದಿರಲಿಲ್ಲ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಮನರಂಜನೆ ಮತ್ತು ಮೋಜಿನ ಒಂದು ದಿನ. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಸಂಪರ್ಕಗಳು ಮತ್ತು ಚರ್ಚೆಗಳು ಚೆನ್ನಾಗಿ ನಡೆಯದಿದ್ದಲ್ಲಿ ನೀವು ನಿಮ್ಮ ಶಾಂತತೆ ಕಳೆದುಕೊಳ್ಳಬಹುದು.

**ವೃಷಭ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ದಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ.

**ಮಿಥುನ** ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಕುಟುಂಬ ಅಥವಾ ಹತ್ತಿರದ ಸ್ನೇಹಿತರ ಜೊತೆ ಇದನ್ನು ಒಂದು ಅತ್ಯುತ್ತಮ ದಿನವಾಗಿಸಿ.

**ಕರ್ಕಾಟಕ** ನಿಮ್ಮ ಹೆಚ್ಚು ಆತ್ಮವಿಶ್ವಾಸವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಒತ್ತಡದ ದಿನದ ಹೊರತಾಗಿಯೂ ನೀವು ನಿಮ್ಮ ಚೈತನ್ಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ. ಹೂಡಿಕೆ ಶಿಫಾರಸು ಮಾಡಲಾಗಿದ್ದರೂ ಸರಿಯಾದ ಸಲಹೆ ಪಡೆಯಬೇಕು. ನಿಮ್ಮ ನೆರವು ಅಗತ್ಯವಿರುವ ಒಬ್ಬ ಸ್ನೇಹಿತರನ್ನು ಭೇಟಿ ಮಾಡಿ.

**ಸಿಂಹ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ಕನ್ಯಾ** ನಿಮ್ಮ ದೊಡ್ಡ ಆಸ್ತಿಯೆಂದರೆ ನಿಮ್ಮ ಹಾಸ್ಯಪ್ರಜ್ಞೆಯಾಗಿದೆ ಇದನ್ನು ನಿಮ್ಮ ಅನಾರೋಗ್ಯ ಗುಣಪಡಿಸಲು ಬಳಸಲು ಪ್ರಯತ್ನಿಸಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ.

**ತುಲಾ** ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ. ಈ ರಾಶಿಚಕ್ರದ ಉದ್ಯಮಿಗಳು, ಇಂದು ನಿಮ್ಮ ಬಳಿ ಹಣವನ್ನು ಕೇಳುತ್ತಾರೆ.

**ವೃಶ್ಚಿಕ** ನಿನಿಮ್ಮ ಮುಖದಲ್ಲಿ ನಿರಂತರವಾದ ನಗುವಿರುವ ಮತ್ತು ಅಪರಿಚಿತರೂ ಪರಿಚಿತರಂತೆ ತೋರುವ ಒಂದು ದಿನ. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆಪಡುವಂತೆ ಮಾಡಬಹುದು.

**ಧನಸ್ಸು** ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ, ಇದು ಜೀವನದ ಸುಗಂಧವನ್ನು ಹಾಳುಮಾಡುವ ಹಾಗೂ ಒಂದು ಸಮೃದ್ಧ ಜೀವನವನ್ನು ನಡೆಸುವ ಬಯಕೆಯನ್ನು ಸಾಯಿಸುವ ನೀಚ ಚಿಂತನೆಯಾಗಿದೆ.

**ಮಕರ** ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಈ ರಾಶಿಚಕ್ರದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ಯಾವುದೇ ವಿಷಯಕ್ಕೆ ಹಣವನ್ನು ಖರ್ಚು ಮಾಡಬೇಕಾಗಬಹುದು. ಇತ್ತೀಚೆಗೆ ನಿಮ್ಮ ವೈಯಕ್ತಿಕ ಜೀವನ ನಿಮ್ಮ ಗಮನದ ಕೇಂದ್ರಬಿಂದುವಾಗಿದೆ ಇಂದು ನೀವು ಸಾಮಾಜಿಕ ಕೆಲಸ, ದಾನದ ಮೇಲೆ ಗಮನ ಹರಿಸುತ್ತೀರಿ.

**ಕುಂಭ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟುಮಾಡುತ್ತದೆ. ಯಾವುದಾದರೂ ಐತಿಹಾಸಿಕ ಸ್ಮಾರಕಕ್ಕೆ ಒಂದು ಸಣ್ಣ ಪ್ರಯಾಣವನ್ನು ಯೋಜಿಸಿ.

**ಮೀನ** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ.

# ವೈರಲ್ ಆಡಿಯೋ ಸತ್ಯಕ್ಕೆ ದೂರವಾದ ಮಾತು, ಷಡ್ಯಂತ್ರ

• ಉದಯವಾಹಿನಿ, ದಾವಣಗೆರೆ

ದಾವಣಗೆರೆ ದಕ್ಷಿಣ ಮತ ಕ್ಷೇತ್ರದ ಉಪಚುನಾವಣೆ ವೇಳೆ ಮಾತನಾಡಿದ್ದಾರೆ ಎನ್ನಲ್ಲಾದ ಆಡಿಯೋವೊಂದು ವೈರಲ್ ಆಗಿದೆ. ಮಾಜಿ ಸಚಿವ ಜಮೀರ್ ಅಹ್ಮದ್ ಖಾನ್ ಹಾಗೂ ಕೆಎಂಡಿಸಿ ಮಾಜಿ ನಿರ್ದೇಶಕ ಮೊಹಮ್ಮದ್ ಸಿರಾಜ್ ಅವರ ನಡುವೆ ನಡೆದಿದೆ ಎನ್ನಲಾದ ಸಂಭಾಷಣೆ ರಾಜ್ಯ ರಾಜಕೀಯದಲ್ಲಿ ಬಿರುಗಾಳಿ ಎಬ್ಬಿಸಿದೆ. ಈ ಕುರಿತು ಕೆಎಂಡಿಸಿ ಮಾಜಿ ನಿರ್ದೇಶಕ ಮೊಹಮ್ಮದ್ ಸಿರಾಜ್ ಮಾತನಾಡಿ, ಮಾಧ್ಯಮದಲ್ಲಿ ಬಂದ ಬಳಿಕವೇ ನನಗೆ ಗೊತ್ತಾಗಿದೆ. ಸಾಮಾಜಿಕ ಜಾಲತಾಣದಲ್ಲಿ


ಉದಯವಾಹಿನಿ ಚಿತ್ರ

ಆಡಿಯೋ ವೈರಲ್ ಆಗಿದೆ. ಇದು ಸತ್ಯಕ್ಕೆ ದೂರವಾದ ಮಾತು. ಇದರ ಬಗ್ಗೆ ನಾನು ಜಮೀರ್ ಸಾಹೇಬ್ರು ಯಾವಾಗಲು ಮಾತನಾಡಿಲ್ಲ. ಜಮೀರ್ ಸಾಹೇಬ್ರ ಜೊತೆ ದಾವಣಗೆರೆ ದಕ್ಷಿಣ ಟಿಕೆಟ್ ಬಗ್ಗೆ ಮೂಡಿದ್ದ ಭಿನ್ನಮತವನ್ನು ಸರಿ ಮಾಡುವ ಬಗ್ಗೆ ಮಾತನಾಡಿದ್ದೆವು. ಇದರ ಹಿಂದೆ ಯಾರ ಕೈವಾಡ ಇದೆ. ಯಾರು ವೈರಲ್ ಮಾಡಿದ್ದಾರೆ ಎಂಬುದು ಇವತ್ತಿಲ್ಲ, ನಾಳೆ ತಿಳಿದು ಬರಲಿದೆ. ನಾನು ಯಾವಾಗಲೂ ಈ ರೀತಿ ಮಾತನಾಡಿಲ್ಲ, ಜಮೀರ್ ಸಾಹೇಬ್ರು ಕೂಡ ಈ ರೀತಿ ಯಾವಾಗಲೂ ನನಗೂ ಕೇಳಿಲ್ಲ. ಶೇ.100% ಸತ್ಯಕ್ಕೆ ದೂರವಾದ ಮಾತು.

ಮೇಲ್ನೋಟಕ್ಕೆ ಇದರ ಹಿಂದೆ ಷಡ್ಯಂತ್ರ ಮಾಡಿದ್ದಾರೆ ಎಂದು ಗೊತ್ತಾಗುತ್ತಿದೆ ಎಂದು ಶಂಕೆ ವ್ಯಕ್ತಪಡಿಸಿದರು. ದಾವಣಗೆರೆ ದಕ್ಷಿಣ ಉಪಚುನಾವಣೆಯ ಬಳಿಕ ನಮ್ಮ ವಿರುದ್ಧ ಸಾಕಷ್ಟು ಷಡ್ಯಂತ್ರಗಳು ನಡೆದಿವೆ. ನನ್ನ ವಿರುದ್ಧ ಜಬ್ಬಾರ್ ಹಾಗೂ ನಸೀರ್ ಸಾಹೇಬ್ರು ಅವರನ್ನು ಷಡ್ಯಂತ್ರ ಮಾಡಿ ಪಕ್ಷದಿಂದ ಹೊರಹಾಕಿದ್ರು.

ಅಂದಿನಿಂದ ನಮ್ಮ ವಿರುದ್ಧ ಪಿತೂರಿ ನಡೆಯುತ್ತಲೇ ಇದೆ. ಯಾರು ಇದನ್ನು ವೈರಲ್ ಮಾಡಿದ್ರು ಅನ್ನೋದನ್ನು ಬಹಿರಂಗಪಡಿಸಲಿ ಎಂದು ಅವರು ಒತ್ತಾಯಿಸಿದರು. ಜಮೀರ್ ಅಹ್ಮದ್ ಅವರ ವಿರುದ್ಧ ಏನೇ ಷಡ್ಯಂತ್ರ ಮಾಡಿದ್ರೂ ಏನೂ ನಡೆಯಲ್ಲ.

# ಅಂಬೇಡ್ಕರ್ ಆದರ್ಶಗಳನ್ನು ಯುವಜನತೆ ಅಳವಡಿಸಿಕೊಳ್ಳಬೇಕು

• ಉದಯವಾಹಿನಿ, ಜಮಖಂಡಿ

ತಾಲ್ಲೂಕಿನ ಗೋಠೆ ಗ್ರಾಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪಂಚಲೋಹದ ಪ್ರತಿಮೆ ಲೋಕಾರ್ಪಣೆ ಹಾಗೂ ಬುದ್ಧ ವಿಹಾರ ನಿರ್ಮಾಣ ಸಮಿತಿಯ ಆಶ್ರಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮವು ಸಾವಿರಾರು ಜನರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅಬಕಾರಿ ಆಯುಕ್ತ ಫಕೀರಪ್ಪ ಚಲವಾದಿ ಅವರು, ಸ್ವಾತಂತ್ರ್ಯಾನಂತರ ಹಲವು ದಶಕಗಳ ಬಳಿಕ ಗ್ರಾಮದಲ್ಲಿ ಅಂಬೇಡ್ಕರ್ ಅವರ ಪಂಚಲೋಹದ ಪ್ರತಿಮೆ ಸ್ಥಾಪನೆಯಾಗಿರುವುದು ಸಂತಸದ ಸಂಗತಿ ಎಂದರು. ಡಾ. ಅಂಬೇಡ್ಕರ್ ಅವರು ದೇಶಕ್ಕೆ ನೀಡಿರುವ ಸಂವಿಧಾನ, ಮತದಾನದ ಹಕ್ಕು ಹಾಗೂ ಸಾಮಾಜಿಕ ನ್ಯಾಯದ ಸಂದೇಶಗಳು ಇಂದಿಗೂ ಪ್ರಸ್ತುತವಾಗಿದ್ದು, ಯುವಜನತೆ ಅವುಗಳನ್ನು ಅರ್ಥೈಸಿಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಅಂಬೇಡ್ಕರ್ ಚಿಂತಕ ಬಿ. ಗೋಪಾಲ್ ಅವರು ಮಾತನಾಡಿ, ಡಾ. ಅಂಬೇಡ್ಕರ್ ಅವರ ಹೋರಾಟ, ಸಂವಿಧಾನ ರಚನೆಯಲ್ಲಿ ಅವರ ಪಾತ್ರ, ಶಿಕ್ಷಣದ ಮಹತ್ವ ಹಾಗೂ ಸಮಾನತೆಯ ಸಮಾಜ ನಿರ್ಮಾಣದ ಕುರಿತ ಚಿಂತನೆಗಳನ್ನು ವಿವರಿಸಿದರು. ಅಂಬೇಡ್ಕರ್ ಅವರನ್ನು ಕೇವಲ ಜಯಂತಿ ಹಾಗೂ ಪ್ರತಿಮೆಗಳಿಗೆ ಸೀಮಿತಗೊಳಿಸದೆ, ಅವರ ಬರಹಗಳು ಮತ್ತು ವಿಚಾರಧಾರೆಗಳನ್ನು ಅಧ್ಯಯನ ಮಾಡುವ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಾಜಿ ಶಾಸಕ ಆನಂದ ನ್ಯಾಮಗೌಡ ಅವರು ಮಾತನಾಡಿ, ತಮ್ಮ ತಂದೆ ದಿವಂಗತ ಸಿದ್ದು ನ್ಯಾಮಗೌಡ ಅವರು ಗ್ರಾಮದಲ್ಲಿ ಅಂಬೇಡ್ಕರ್ ವೃತ್ತ ಹಾಗೂ ಪ್ರತಿಮೆ ನಿರ್ಮಾಣವಾಗಬೇಕು


ಉದಯವಾಹಿನಿ ಚಿತ್ರ

ಎಂಬ ಕನಸು ಕಂಡಿದ್ದರು. ಇಂದು ಆ ಕನಸು ನನಸಾಗಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು. ಬಾಬಾಸಾಹೇಬ್ ಅಂಬೇಡ್ಕರ್ ಅವರು ಅನುಭವಿಸಿದ ಸಂಕಷ್ಟಗಳ ನಡುವೆಯೂ ಶಿಕ್ಷಣದ ಮೂಲಕ ವಿಶ್ವದ ಶ್ರೇಷ್ಠ ವ್ಯಕ್ತಿಗಳಲ್ಲಿ ಒಬ್ಬರಾಗಿದ್ದು, ಇಂದಿನ ಪೀಳಿಗೆ ಶಿಕ್ಷಣವನ್ನು ಜೀವನದ ಅಸ್ತ್ರವನ್ನಾಗಿ ಮಾಡಿಕೊಂಡು ಮುಂದೆ ಸಾಗಬೇಕು ಎಂದು ಸಲಹೆ ನೀಡಿದರು.

ಆಶೀರ್ವಚನ ನೀಡಿದ ಪೂಜ್ಯ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ಅವರು, ಡಾ. ಬಿ.ಆರ್. ಅಂಬೇಡ್ಕರ್ ಅವರು ಕೇವಲ ಒಂದು ಸಮುದಾಯದ ನಾಯಕರಲ್ಲ, ಇಡೀ ರಾಷ್ಟ್ರದ ಸಮಾನತೆ, ಸಾಮಾಜಿಕ ನ್ಯಾಯ ಹಾಗೂ ಸಂವಿಧಾನದ ಶಿಲ್ಪಿ ಎಂದು ಬಣ್ಣಿಸಿದರು. ಭಾರತದ ಏಕತೆ, ಸಮಗ್ರತೆ ಹಾಗೂ ಪ್ರಜಾಪ್ರಭುತ್ವದ ಅಡಿಪಾಯ ಸಂವಿಧಾನವಾಗಿದ್ದು, ಅದನ್ನು ದೇಶಕ್ಕೆ ನೀಡಿದ ಮಹಾನ್ ವ್ಯಕ್ತಿ ಅಂಬೇಡ್ಕರ್ ಎಂದು ಹೇಳಿದರು.

ಅಂಬೇಡ್ಕರ್ ಅವರು ಪುಸ್ತಕಗಳಲ್ಲಿ, ಜ್ಞಾನದಲ್ಲಿ ಹಾಗೂ ಅವರ ಚಿಂತನೆಗಳಲ್ಲಿ ಜೀವಂತವಾಗಿದ್ದಾರೆ. ಪ್ರತಿಯೊಂದು ಕುಟುಂಬವೂ ಮಕ್ಕಳಿಗೆ ಶಿಕ್ಷಣ ನೀಡಿ ಅವರನ್ನು ಅಧಿಕಾರಿಗಳು, ನ್ಯಾಯಾಧೀಶರು, ವೈದ್ಯರು ಹಾಗೂ ಇಂಜಿನಿಯರ್ಗಳಾಗಿ ರೂಪಿಸುವ ಮೂಲಕ ಅಂಬೇಡ್ಕರ್ ಅವರ ಕನಸಿನ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಹೇಳಿದರು.

ಮದ್ಯಪಾನ ಸೇರಿದಂತೆ ಸಮಾಜವನ್ನು ಹಾಳು ಮಾಡುವ ದುಶ್ಚಟಗಳಿಂದ ದೂರವಿದ್ದು, ಶಿಕ್ಷಣ, ಸಂವಿಧಾನ ಮತ್ತು ಮಾನವೀಯ ಮೌಲ್ಯಗಳತ್ತ ಯುವಕರು ಮುಖ ಮಾಡಬೇಕು. ಅಂಬೇಡ್ಕರ್ ಅವರ ವಿಚಾರಧಾರೆಗಳು ಸಮಾಜದಲ್ಲಿ ಮತ್ತಷ್ಟು ವಿಸ್ತಾರವಾಗಬೇಕು ಎಂದು ಸ್ವಾಮೀಜಿ ಕರೆ ನೀಡಿದರು.

> ಅಂಬೇಡ್ಕರ್ ಅವರು ದೇಶದ ಪ್ರತಿಯೊಬ್ಬ ನಾಗರಿಕನಿಗೂ ಮತದಾನದ ಹಕ್ಕು, ಶಿಕ್ಷಣದ ಅವಕಾಶ ಹಾಗೂ ಸಾಮಾಜಿಕ ನ್ಯಾಯ ದೊರಕುವಂತೆ ಮಾಡಿದ ಮಹಾನ್ ಚಿಂತಕರಾಗಿದ್ದಾರೆ. ಅವರ ಪ್ರತಿಮೆಯನ್ನು ಸ್ಥಾಪಿಸುವುದಕ್ಕಿಂತ ಅವರ ಚಿಂತನೆಗಳು, ಆದರ್ಶಗಳು ಹಾಗೂ ಜ್ಞಾನವನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಮುಖ್ಯವಾಗಿದೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

> ಅಂಬೇಡ್ಕರ್ ಅವರು ಜೀವನದುದ್ದಕ್ಕೂ ಶಿಕ್ಷಣಕ್ಕಾಗಿ ಹೋರಾಟ ನಡೆಸಿದ್ದು, ಜ್ಞಾನವೇ ಮನುಷ್ಯನ ನಿಜವಾದ ಶಕ್ತಿ ಎಂಬುದನ್ನು ತಮ್ಮ ಬದುಕಿನ ಮೂಲಕ ತೋರಿಸಿಕೊಟ್ಟಿದ್ದಾರೆ. ಆದ್ದರಿಂದ ಯುವಕರು ಹಾಗೂ ವಿದ್ಯಾರ್ಥಿಗಳು ಹೆಚ್ಚು ಹೆಚ್ಚು ಓದುವ ಅಭ್ಯಾಸ ಬೆಳೆಸಿಕೊಂಡು ಉನ್ನತ ಶಿಕ್ಷಣ ಪಡೆದು ಸಮಾಜದಲ್ಲಿ ಉತ್ತಮ ಸ್ಥಾನಮಾನ ಗಳಿಸಬೇಕು ಎಂದು ಕರೆ ನೀಡಿದರು. ಜ್ಞಾನಪ್ರಕಾಶ ಸ್ವಾಮೀಜಿ

# ರಸಗೊಬ್ಬರಕ್ಕೆ ಪಥ ಕೊಡದ ರೈಲ್ವೆ ಇಲಾಖೆ!

• ಉದಯವಾಹಿನಿ, ಬಳ್ಳಾರಿ

ಬಳ್ಳಾರಿ ರೈಲು ನಿಲ್ದಾಣದಲ್ಲಿ ರಸಗೊಬ್ಬರ ಸರಬರಾಜಿನ ಒತ್ತಡವನ್ನು ಕಡಿಮೆ ಮಾಡಲು 6ನೇ ರೈಲ್ವೆ ಪಥವನ್ನು ಬಳಸಿಕೊಳ್ಳಲು ಅನುಮತಿ ನೀಡಬೇಕು ಎಂಬ ಜಿಲ್ಲಾಡಳಿತದ ಮನವಿಗೆ ನೈರುತ್ಯ ರೈಲ್ವೆ ಇಲಾಖೆಯು ತಾಂತ್ರಿಕ ಕಾರಣ ಮುಂದಿಟ್ಟಿದ್ದು, ಪರ್ಯಾಯ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ. ಜನ ಸಂಗ್ರಾಮ ಪರಿಷತ್‌ನ ಮುಖಂಡ, ಸಾಮಾಜಿಕ ಹೋರಾಟಗಾರ ಸಂಡೂರಿನ ಶ್ರೀಶೈಲ ಆಲದಹಳ್ಳಿ ಅವರು ಮಾಹಿತಿ ಹಕ್ಕು ಕಾಯ್ದೆಯಡಿ ಅಡಿ ಸಲ್ಲಿಸಿದ್ದ ಅರ್ಜಿಗೆ ರೈಲ್ವೆ ಇಲಾಖೆ ಇತ್ತೀಚೆಗೆ ನೀಡಿರುವ ಉತ್ತರದಿಂದ ಈ ಸಂಗತಿ ಬಯಲಾಗಿದೆ. ಜಿಲ್ಲೆಯಲ್ಲಿ ರಸಗೊಬ್ಬರ ವಿತರಣೆಯ ಸುಗಮ ಕಾರ್ಯಾಚರಣೆಗಾಗಿ ರೈಲ್ವೆ ಮತ್ತು ಜಿಲ್ಲಾಡಳಿತದ ನಡುವೆ ಸಮನ್ವಯದ ಅಗತ್ಯವಿದೆ ಎಂಬುದು ಲಭ್ಯ ದಾಖಲೆಗಳಿಂದ ಗೊತ್ತಾಗಿದೆ. ನಿಲ್ದಾಣದ 6 ಮತ್ತು 8ನೇ ಪಥಗಳಲ್ಲಿ ರಸಗೊಬ್ಬರ ಇಳಿಸಲು (ಅನ್‌ಲೋಡ್) ಅನುಮತಿ ನೀಡುವಂತೆ 2025ರ ಜುಲೈ 18ರಂದು ಅಂದಿನ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರ ಅವರು ನೈರುತ್ಯ ರೈಲ್ವೆಗೆ ಪತ್ರ ಬರೆದು ಕೋರಿದ್ದರು. ಪ್ರಸ್ತುತ ಬಳ್ಳಾರಿಯಲ್ಲಿ ಕೇವಲ 8ನೇ ಪಥವನ್ನು ಮಾತ್ರ ಸರಕು ಸಾಗಣೆಗೆ ಬಳಸಲಾಗುತ್ತಿದೆ. **ತಾಂತ್ರಿಕ ಅಡ್ಡಿ:** ಜಿಲ್ಲಾಧಿಕಾರಿ ಮನವಿಗೆ ಉತ್ತರಿಸಿರುವ ಹುಬ್ಬಳ್ಳಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರು, 6ನೇ ಪಥವನ್ನು ಸರಕು ಸಾಗಣೆಗೆ ಕೊಟ್ಟರೆ ತೊಂದರೆಯಾಗಲಿದೆ ಎಂದು ಸಮಸ್ಯೆಯ ಪಟ್ಟಿ ನೀಡಿದೆ. 5, 6 ಮತ್ತು 7ನೇ ಪಥಗಳನ್ನು ಪ್ರಸ್ತುತ ಪ್ರಯಾಣಿಕ ರೈಲುಗಳ ನಿಲುಗಡೆಗೆ ಮತ್ತು ಕ್ರಾಸಿಂಗ್‌ಗಾಗಿ ಬಳಸಲಾಗುತ್ತಿದೆ. ಒಂದು ವೇಳೆ 6ನೇ ಪಥದಲ್ಲಿ ರಸಗೊಬ್ಬರ ಇಳಿಸಲು ಲಾರಿಗಳನ್ನು ನಿಲ್ಲಿಸಿದರೆ, 7 ಮತ್ತು 8ನೇ ಪಥದ ನಡುವಿನ ರಸ್ತೆ ಸಂಚಾರ ಬಂದ್ ಆಗುತ್ತದೆ.

# ಜೂನ್ 8ರಂದು ಆಲಮಟ್ಟಿಯಲ್ಲಿ ಬೃಹತ್ ರೈತ ಹೋರಾಟ

• ಉದಯವಾಹಿನಿ, ಮುದ್ದೇಬಿಹಾಳ

ಅಧಿಕಾರದಲ್ಲಿದ್ದಾಗ ರೈತರಿಗೆ ಅನ್ಯಾಯ ಮಾಡುವ ರಾಜಕೀಯ ಪಕ್ಷಗಳು, ಅಧಿಕಾರ ಕಳೆದುಕೊಂಡಾಗ ಮಾತ್ರ ರೈತಪರ ಹೋರಾಟದ ನಾಟಕವಾಡುತ್ತವೆ. ಉತ್ತರ ಕರ್ನಾಟಕದ ಸಮಗ್ರ ನೀರಾವರಿ ಯೋಜನೆಗಳು ನೆನೆಗುದಿಗೆ ಬೀಳಲು ಇಲ್ಲಿನ ರಾಜಕೀಯ ನಾಯಕರ ಇಚ್ಛಾಶಕ್ತಿಯ ಕೊರತೆಯೇ ಪ್ರಮುಖ ಕಾರಣ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಉಪಾಧ್ಯಕ್ಷ ಶಾಂತಗೌಡ ಪಾಟೀಲ ನಡಹಳ್ಳಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಸೋಮವಾರ ಪಟ್ಟಣದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯನ್ನು


ಉದಯವಾಹಿನಿ ಚಿತ್ರ

ಉದ್ದೇಶಿಸಿ ಅವರು ಮಾತನಾಡಿದರು.

ನಾಗರಬೆಟ್ಟ ಏತ ನೀರಾವರಿ ಯೋಜನೆಯನ್ನು ಪೂರ್ಣಗೊಳಿಸಿ ಕಾಲುವೆಗಳಿಗೆ ನೀರು ಹರಿಸುವಂತೆ ಆಗ್ರಹಿಸಿ, ರೈತ ಸಂಘದ ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ ಅವರ ನೇತೃತ್ವದಲ್ಲಿ ಜೂನ್ 8ರಂದು ಆಲಮಟ್ಟಿಯಲ್ಲಿ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗಿದೆ. ಆಗಸ್ಟ್ 1ರೊಳಗೆ ಕಾಮಗಾರಿ ಸಂಪೂರ್ಣ ಮುಗಿದು ನೀರು ಹರಿಸಬೇಕು ಎಂದು ಅವರು ಸರ್ಕಾರಕ್ಕೆ ಗಡುವು ನೀಡಿದರು. ನಾಗರಬೆಟ್ಟ ಏತ ನೀರಾವರಿ ಯೋಜನೆಗೆ 14 ಹಳ್ಳಿಗಳ 346 ಎಕರೆ ಜಮೀನು ಬಳಕೆಯಾಗಿದೆ. ಈ ಪೈಕಿ ಕೇವಲ 111 ಎಕರೆಗೆ ಮಾತ್ರ ಅವಾರ್ಡ್ ಆಗಿದ್ದು, ಉಳಿದ ಜಮೀನಿಗೆ ತಕ್ಷಣ ಅವಾರ್ಡ್ ಪ್ರಕ್ರಿಯೆ ಪೂರ್ಣಗೊಳಿಸಬೇಕು. ಭೂಮಿ ಕಳೆದುಕೊಂಡ ರೈತರಿಗೆ ಇದುವರೆಗೆ ಅಂದಾಜು ರೂ. 7.41 ಕೋಟಿ ಪರಿಹಾರ ನೀಡಲಾಗಿದೆ. ಬಾಕಿ ಉಳಿದಿರುವ ರೂ. 46 ಕೋಟಿ ಪರಿಹಾರವನ್ನು ಕೂಡಲೇ ವಿತರಿಸಿ, ರೈತರ ದಾರಿ ತಪ್ಪಿಸುವ ಕೆಲಸ ನಿಲ್ಲಿಸಬೇಕು.

ಬಾಕಿ ಉಳಿದಿರುವ ಕಾಮಗಾರಿಗಳಿಗೆ ಕೂಡಲೇ ಎಫ್.ಎಸ್.ಎಲ್ ಟೆಂಡರ್ ಕರೆಯಬೇಕು.

# ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ಎಸ್‌ಯುಸಿಐ ಪ್ರತಿಭಟನೆ

• ಉದಯವಾಹಿನಿ,ಕಲಬುರಗಿ

ಕೇಂದ್ರ ಬಿಜೆಪಿ ಸರ್ಕಾರ ಕಳೆದ 10–12 ದಿನಗಳಲ್ಲಿ 5 ಬಾರಿ ಪೆಟ್ರೋಲ್ ಮತ್ತು ಡೀಸೆಲ್ ದರಗಳನ್ನು ಏರಿಕೆ ಮಾಡಿರುವ ಕ್ರಮವನ್ನು ಖಂಡಿಸಿ ಎಸ್‌ಯುಸಿಐ ಕಮ್ಯುನಿಸ್ಟ್ ಪಕ್ಷದ ಜಿಲ್ಲಾ ಸಮಿತಿಯು ಪ್ರತಿಭಟನೆ ನಡೆಸಿತು. ನಗರದ ಎಸ್.ವಿ.ಪಿ ವೃತ್ತದ ಬಳಿ ಸೇರಿದ ಪ್ರತಿಭಟನಾಕಾರರು ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಸೇರಿದಂತೆ ಇಂಧನ ದರ ಏರಿಕೆಯನ್ನು ವಾಪಸ್ ಪಡೆಯಲು ಆಗ್ರಹಿಸಿದರು.

ಪಶ್ಚಿಮ ಏಷ್ಯಾದ ಯುದ್ಧದ ಕಾರಣದಿಂದ ಕಚ್ಚಾತೈಲದ ಬೆಲೆ ಏರಿಕೆಯಾಗಿದೆ, ಈ ಏರಿಕೆಗೆ ತಕ್ಕಂತೆ ತೈಲ ಕಂಪನಿಗಳು ದರ ಪರಿಷ್ಕರಣೆ ಮಾಡಿವೆ ಎಂಬುದಾಗಿ ಕೇಂದ್ರ ಸರ್ಕಾರ ಸಮರ್ಥನೆ ನೀಡುತ್ತಿದೆ. ಆದರೆ ಯುದ್ಧ ಆರಂಭವಾಗಿದ್ದು ಫೆಬ್ರವರಿ 28ರಂದು ಪಂಚರಾಜ್ಯಗಳ ಚುನಾವಣೆಯ ಫಲಿತಾಂಶ ಬರುವವರೆಗೆ ದರ ಏರಿಕೆಯನ್ನು ಕಂಪನಿಗಳೇ ತಡೆ ಹಿಡಿದವೇ ಎಂಬುದಕ್ಕೆ ಬಿಜೆಪಿಯೇ ಉತ್ತರಿಸಬೇಕು. ಸಾಲದೆಂಬಂತೆ ಅಡುಗೆ ಅನಿಲ, ಸಿಎನ್‌ಜಿಗಳ ದರವನ್ನು ಕೂಡ ಏರಿಕೆ ಮಾಡಲಾಗಿದೆ. ಇದರಿಂದ ಜನಸಾಮಾನ್ಯರು, ಹೋಟೆಲ್ ಉದ್ಯಮಿಗಳು, ಆಟೋ ಚಾಲಕರು ಸೇರಿದಂತೆ ಎಲ್ಲರಿಗೂ ಹೊರೆಯಾಗಿದೆ. ಈಗ ಜಾಗತಿಕ ಮಾರುಕಟ್ಟೆಯ ದರದ ನೆಪ ನೀಡುವ ಕೇಂದ್ರ ಸರ್ಕಾರ, ಕೋವಿಡ್ ಮತ್ತು ನಂತರದ ಅವಧಿಯಲ್ಲಿ ಕಚ್ಚಾತೈಲದ ಬೆಲೆ ಕುಸಿತವಾದಾಗ, ಅಥವಾ ರಷ್ಯಾ ದೇಶದಿಂದ ರಿಯಾಯಿತಿ ದರದಲ್ಲಿ ಖರೀದಿ ಮಾಡಿದಾಗ ಅದರ ಪ್ರಯೋಜನವನ್ನು ದೇಶದ ಜನರಿಗೆ ಕೊಡಲಿಲ್ಲ ಏಕೆ? ಬದಲಿಗೆ ಕೇಂದ್ರದ ಅಬಕಾರಿ ಸುಂಕ ಏರಿಕೆ ಮಾಡಲಾಯಿತು.

ಕಳೆದ 12 ವರ್ಷಗಳ ಬಿಜೆಪಿ ಆಳ್ವಿಕೆಯಲ್ಲಿ ಕೇಂದ್ರ ಸರ್ಕಾರವು ಪೆಟ್ರೋಲ್, ಡೀಸೆಲ್ ಮೇಲೆ ರೂ. 43 ಲಕ್ಷ ಕೋಟಿಯಷ್ಟು ತೆರಿಗೆಯನ್ನು ಜನರಿಂದ ಸುಲಿಗೆ ಮಾಡಿದೆ. ಪೆಟ್ರೋಲ್, ಡೀಸೆಲ್ ದರದಲ್ಲಿ ಸುಮಾರು ಅರ್ಧದಷ್ಟು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ತೆರಿಗೆಯೇ ಇದೆ. ತೈಲ ಕಂಪನಿಗಳ ಲಾಭ, ಡೀಲರ್ಗಳ ಕಮಿಷನ್ ಬಿಟ್ಟು ಕೂಡ, ಗ್ರಾಹಕರು ಕೇಂದ್ರದ ತೆರಿಗೆ ರೂ. 20 ಮತ್ತು ರಾಜ್ಯದ ತೆರಿಗೆ ರೂ. 25ನ್ನು ಪಾವತಿಸುತ್ತಿದ್ದಾರೆ.

ಬಿಜೆಪಿ ಮತ್ತು ಕಾಂಗ್ರೆಸ್ ಸರ್ಕಾರಗಳು ಪರಸ್ಪರ ದೂಷಿಸುತ್ತಾ ಜನರನ್ನು ಮೂರ್ಖರನ್ನಾಗಿ ಮಾಡುತ್ತಿವೆ.

# ಮುಧೋಳ ಗ್ರಾಮದಲ್ಲಿ ಕರಡಿ ಪ್ರತ್ಯಕ್ಷ ಗ್ರಾಮಸ್ಥರಲ್ಲಿ ಹೆಚ್ಚಿದ ಆತಂಕ

• ಉದಯವಾಹಿನಿ, ಯಲಬುರ್ಗಾ

ತಾಲ್ಲೂಕಿನ ಮುಧೋಳ ಗ್ರಾಮದ ಹೊರವಲಯದಲ್ಲಿ ಸೋಮವಾರ ಬೆಳ್ಳಂಬೆಳಗ್ಗೆ 6:00 ಸುಮಾರಿಗೆ ದೇವಪ್ಪ ಹಿರೇಹಾಳ ಅವರು ಬೆಳಗಿನ ಜಾವ ಟು ವೀಲರ್ ಬೈಕ್ ಮೂಲಕ ಹೊಲಕ್ಕೆ ಹೋಗುತ್ತಿರುವಾಗ ದಾರಿಯಲ್ಲಿ ಕರಡಿ ಪಕ್ಕದ ಹೊಲದಿಂದ ರಸ್ತೆಯಲ್ಲಿ ಅಡ್ಡ ಬಂದು ಇನ್ನೊಂದು ಹೊಲದ ದಾರಿಯಿಂದ ಅಡ್ಡ ಹಿಡಿದ ಓಡಿ ಹೋಗುತ್ತಿದ್ದಾಗ ಜೊತೆಗಿರುವ ನಾಯಿಗಳು ಬೆನ್ನಟ್ಟಿ ಹೋದವು ದೇವಪ್ಪ ಎಂಬುವವರು ಕರಡಿಯೊಂದು ಪ್ರತ್ಯಕ್ಷವಾಗಿ ನೋಡಿ ಭಯದ ಆತಂಕ ಕೊಳಗಾಗಿ ಅವರು ವಾಪಸ್ ಮನೆಗೆ ಬಂದರು. ತಕ್ಷಣ ಎಚ್ಚೆತ್ತುಕೊಂಡ ಗ್ರಾಮದ ರೈತರು


ಉದಯವಾಹಿನಿ ಚಿತ್ರ

ಈ ಸುದ್ದಿಯನ್ನು ಕೊಪ್ಪಳ ಅರಣ್ಯ ಇಲಾಖೆಯ ಗಮನಕ್ಕೆ ತರಲಾಗಿದೆ.

ಸ್ಥಳಕ್ಕೆ ಬಂದ ಅರಣ್ಯ ಇಲಾಖೆ ಕಾವಲುಗಾರ ಸಿಬ್ಬಂದಿ ರಾಮಣ್ಣ ಗಡ್ಡದ ಪರಿಶೀಲನೆ ನೆಡಸಿ ಕರಡಿ ಓಡಾಡಿರುವ ಹೆಜ್ಜೆಯ ಗುರುತು ಸ್ಥಳವನ್ನು ಪರಿಶೀಲಿಸಿದ್ದಾರೆ. ಕರಡಿಯು ಪಕ್ಕದಲ್ಲಿರುವ ಸುತ್ತಮುತ್ತಲಿನ ಜಮೀನಿನಲ್ಲಿ ಅಡಗಿರುವ ಸಾಧ್ಯತೆ ಇದೆ ಎನ್ನಲಾಗಿದೆ ಎಂದರು. ಗ್ರಾಮಸ್ಥರಲ್ಲಿ ಆತಂಕ ಮನೆ ಮಾಡಿದೆ.

# ಪುನಶ್ಚೇತನ ಕಾರ್ಯಾಗಾರ ವಸತಿ ನಿಲಯಗಳಲ್ಲಿ ಉತ್ತಮ ವಾತಾವರಣ ಕಲ್ಪಿಸುವಲ್ಲಿ ಸಿಬ್ಬಂದಿಯ ಪಾತ್ರ ಮಹತ್ವದ್ದಾಗಿದೆ

• ಉದಯವಾಹಿನಿ, ಬಸವನಬಾಗೇವಾಡಿ

ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ಉಪನಿರ್ದೇಶಕ ಮಹೇಶ ಪೋತದಾರ ಅವರ ಅಧ್ಯಕ್ಷತೆಯಲ್ಲಿ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಸತಿ ನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಿ ಗ್ರೂಪ್ ಸಿಬ್ಬಂದಿಗಳಿಗೆ ಒಂದು ದಿನದ ಪುನಶ್ಚೇತನ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಹೇಶ ಪೋತದಾರ ಅವರು, ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ವಾತಾವರಣ ಕಲ್ಪಿಸುವಲ್ಲಿ ಡಿ ಗ್ರೂಪ್ ಸಿಬ್ಬಂದಿಯ ಪಾತ್ರ ಮಹತ್ವದ್ದಾಗಿದೆ. ಸಿಬ್ಬಂದಿಗಳು ತಮ್ಮ ಕರ್ತವ್ಯಗಳನ್ನು ಪ್ರಾಮಾಣಿಕವಾಗಿ ನಿರ್ವಹಿಸುವುದರ ಜೊತೆಗೆ ಸ್ವಚ್ಛತೆ ಮತ್ತು ಶಿಸ್ತು ಕಾಪಾಡುವ ಮೂಲಕ ಇಲಾಖೆಯ ಉದ್ದೇಶಗಳ ಸಾಕಾರಕ್ಕೆ ಸಹಕರಿಸಬೇಕು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ವಸತಿ ನಿಲಯಗಳ ಸುಸೂತ್ರ ನಿರ್ವಹಣೆ, ಸ್ವಚ್ಛತೆ, ವಿದ್ಯಾರ್ಥಿಗಳ ಆರೋಗ್ಯ ರಕ್ಷಣೆ, ಅಡುಗೆ ಸಿಬ್ಬಂದಿಯ ಕರ್ತವ್ಯಗಳು, ಆಹಾರದ ಗುಣಮಟ್ಟ ಕಾಪಾಡುವ ವಿಧಾನಗಳು, ಅಡುಗೆ ಕೋಣೆ ಹಾಗೂ ಊಟದ ಹಾಲ್‌ಗಳ ಶುಚಿತ್ವ, ರಾತ್ರಿ ಕಾವಲುಗಾರರು ನಿರ್ವಹಿಸಬೇಕಾದ ಜವಾಬ್ದಾರಿಗಳು ಸೇರಿದಂತೆ ವಿವಿಧ ವಿಷಯಗಳ ಕುರಿತು ಸಮಗ್ರ ಮಾಹಿತಿ ನೀಡಲಾಯಿತು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಮಂಜುಳಾ ಹಿರೇಮನಿ ಅವರು, ವಿದ್ಯಾರ್ಥಿಗಳ ಆರೋಗ್ಯ ಮತ್ತು ಸುರಕ್ಷತೆಗೆ ಆದ್ಯತೆ ನೀಡುವಂತೆ ಸಿಬ್ಬಂದಿಗಳಿಗೆ ಕರೆ ನೀಡಿದರು. ಹೊರಗುತ್ತಿಗೆ ನೌಕರರ ಸಂಘದ ಅಧ್ಯಕ್ಷ ಹುಲಗಪ್ಪ ಚಲವಾದಿ, ಕಚೇರಿ ಅಧೀಕ್ಷಕ ಮಕ್ಬೂಲ್ ಸಾಬ್ ದಫೇದಾರ ಹಾಗೂ ವಾರ್ಡನ್ ಮನು ಪತ್ತಾರ ಅವರು ಮಾತನಾಡಿ, ಸಿಬ್ಬಂದಿಗಳು ತಮ್ಮ ಕರ್ತವ್ಯಗಳನ್ನು ಸಮರ್ಪಕವಾಗಿ ನಿರ್ವಹಿಸುವುದರ ಜೊತೆಗೆ ಇಲಾಖೆಯ ನಿಯಮಗಳನ್ನು ಪಾಲಿಸಿ ವಸತಿ ನಿಲಯಗಳ ಅಭಿವೃದ್ಧಿಗೆ ಕೈಜೋಡಿಸಬೇಕೆಂದು ಸಲಹೆ ನೀಡಿದರು. ಕಾರ್ಯಾಗಾರದಲ್ಲಿ ತಾಲ್ಲೂಕಿನ ವಿವಿಧ ವಸತಿ ನಿಲಯಗಳ ಅಡುಗೆ ಸಿಬ್ಬಂದಿ, ರಾತ್ರಿ ಕಾವಲುಗಾರರು ಹಾಗೂ ಡಿ ಗ್ರೂಪ್ ಸಿಬ್ಬಂದಿಗಳು ಭಾಗವಹಿಸಿ ಉಪಯುಕ್ತ ಮಾಹಿತಿಯನ್ನು ಪಡೆದುಕೊಂಡರು.

# ಮುಂಗಾರು ಬಿತ್ತನೆಗೆ ವರುಣನ ಆಗಮನಕ್ಕೆ ಕಾಯುತ್ತಿರುವ ಅನ್ನದಾತ

## ಕೃಷಿ ಚಟುವಟಿಕೆಗಳು ಕ್ಷೀಣ | ಲಾಭಕ್ಕಿಂತ ಖರ್ಚು ಜಾಸ್ತಿ

**ಬೀದರ್ ಜಿಲ್ಲೆ,ಸುತ್ತಲಿನ ಬಹುತೇಕ ತಾಲ್ಲೂಕುಗಳಲ್ಲಿ ಮಳೆ ಸುರಿದಿದೆ.**

ಪರಮೇಶ.ಡಿ.ವಿಳಸಪೂರೆ

• ಉದಯವಾಹಿನಿ,ಬೀದರ್

ಪ್ರಸಕ್ತ ವರ್ಷ ಮುಂಗಾರು ಹಂಗಾಮಿನ ಆರಂಭದಲ್ಲಿ ಮಳೆ ಕೊರತೆ ಎದ್ದು ಕಾಣುತ್ತಿದೆ. ಮುಂಗಾರಿನ ಕೃಷಿ ಚಟುವಟಿಕೆಗಳು ಕಾಣುತ್ತಿಲ್ಲ. ನೆಪಕ್ಕೆ ಎಂಬಂತೆ ಅಲ್ಲೊಂದು, ಇಲ್ಲೊಂದು ಕೃಷಿ ಚಟುವಟಿಕೆ ನಡೆದರೂ ಬಿತ್ತನೆಗೆ ಅನುಕೂಲವಾಗುವ ಯಾವುದೇ ಪೂರಕ ವಾತಾವರಣ ಇಲ್ಲ. ವಾಡಿಕೆ ಮಳೆಗಿಂತ ಶೇ.80ರಷ್ಟು ಕೊರತೆ ಕಾಣುತ್ತದೆ. ಮುಂಗಾರು ಬಿತ್ತನೆಗೆ ರೈತರು ವರುಣನ ಆಗಮನ ನೋಡುತ್ತಿದ್ದಾರೆ. ಮುಂಗಾರು ಅವಧಿಯಲ್ಲಿ ತಾಲ್ಲೂಕಿನ ರೈತರು ಹೆಸರು ಕಾಳು, ಮೆಕ್ಕೆಜೋಳ ಬೆಳೆಯುತ್ತಾರೆ. ಆದರೆ ಬೀಜ ಬಿತ್ತನೆಗೆ ಅಗತ್ಯವಿರುವ ಮಳೆ ಸುರಿಯುತ್ತಿಲ್ಲ. ಬೀದರ್ ಜಿಲ್ಲೆ ಹಾಗೂ ಸುತ್ತಲಿನ ಬಹುತೇಕ ತಾಲ್ಲೂಕುಗಳಲ್ಲಿ ಮಳೆ ಸುರಿದಿದೆ. ಮೂರು ದಿನಗಳಿಂದ ಅಲ್ಲಲ್ಲಿ ತುಂತುರು ಮಳೆಯಾಗಿದ್ದು ರೈತರನ್ನು ಖುಷಿಗೊಳಿಸಿಲ್ಲಲ, ಕೃಷಿ ಇಲಾಖೆ ಮುಂಗಾರು ದಾಸ್ತಾನು ಬಿತ್ತನೆಗೆ ಹೆಸರು ಬೀಜ ಒದಗಿಸಲು ಎಲ್ಲಾ ಸಿದ್ಧತೆ ನಡೆಸಿದೆ.

ಜಿಲ್ಲೆಯ ಬಹುತೇಕ ರೈತ ಸಂಪರ್ಕ ಕೇಂದ್ರಗಳಲ್ಲಿ ಹೆಸರುಕಾಳು ಬೀಜದ ದಾಸ್ತಾನು ಮಾಡಿಕೊಂಡಿದೆ. ಸಾಮಾನ್ಯ ವರ್ಗದ ರೈತರಿಗೆ


ಉದಯವಾಹಿನಿ ಚಿತ್ರ

5 ಕೆಜಿ 1 ಪಾಕೀಟಿಗೆ ರೂ. 510, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ 5ಕೆಜಿ 1 ಪಾಕೀಟಿಗೆ ರೂ.447.50 ಸಿಗಲಿದೆ. ರಸಗೊಬ್ಬರ ಸಮರ್ಪಕವಾಗಿ ರೈತರಿಗೆಲ್ಲ ಸಿಗಲಿದೆ. ಆದರೆ ಮಳೆ ಆಗಬೇಕಾಗಿದೆ ಅಷ್ಟೇ ಎನ್ನುತ್ತಾರೆ ಅಧಿಕಾರಿಗಳು.

**ಲಾಭಕ್ಕಿಂತ ಖರ್ಚು ಜಾಸ್ತಿ**

ಬಿತ್ತನೆಗೆ ಬೇಕಾದ ಮಳೆ ಸುರಿಯದೇ ರೈತರನ್ನು ಚಿಂತೆಗೀಡು ಮಾಡಿದೆ. ಕಳೆದ ವರ್ಷ ಹಿಂಗಾರು, ಮುಂಗಾರು ಸಹಿತ ಬೆಳೆ ಹಾನಿ, ಕಳಪೆ ಬೀಜ, ಅಸಮರ್ಪಕ ಮಳೆ ಹೀಗೆ ಲಾಭ ನೀಡದೆ ಕೃಷಿಗಾಗಿ ಕೇವಲ ಖರ್ಚನ್ನೇ ಮಾಡಲಾಯಿತು. ಇದರಿಂದ ರೈತರಿಗೆ ನೆಮ್ಮದಿ ಇಲ್ಲದಂತಾಗಿದೆ. ಈ ಸಲ ಮುಂಗಾರು ಆರಂಭದಲ್ಲಿ ಉತ್ತಮ ಮಳೆ ಸುರಿದೀತು ಎಂಬ ಆಶಾ ಭಾವನೆಯಲ್ಲಿರುವ ರೈತರಿಗೆ ವರುಣದೇವ ಕೃಪೆ ತೋರಬೇಕಿದೆ ಎಂಬುದು ಅನ್ನದಾತರ ಆಶಯ.



**ಬಿತ್ತನೆಗೆ ಹೆಸರು ಬೀಜ ಸಿದ್ಧತೆ**

> ಮೊನ್ನೆ ಸ್ವಲ್ಪಮಟ್ಟಿಗೆ ಮಳೆಯಾಗಿದೆ. ಬಿತ್ತಿದರೆ ಹುಟ್ಟುವ ಹಸಿ ಇಲ್ಲ. ಮಳೆ ಆಗಬಹುದೆಂಬ ನಂಬಿಕೆಯ ಮೇಲೆ ಹೆಸರು ಬೀಜ ಬಿತ್ತುತ್ತಿದ್ದೇವೆ. ಈ ಬಾರಿ ಸೋಯಾ ಬೀಜ ಹೆಚ್ಚಿನ ಪ್ರಮಾಣದಲ್ಲಿ ಬಿತ್ತಬೇಕು ಎನ್ನುತ್ತಿದೇವೆ. ಮಳೆ ಆಗದೇ ಇದ್ದರೆ ಬಿತ್ತಿದ ಬೀಜ ಭೂಮಿತಾಯಿ ಪಾಲಾಗುತ್ತದೆ. ಗಣಪತಿ ವಾಸುದೇವ ಶೆಂಬೆಳ್ಳಿ ರೈತ

> ಮುಂಗಾರು ಬಿತ್ತನೆಗೆ ಬೇಕಾದ ಹೆಸರುಕಾಳು, ತೊಗರಿ ಹಾಗೂ ಸೋಯಾ ಬೀಜಗಳು ಸಮರ್ಪಕವಾಗಿ ಸಿಗಲಿದೆ. ರೈತರು ಪ್ರಸಕ್ತ ವರ್ಷದಲ್ಲಿ ಯೂರಿಯಾ ಗೊಬ್ಬರ ಬಳಕೆ ಕಡಿಮೆ ಮಾಡುವುದರ ಜೊತೆಗೆ ಸಾವಯವ ಗೊಬ್ಬರ ಬಳಕೆ ಮಾಡಬೇಕು. ಇದು ಭೂಮಿಯ ಫಲವತ್ತತೆಯನ್ನು ರಕ್ಷಿಸಲಿದೆ. ರೈತರ ಆತುರ ಮಾಡದೆ ಸರಿಯಾದ ಪ್ರಮಾಣದಲ್ಲಿ ಮಳೆಯಾದ ನಂತರ ಬಿತ್ತನೆ ಕಾರ್ಯದಲ್ಲಿ ತೊಡಗಬೇಕು. ಅಂಬ್ರೇಶ್ ಕೃಷಿ ಅಧಿಕಾರಿ ರೈತ ಸಂಪರ್ಕ ಕೇಂದ್ರ, ಸಂತಪೂರ

# ಮತಾಂತರ ತಡೆಗೆ ಜಾಗೃತಿ ಆಂದೋಲನ

• ಉದಯವಾಹಿನಿ, ಗದಗ

ಮತಾಂತರ ತಡೆಗಟ್ಟುವ ಉದ್ದೇಶದಿಂದ ತಾಂಡಾಗಳಲ್ಲಿ ಶೀಘ್ರದಲ್ಲೇ ಜಾಗೃತಿ ಕಾರ್ಯಕ್ರಮ, ಹೋರಾಟಗಳನ್ನು ಹಮ್ಮಿಕೊಳ್ಳಲಾಗುವುದು' ಎಂದು ಗೋರಸೇನಾ (ಬಂಜಾರ) ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ ಹೇಳಿದರು.

ಶಿರಹಟ್ಟಿ ತಾಲ್ಲೂಕಿನ ಮಜೂರ ತಾಂಡಾದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, 'ಸಮಾಜದಲ್ಲಿ ಧರ್ಮರಕ್ಷಣೆ, ಸಾಂಸ್ಕೃತಿಕ ಜಾಗೃತಿ ಹಾಗೂ ಮತಾಂತರ ತಡೆಗೆ ಸಂಬಂಧಿಸಿದಂತೆ ವ್ಯಾಪಕ ಜನಜಾಗೃತಿ ಮೂಡಿಸುವುದು ಸಮಾವೇಶದ ಮುಖ್ಯ ಉದ್ದೇಶವಾಗಿದೆ' ಎಂದು ತಿಳಿಸಿದರು.

'ಲಕ್ಷ್ಮೇಶ್ವರ ತಾಲ್ಲೂಕಿನ ಆದರಳ್ಳಿ ತಾಂಡಾದಲ್ಲಿ ಚರ್ಚ್ ನಿರ್ಮಾಣ ಹಾಗೂ ಮತಾಂತರದ ಆರೋಪಗಳ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು. ತಾಂಡಾಗಳಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ 'ಚರ್ಚ್ ಹಟಾವೋ–ತಾಂಡಾ ಬಚಾವೋ' ಅಭಿಯಾನ ಹಮ್ಮಿಕೊಳ್ಳುವ ಮೂಲಕ ಧರ್ಮ, ಸಂಸ್ಕೃತಿ ರಕ್ಷಣೆ ಕಾರ್ಯ ನಡೆಯಲಿದೆ. ಈ ಕುರಿತು ಸಭೆ, ಚಿಂತನೆ ನಡೆಸಲಾಗುತ್ತಿದ್ದು, ತಾಂಡಾ ಜನರ ಸಹಕಾರ ಅತ್ಯವಶ್ಯಕ' ಎಂದರು. ಕೇಶರಟ್ಟಿ ಶಂಕರಲಿಂಗ ಮಠದ ಸೋಮಲಿಂಗ ಸ್ವಾಮೀಜಿ ಮಾತನಾಡಿ, 'ಬಂಜಾರ ಸಮುದಾಯದ ಸಂಸ್ಕೃತಿ, ಪರಂಪರೆ ಹಾಗೂ ಧಾರ್ಮಿಕ ಮೌಲ್ಯಗಳನ್ನು ಉಳಿಸಿ ಬೆಳೆಸುವ ಅಗತ್ಯವಿದೆ' ಎಂದು ಹೇಳಿದರು.'ಯುವ ಸಮುದಾಯವು ದುಶ್ಚಟಗಳಿಗೆ ಬಲಿಯಾಗುತ್ತಿದ್ದು, ಅವುಗಳನ್ನು ತೊಡೆದು ಹಾಕಿ, ಯುವ ಪೀಳಿಗೆಯಲ್ಲಿ ಸಾಂಸ್ಕೃತಿಕ ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸುವ ಮೂಲಕ ಸಮಾಜವನ್ನು ಮತ್ತಷ್ಟು ಸದೃಢಗೊಳಿಸಬೇಕು' ಎಂದು ಕರೆ ನೀಡಿದರು. ಮುಂಡರಗಿ ತಾಲ್ಲೂಕಿನ ವಿರುಪಾಪುರ ತಾಂಡಾ, ಶಿರಹಟ್ಟಿ ತಾಲ್ಲೂಕಿನ ಮಳ್ಳೂರ ತಾಂಡಾ, ಛಬ್ಬಿ ತಾಂಡಾ ಸೇರಿದಂತೆ ವಿವಿಧ ತಾಂಡಾಗಳಿಗೆ ಭೇಟಿ ನೀಡಿ ಜಾಗೃತಿ ಮೂಡಿಸಿದರು.